23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 343 | ನವದೆಹಲಿ | ಬೆಲೆ ₹10 | ಜೂನ್ 18 2026, ಗುರುವಾರ



## ನಿತ್ಯ ಪಂಚಾಂಗ 18.06.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ಚೌತಿ, ಪುಷ್ಯ ನಕ್ಷತ್ರ, ವಿನಾಯಕೀ ಚತುರ್ಥಿ, ಉಮಾವತಾರ ವ್ರತ, ನಾಗನೂರು ಬೃಹನ್ಮಠ ಕಾಶೀನಾಥಶಾಸ್ತ್ರಿ ಜಯಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಬೆದರಿಕೆಗಳಿಗೆ ಹೆದರುವ ಜಾಯಮಾನ ನಮ್ಮದಲ್ಲ: ಎಚ್.ಡಿ. ಕುಮಾರಸ್ವಾಮಿ

**ಅಧಿಕಾರವಿದೆ ಎಂದು ಹೆದರಿಸಬಹುದು ಎಂದು ಭಾವಿಸಿದರೆ ಅದು ನಿಮ್ಮ ಭ್ರಮೆ**

**ರೈತರ ಭೂಮಿ ಉಳಿಸುವ ಹೋರಾಟ ತೀವ್ರಗೊಳ್ಳುತ್ತದೆ ಎಂದು ಎಚ್ಚರಿಕೆ**



**ಬೆಂಗಳೂರು, ಜೂ.17:** ರಾಜ್ಯ ರಾಜಕಾರಣದಲ್ಲಿ ಹಳೆ ಮೈಸೂರು ಭಾಗದ ಇಬ್ಬರು ಪ್ರಭಾವಿ ನಾಯಕರ ನಡುವಿನ ರಾಜಕೀಯ ಜಿದ್ದಾಜಿದ್ದಿ ಮತ್ತೊಮ್ಮೆ ತಾರಕಕ್ಕೇರಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆಗಳಿಗೆ ಕಟುವಾಗಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಇವರ ಬೆದರಿಕೆ ತಂತ್ರಗಳಿಗೆ ಯಾರೂ ಹೆದರುವುದಿಲ್ಲ ಎಂದಿದ್ದಾರೆ.

ರಾಜ್ಯದ ಇತ್ತೀಚಿನ ರಾಜಕೀಯ ಬೆಳವಣಿಗೆಗಳು ಹಾಗೂ ತನಿಖಾ ಸಂಸ್ಥೆಗಳ ನೋಟಿಸ್ ರಾಜಕಾರಣದ ಬೆನ್ನಲ್ಲೇ ಎಚ್‌ಡಿಕೆ ಆಡಿರುವ ಈ ಮಾತುಗಳು ಈಗ ಸೋಷಿಯಲ್ ಮೀಡಿಯಾದಲ್ಲಿ ಭಾರಿ ಸದ್ದು ಮಾಡುತ್ತಿವೆ.

> ನನ್ನ ಹೆಸರಿನಲ್ಲಿ 100 ಎಕರೆ ಜಮೀನಿದೆ ಎಂದು ಪೋಸ್ಟರ್ ಹಾಕಿದ್ದಾರೆ. ಆದರೆ ನನ್ನ ಹೆಸರಿನಲ್ಲಿ ಇರುವುದೇ 46 ಎಕರೆ ಭೂಮಿ. ಅದನ್ನು 40 ವರ್ಷಗಳ ಹಿಂದೆ ಕಷ್ಟಪಟ್ಟು ಖರೀದಿ ಮಾಡಿದ್ದು. ಅನಿತಾ ಕುಮಾರಸ್ವಾಮಿ ಹೆಸರಿನಲ್ಲಿ 36–37 ಎಕರೆ ಭೂಮಿ ಇದೆ. ಇದನ್ನು ಬಿಟ್ಟರೆ ಬೇರೆ ಜಮೀನಿಲ್ಲ. ನೂರು ಎಕರೆ ಎಲ್ಲಿದೆ ತೋರಿಸಲಿ.
>
> **ಎಚ್.ಡಿ. ಕುಮಾರಸ್ವಾಮಿ**
> ಕೇಂದ್ರ ಸಚಿವ

ಅಧಿಕಾರ ಕೈಯಲ್ಲಿದೆ ಎಂದು ಯಾರನ್ನೋ ಹೆದರಿಸಬಹುದು, ಬೆದರಿಸಬಹುದು ಅಂದುಕೊಂಡರೆ ಅದು ಕೇವಲ ಭ್ರಮೆ. ಇಂತಹ ಬೆದರಿಕೆಗಳಿಗೆ ಹೆದರಿ ಓಡಿಹೋಗುವ ಜಾಯಮಾನ ನಮ್ಮದಲ್ಲ. ಕಾನೂನು ಮತ್ತು ಜನತಾ ನ್ಯಾಯಾಲಯದ ಮೇಲೆ ಸಂಪೂರ್ಣ ನಂಬಿಕೆಯಿದೆ. ಇವರ ಪ್ರತಿಯೊಂದು ರಾಜಕೀಯ ತಂತ್ರಕ್ಕೂ ಜನರೇ ತಕ್ಕಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಸಿದ್ದಾರೆ.

ನಾವು ಬಿಡದಿ ಭಾಗದ ರೈತರ ಭೂಮಿ ಉಳಿಸಲು ಹೋರಾಟ ನಡೆಸುತ್ತಿದ್ದರೆ, ಇನ್ನೊಂದೆಡೆ ಕಾಂಗ್ರೆಸ್‌ನವರು ಪೋಸ್ಟರ್‌ಗಳನ್ನು ಅಂಟಿಸಿ ನಮ್ಮ ಕುಟುಂಬದ ವಿರುದ್ಧ ವಿಕೃತವಾಗಿ ಅಪಪ್ರಚಾರ ನಡೆಸುತ್ತಿದ್ದಾರೆ.

ರಾಜ್ಯದ ಮುಖ್ಯಮಂತ್ರಿಯಾದರೂ ಡಿ.ಕೆ. ಶಿವಕುಮಾರ್ ತಮ್ಮ ಹಳೆಯ ಚಾಳಿ ಬಿಟ್ಟಿಲ್ಲ ಎಂದು ಹೆಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬುಧವಾರ ಬೆಳಗ್ಗೆ ಬೆಂಗಳೂರಿನ ತಮ್ಮ ನಿವಾಸದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಎಚ್‌ಡಿಕೆ, ಸಿಎಂ ಆದ ಮೇಲಾದರೂ ಕೆಲವ ನಡವಳಿಕೆಗಳನ್ನು ಬದಲಾಯಿಸಿಕೊಳ್ಳುತ್ತಾರೆ ಎಂದುಕೊಂಡಿದ್ದೆ. ಆದರೆ, ಆ ಚಾಳಿ ಡಿ.ಕೆ. ಶಿವಕುಮಾರ್‌ಗೆ ಇನ್ನೂ ಹೋಗಿಲ್ಲ. ಕೈಲಾಗದವನ ಕೊನೆಯ ಅಸ್ತ್ರವೇ ಅಪಪ್ರಚಾರ. ನನ್ನ ಪತ್ನಿ, ನನ್ನ ಮಗ ನಿಖಿಲ್ ಫೋಟೋ ಹಾಕಿ ಪೋಸ್ಟರ್ ಅಂಟಿಸಿದ್ದಾರೆ. ವೈಯಕ್ತಿಕ ಅಪಪ್ರಚಾರಕ್ಕೆಲ್ಲ ಕುಗ್ಗಲ್ಲ, ನನ್ನ ಹೋರಾಟ ಇನ್ನು ತೀವ್ರವಾಗುತ್ತದೆ ಎಂದು ಎಚ್ಚರಿಸಿದರು.

# ಬಿಡದಿ ಟೌನ್‌ಶಿಪ್ ಯೋಜನೆ ಕೈಬಿಡಿ, ರೈತರ ಬೇಡಿಕೆ ಪರಿಗಣಿಸಿ: ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹ

**ಬೆಂಗಳೂರು, ಜೂ.17:** ಡಿ.ಕೆ.ಶಿವಕುಮಾರ್ ಅವರು ಇನ್ನು ಕೇವಲ ಒಂದೂವರೆ ವರ್ಷ ಮುಖ್ಯಮಂತ್ರಿಯಾಗಿ ಇರುತ್ತಾರೆ. ಆದ್ದರಿಂದ ಬಿಡದಿ ಟೌನ್‌ಶಿಪ್ ಯೋಜನೆಯನ್ನು ಜಾರಿ ಮಾಡಲು ಅವರಿಗೆ ಸಾಧ್ಯವಾಗುವುದಿಲ್ಲ. ರೈತರ ಬೇಡಿಕೆಯನ್ನು ಪರಿಗಣಿಸಿ ಈ ಯೋಜನೆ ಕೈ ಬಿಡಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಗ್ರಹಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆಗೆ ತೀವ್ರ ವಿರೋಧ ವ್ಯಕ್ತಪಡಿಸುತ್ತಿರುವ ರೈತರು ಹಾಗೂ ಹಾಲು ಉತ್ಪಾದಕರನ್ನು ಪ್ರತಿಪಕ್ಷ ನಾಯಕ ಆರ್.ಅಶೋಕ ಭೇಟಿ ಮಾಡಿ ಅಹವಾಲುಗಳನ್ನು ಆಲಿಸಿದರು.

ಬಳಿಕ ಮಾತನಾಡಿ, ನಾನು ರಾಜಕೀಯ ಬದುಕಿನಲ್ಲಿ ಅನೇಕ ಕಡೆ ಪ್ರವಾಸ ಮಾಡಿದ್ದೇನೆ. ಆದರೆ ಬಿಡದಿಯಲ್ಲಿರುವಷ್ಟು ಹಸಿರುಭೂಮಿ ಎಲ್ಲೂ ಇಲ್ಲ. ಈ ಭಾಗದಲ್ಲಿ ಬೆಳೆಗೆ ಸೂಕ್ತವಲ್ಲದ ಒಂದಿಂಚು ಭೂಮಿಯೂ ಇಲ್ಲ. ಹಾಲು ಉತ್ಪಾದಕ ಕೇಂದ್ರಕ್ಕೆ ಹೋದಾಗ ಪ್ರತಿದಿನ 6 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ ಹಾಗೂ ವರ್ಷಕ್ಕೆ 25 ಕೋಟಿ ರೂ. ವಹಿವಾಟು ನಡೆಯುತ್ತಿದೆ ಎಂದು ತಿಳಿದುಬಂತು. ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಪ್ರತಿವರ್ಷ 25 ಕೋಟಿ ರೂ. ರೈತರಿಗೆ ನೀಡುತ್ತಾರೆಯೇ ಬಿ.ಎಸ್.ಯಡಿಯೂರಪ್ಪ ಸಿಎಂ ಆಗಿದ್ದಾಗ ಹಾಲಿಗೆ ಸಹಾಯಧನ ನೀಡಿದ್ದರು. ಈಗ ಪರಿಹಾರ ನೀಡುತ್ತಾರೆಯೇ ಎಂದು ಪ್ರಶ್ನಿಸಿದರು.

ಈ ಭಾಗದಲ್ಲಿ ರೇಷ್ಮೆಗೆ ಸಂಬಂಧಿಸಿದ ವಹಿವಾಟಿನಿಂದ 35 ಕೋಟಿ ರೂ. ಆದಾಯ ಬರುತ್ತಿದೆ. ರೇಷ್ಮೆಹುಳಕ್ಕೆ ಬೇಕಾದ ಸೊಪ್ಪನ್ನು ವಿದೇಶದಿಂದ ತರಿಸಲು ಸಾಧ್ಯವಿಲ್ಲ. ರೇಷ್ಮೆಗೂಡುಗಳನ್ನು ಒಡೆದು ಏನು ಮಾಡಬೇಕೆಂದು ಸರ್ಕಾರವೇ ತಿಳಿಸಬೇಕು. ಇಲ್ಲಿ ಲಕ್ಷಾಂತರ ಹಸುಗಳಿದ್ದು, ಅವುಗಳನ್ನು ಕಸಾಯಿಖಾನೆಗೆ ಕಳಿಸಬೇಕೆ? ಅವುಗಳಿಗೆ ಮೇವು ಎಲ್ಲಿಂದ ಬರುತ್ತದೆ? 2 ಕೋಟಿ ರೂ. ಕೊಡುತ್ತೇನೆ ಎಂದು ಸುಲಭವಾಗಿ ಹೇಳುತ್ತಾರೆ. ಆದರೆ ಆ ಹಣವನ್ನು ಪಡೆದು ರೈತರು ಎಲ್ಲಿಗೆ ಹೋಗಬೇಕು? ಅದೇ ಹಣದಲ್ಲಿ ರೈತರಿಗೆ ಮರಳಿ ಭೂಮಿ ಪಡೆಯಲು ಸಾಧ್ಯವಿಲ್ಲ. ತಲೆಮಾರುಗಳಿಂದ ಬಂದ ಆಸ್ತಿಯನ್ನು ಈಗಿನ ಪೀಳಿಗೆ ಜನರು ಹಾಳು ಮಾಡಲು ಬಯಸುವುದಿಲ್ಲ. ಬಿಡದಿಯ ರೈತರು ನಿವೇಶನ ಬೇಕೆಂದು ಅರ್ಜಿ ಹಾಕಿದ್ದಾರೆಯೇ? ನಿವೇಶನಗಳನ್ನು ರಚಿಸಿ ಯಾರಿಗೆ ಕೊಡಲಾಗುತ್ತದೆ ಯಾವುದೋ ರಾಜ್ಯದಿಂದ ಬರುವ ಜನರಿಗೆ ಈ ನಿವೇಶನಗಳನ್ನು ನೀಡಲಾಗುತ್ತದೆ. ಯಾರಿಗೋ ನೀಡಲು ಇಲ್ಲಿನ ರೈತರು ಬೀದಿಪಾಲಾಗಬೇಕಾಗುತ್ತದೆ ಎಂದರು.

**ರಾಹುಲ್ ಗಾಂಧಿ ಬಂದು ನೋಡಲಿ**

ಜಾಲಹಳ್ಳಿಯಲ್ಲಿ ನನ್ನ ಕುಟುಂಬದ 65 ಎಕರೆ ಜಮೀನನ್ನು 65,000 ರೂ. ಗೆ ನೀಡಲಾಯಿತು. ಆ ಹಣದಲ್ಲಿ ನಯಾಪೈಸೆಯೂ ಉಳಿದಿಲ್ಲ. ಎಲ್ಲ ರೈತರ ಬದುಕು ಹೀಗೆಯೇ ಆಗುತ್ತದೆ. ಕನಕಪುರಕ್ಕೆ ಹೋದ ಡಿ.ಕೆ.ಶಿವಕುಮಾರ್, ಯಾರೂ ಜಮೀನು ಮಾರಾಟ ಮಾಡಬೇಡಿ ಎಂದು ಹೇಳಿದ್ದರು. ಆದರೆ ಬಿಡದಿಯ ಜಮೀನನ್ನು ಜನರು ಮಾರಾಟ ಮಾಡಬೇಕು ಎನ್ನುತ್ತಾರೆ. ಅಂಡಮಾನ್–ನಿಕೋಬಾರ್‌ಗೆ ಹೋದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಪರಿಸರ ನಾಶದ ಬಗ್ಗೆ ಮಾತಾಡಿದ್ದಾರೆ. ಅವರದ್ದೇ ಕಾಂಗ್ರೆಸ್ ಸರ್ಕಾರ ಬಿಡದಿಯಲ್ಲಿ ಕೃಷಿಭೂಮಿಯನ್ನು ನಾಶ ಮಾಡುತ್ತಿದೆ. ಇದನ್ನು ರಾಹುಲ್ ಗಾಂಧಿ ಬಂದು ನೋಡಬೇಕು ಎಂದರು. ಕೇಂದ್ರ ಸರ್ಕಾರದ ನಿಕೋಬಾರ್ ಯೋಜನೆಯಲ್ಲಿ ಪರಿಸರ ಉಳಿಸಬೇಕೆಂದು ಸಿಎಂ ಡಿ.ಕೆ.ಶಿವಕುಮಾರ್ ಟ್ವೀಟ್ ಮಾಡಿದ್ದು, ಈ ಯೋಜನೆ ಅಗತ್ಯವಿಲ್ಲ ಎಂದಿದ್ದಾರೆ. ಆದರೆ ಬಿಡದಿಯಲ್ಲಿ ಕೃಷಿ ಭೂಮಿ ಹಾಳು ಮಾಡುತ್ತಿದ್ದಾರೆ. ಇಲ್ಲಿ 6 ಲಕ್ಷ ತೆಂಗು ಅಡಿಕೆ ಮರಗಳಿವೆ. ಮಾವು, ಸಪೋಟ, ರೇಷ್ಮೆ, ಬಾಳೆ ಮೊದಲಾದ ಬೆಳೆಗಳಿವೆ. ಇದರಲ್ಲಿ ರೈತರ ಬದುಕೇ ಇದೆ ಎಂದರು.

ಎಚ್.ಡಿ.ಕುಮಾರಸ್ವಾಮಿ ಅವರನ್ನು ಅನುಸರಿಸುವ ಸಿಎಂ ಡಿ.ಕೆ.ಶಿವಕುಮಾರ್, ಈಗಲೂ ಅವರನ್ನೇ ಅನುಸರಿಸಬೇಕು. ಬಿ.ಎಸ್. ಯಡಿಯೂರಪ್ಪನವರು ಲೇಔಟ್ ಮಾಡಲ್ಲ ಎಂದು ರೈತರಿಗೆ ಭರವಸೆ ನೀಡಿದ್ದರು.

ನಂತರ ಸದಾನಂದಗೌಡ, ಜಗದೀಶ ಶೆಟ್ಟರ್, ಕುಮಾರಸ್ವಾಮಿ ಹೀಗೆ ಯಾವುದೇ ಮುಖ್ಯಮಂತ್ರಿಗಳು ಈ ಯೋಜನೆಗೆ ಒಪ್ಪಿಗೆ ನೀಡಲಿಲ್ಲ. ಬೆಂಗಳೂರಿನಲ್ಲಿ ಸರ್ಕಾರಿ ಸಂಸ್ಥೆಗಳಿಂದ ರಚಿಸಿದ 8 ಲಕ್ಷ ನಿವೇಶನಗಳು ಹಾಗೂ 10 ಲಕ್ಷ ಫ್ಲ್ಯಾಟ್‌ಗಳು ಖಾಲಿ ಇವೆ. ಖಾಸಗಿಯದ್ದೂ ಸೇರಿದಂತೆ ಒಟ್ಟು 20 ಲಕ್ಷ ಫ್ಲ್ಯಾಟ್ ಆಗುತ್ತದೆ. ಕೆಂಪೇಗೌಡ ಲೇಔಟ್, ಶಿವರಾಮ ಕಾರಂತ ಲೇಔಟ್‌ನಲ್ಲಿ ನಿವೇಶನಗಳು ಇನ್ನೂ ಖಾಲಿ ಇವೆ ಎಂದರು.

ಮುಂದೆ ಬಿಜೆಪಿ–ಜೆಡಿಎಸ್ ಸರ್ಕಾರ ಅಧಿಕಾರಕ್ಕೆ ಬರಲಿದ್ದು, ಆಗ ಯೋಜನೆಯನ್ನು ರದ್ದು ಮಾಡುತ್ತೇವೆ. ಈ ಯೋಜನೆ ಜಾರಿಯಾಗಲು ಈಗಲೂ ಅವಕಾಶ ನೀಡುವುದಿಲ್ಲ ಎಂದರು.



ಬಿಡದಿಯ ಕೆಂಪಯ್ಯನ ಪಾಳ್ಯದಲ್ಲಿ ರೇಷ್ಮೆ ಕೃಷಿ ಕೈಗೊಂಡಿರುವ ರೈತರನ್ನು ಭೇಟಿ ಮಾಡಿದ ಬಿಜೆಪಿ ನಾಯಕರು.

# ಕಾಂಗ್ರೆಸ್ ಸರ್ಕಾರಕ್ಕೆ ರಾಜ್ಯದಲ್ಲಿ ರಿಯಲ್‌ಎಸ್ಟೇಟ್ ನಡೆಸುವುದೇ ಆದ್ಯತೆ

**ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ**

**ಬಿಡದಿ ಟೌನ್‌ಶಿಪ್ ಭೂಸ್ವಾಧೀನ ನಿಲ್ಲಿಸುವಂತೆ ಒತ್ತಾಯ**

**ಬೆಂಗಳೂರು, ಜೂ.17:** ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ರಿಯಲ್ ಎಸ್ಟೇಟ್ ನಡೆಸುವುದೇ ಪ್ರಮುಖ ಆದ್ಯತೆಯಾಗಿದೆಯೇ ಹೊರತು ರೈತರ ಹಿತ ಬೇಕಾಗಿಲ್ಲ. ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಕೆಲವೇ ಗಂಟೆಗಳಲ್ಲಿ ತಮ್ಮ ಸರ್ಕಾರದ ಆದ್ಯತೆ ರಿಯಲ್ ಎಸ್ಟೇಟ್ ಎಂಬುದನ್ನು ತೋರಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿಯಲ್ಲಿ ಟೌನ್‌ಶಿಪ್ ಮಾಡಲು ಮುಂದಾಗಿರುವ ಸರ್ಕಾರ ಬಲವಂತವಾಗಿ ರೈತರ ಜಮೀನು ಕಸಿಯಲು ಮುಂದಾಗಿದೆ. ಇದನ್ನು ಬಿಜೆಪಿ ವಿರೋಧಿಸಲಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಭಂಡತನ ಬಿಟ್ಟು ರೈತರ ಸಮಸ್ಯೆಗಳನ್ನು ಆಲಿಸಬೇಕು. ಅವರನ್ನು ಒಕ್ಕಲೆಬ್ಬಿಸಬಾರದು. ಟೌನ್‌ಶಿಪ್‌ಗಾಗಿ ಭೂಸ್ವಾಧೀನವನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ನಾಯಕರು, ವಿರೋಧ ಪಕ್ಷದ ನಾಯಕರ ವಿರುದ್ಧ ಪೋಸ್ಟರ್ ಆಂದೋಲನ ನಡೆಸಲಾಗುತ್ತಿದೆ. ಇಂತಹ ಗೊಡ್ಡು ಬೆದರಿಕೆಗೆ ಹೆದರಲು ನಾವು ಕಾಂಗ್ರೆಸ್ ಶಾಸಕರಲ್ಲ. ಈ ನಾಡಿನ ರೈತರ ಪರವಾಗಿ ನಿಲ್ಲುವ ಕರ್ತವ್ಯ ನಮ್ಮದು. ಅದನ್ನು ಮಾಡೇ ಮಾಡುತ್ತೇವೆ. ವಿರೋಧ ಪಕ್ಷದ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸುತ್ತೇವೆ ಎಂದರು.

**ಅಕ್ರಮ ನಡೆಯುವವರೆಗೆ ಅನುಷ್ಠಾನ ಸಮಿತಿ ಕತ್ತೆಕಾಯುತ್ತಿತ್ತೇ?**

ಗ್ಯಾರಂಟಿಗಳಲ್ಲಿ ಅಕ್ರಮ ಆಗುವವರೆಗೆ ಅನುಷ್ಠಾನ ಸಮಿತಿಗಳು ಕತ್ತೆ ಕಾಯುತ್ತಿದ್ದವೇ. ಒಂದೂವರೆ ಲಕ್ಷಕ್ಕೂ ಹೆಚ್ಚು ಜನರು ಆದಾಯ ತೆರಿಗೆ ಪಾವತಿ ಮಾಡುವವರು ಗೃಹಲಕ್ಷ್ಮೀ ಸೌಲಭ್ಯ ಪಡೆಯುತ್ತಿದ್ದಾರೆ ಎಂದು ಅನುಷ್ಠಾನ ಸಮಿತಿ ಹೇಳಿದೆ. ಗ್ಯಾರಂಟಿ ಜಾರಿ ಮಾಡುವಾಗ ಕಾಕಾ ಪಾಟೀಲ್, ಮಹಾದೇವಪ್ಪಗೆ ಫ್ರೀ ಎಂದಿದ್ದರು. ಈಗ ಹೇಗೆ ಅವರೆಲ್ಲ ತೆರಿಗೆ ಪಾವತಿದಾರರಾಗುತ್ತಾರೆ ಎಂದು ವಿಜಯೇಂದ್ರ ಪ್ರಶ್ನೆ ಮಾಡಿದರು. ಗ್ಯಾರಂಟಿಗಳಿಂದ ಸರ್ಕಾರಕ್ಕೆ ಈಗ ಹೊರೆ ಆಗುತ್ತಿದೆ. ಸಮಿತಿಗಳಿಗೆ, ಅಧ್ಯಕ್ಷರಿಗೆ ಕಚೇರಿ, ವೇತನ, ಇತರ ಸೌಲಭ್ಯಗಳಿಗೆ ನೂರಾರು ಕೋಟಿ ವ್ಯಯಿಸಲಾಗುತ್ತಿದೆ. ಇದು ಸರ್ಕಾರದ ವೈಫಲ್ಯ. ಗ್ಯಾರಂಟಿಗಳಿಗೆ ಹಣ ಹೊಂದಿಸಲು ಸಾಧ್ಯವಾಗದೇ ಒಂದೊಂದೇ ನೆಪ ಹೇಳಿಕೊಂಡು ಈಗ ಸೌಲಭ್ಯಗಳಿಗೆ ಕತ್ತರಿ ಹಾಕುವ ಯತ್ನ ನಡೆಯುತ್ತಿದೆ. ಇದಕ್ಕೆ ರಾಜ್ಯದ ಜನ ಛೀಮಾರಿ ಹಾಕುತ್ತಿದ್ದಾರೆ ಎಂದರು.

**ಎಸ್‌ಐಆರ್ ಬಗ್ಗೆ ದ್ವಂದ್ವ ನಿಲುವು**

ಎಸ್‌ಐಆರ್ ವಿಚಾರದಲ್ಲಿ ರಾಜ್ಯ ಸರ್ಕಾರದಲ್ಲಿ ದ್ವಂದ್ವ ನಿಲುವು ವ್ಯಕ್ತವಾಗುತ್ತಿದೆ. ಅಧಿಕಾರಿಗಳನ್ನು ಎತ್ತಿಕಟ್ಟುವ ಕೆಲಸ ನಡೆಯುತ್ತಿದೆ. ಬಿಎಲ್‌ಒಗಳಿಗೆ ರಾಜ್ಯ ಸರ್ಕಾರ ಕುಮಕ್ಕು ನೀಡುತ್ತಿದೆ. ಕಾಂಗ್ರೆಸ್‌ನ ಮಹಾನ್ ನಾಯಕ ರಾಹುಲ್‌ಗಾಂಧಿ ಅವರು ಬೇರೆ ದೇಶದ ನೈಜ ಪೌರತ್ವ ಪಡೆದಿದ್ದಾರೆ. ಇನ್ನೊಂದು ದೇಶದ ಪೌರತ್ವ ಇಟ್ಟುಕೊಂಡು ಅಕ್ರಮವಾಗಿ ಸುಳ್ಳು ಮಾಹಿತಿ ನೀಡಿದ್ದಾರೆ. ಇದರ ಬಗ್ಗೆ ಡಿ.ಕೆ. ಶಿವಕುಮಾರ್ ಹಾಗೂ ಪ್ರಿಯಾಂಕ್ ಖರ್ಗೆ ಅವರು ಬೆಳಕು ಚೆಲ್ಲುವ ಕೆಲಸ ಮಾಡಲಿ ಎಂದರು. ಚುನಾವಣಾ ಆಯೋಗ ಅಕ್ರಮ ವಲಸಿಗರ ಪತ್ತೆಗೆ, ಮತಪಟ್ಟಿಯಲ್ಲಿ ಎರಡು ಕಡೆ ಹೆಸರು ಇದ್ದರೆ, ಮೃತಪಟ್ಟವರ ಹೆಸರು ಸೇರಿದ್ದರೆ ಸರಿಪಡಿಸಲು ಎಸ್‌ಐಆರ್ ಕೈಗೊಂಡಿದೆ. ಸಾಂವಿಧಾನಿಕ ಸಂಸ್ಥೆ ವಿರುದ್ಧ ಅಧಿಕಾರಿಗಳನ್ನು, ಜನರನ್ನು ಎತ್ತಿಕಟ್ಟುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ. ಇದು ಅಕ್ಷಮ್ಯ ಅಪರಾಧ ಎಂದರು.

ಆರ್‌ಎಸ್‌ಎಸ್ ಬಗ್ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಒಂದಲ್ಲ ಒಂದು ಹೇಳಿಕೆ ನೀಡುತ್ತಾ ಇದ್ದಾರೆ. ಅವರ ಬಾಯಿ ಚಪಲಕ್ಕೆ ಉತ್ತರ ಕೊಡುವುದಿಲ್ಲ. ಅವರು ರಾಜ್ಯದ ಗೃಹಸಚಿವರು. ಅವರು ಮಾಡಬೇಕಾದ ಕೆಲಸ ತುಂಬಾ ಇವೆ. ಅಕ್ರಮ ನುಸುಳುಕೋರರು, ಲವ್ ಜಿಹಾದ್, ಹಿಂದೂ ಕಾರ್ಯಕರ್ತರ ಹತ್ಯೆ ಬಗ್ಗೆ ಗಮನ ಹರಿಸಲಿ. ಅದನ್ನು ಬಿಟ್ಟು ಬೇರೆ ಮಾತನಾಡುತ್ತಾರೆ ಎಂದು ಇದೇ ವೇಳೆ ವಿಜಯೇಂದ್ರ ತಿರುಗೇಟು ನೀಡಿದರು.

# ಬಂಡೀಪುರ ಪ್ರದೇಶದಲ್ಲಿ ರಾತ್ರಿ ವೇಳೆ ವಾಹನ ಸಂಚಾರಕ್ಕೆ ಅವಕಾಶ ಬೇಡ

**ಮುಖ್ಯಮಂತ್ರಿಗೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಒತ್ತಾಯ**

**ಮೈಸೂರು, ಜೂ.17:** ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ರಾತ್ರಿ ವೇಳೆ ವಾಹನಗಳ ಸಂಚಾರಕ್ಕೆ ಅವಕಾಶ ಕೊಡಬಾರದು ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

2024ರಲ್ಲಿ ವಯನಾಡ್ ಉಪ ಚುನಾವಣೆ ಸಂದರ್ಭದಲ್ಲಿ, ಆಗಿನ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಪ್ರಿಯಾಂಕಾ ಗಾಂಧಿ ವಾದ್ರಾ ಆಯ್ಕೆಯಾದರೆ ಬಂಡೀಪುರ ರಾತ್ರಿ ಸಂಚಾರವನ್ನು ಮತ್ತೆ ತೆರೆಯುವ ಬಗ್ಗೆ ಪರಿಗಣಿಸುವುದಾಗಿ ಭರವಸೆ ನೀಡಿದ್ದರು. ಈಗ, ಕೇರಳದ ಸಂಸದ ಎಂ.ಕೆ. ರಾಘವನ್ ಮತ್ತೊಮ್ಮೆ ಅದೇ ಬೇಡಿಕೆಯೊಂದಿಗೆ ಈಗಿನ ಮುಖ್ಯಮಂತ್ರಿ ಶಿವಕುಮಾರ್ ಅವರನ್ನು ಸಂಪರ್ಕಿಸಿದ್ದಾರೆ. ಅವರ ವಿನಂತಿಯನ್ನು ಸ್ಪಷ್ಟವಾಗಿ ತಿರಸ್ಕರಿಸಬೇಕು ಎಂದು ಕೋರಿದ್ದಾರೆ.

ಬಂಡೀಪುರ ಚುನಾವಣಾ ರಾಜಕೀಯಕ್ಕೆ ಚೌಕಾಸಿ ಮಾಡುವ ಸ್ಥಳವಲ್ಲ. ಇದು ಕರ್ನಾಟಕದ ಅತ್ಯಂತ ಅಮೂಲ್ಯವಾದ ಪರಿಸರ ಆಸ್ತಿಗಳಲ್ಲಿ ಒಂದಾಗಿದ್ದು, ವನ್ಯಜೀವಿಗಳಿಗೆ ನೆಲೆಯಾಗಿದೆ ಮತ್ತು ನೀಲಗಿರಿ ಜೀವಗೋಳದ ನಿರ್ಣಾಯಕ ಭಾಗವೂ ಆಗಿದೆ. ರಾಜಕೀಯ ಅನುಕೂಲಕ್ಕಾಗಿ ಕರ್ನಾಟಕದ ನೈಸರ್ಗಿಕ ಪರಂಪರೆಯನ್ನು ವ್ಯಾಪಾರ ಮಾಡುವ ಯಾವುದೇ ಪ್ರಯತ್ನವನ್ನು ಕೊನೆಗೊಳಿಸಬೇಕು' ಎಂದು ಒತ್ತಾಯಿಸಿದ್ದಾರೆ.

# ಆನೆ–ಮಾನವ ಸಂಘರ್ಷ ತಡೆಗೆ ಶಾಶ್ವತ ಪರಿಹಾರ ಒದಗಿಸಿ

**ಕೇಂದ್ರ ಸಚಿವರಿಗೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ**



**ನವದೆಹಲಿ, ಜೂ.17:** ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಆನೆ – ಮಾನವ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಲ್ಪಿಸುವುದು ಮತ್ತು ಮೈಸೂರಿನ ತಿಪ್ಪಯ್ಯನ ಕೆರೆಯಲ್ಲಿ ನಗರ್ ಒನ್ ಯೋಜನೆ ಜಾರಿಗೊಳಿಸುವ ಕುರಿತು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಅವರಿಗೆ ಮನವಿ ಸಲ್ಲಿಸಿದರು.

ದೆಹಲಿಯಲ್ಲಿ ಸಚಿವರನ್ನು ಭೇಟಿ ಮಾಡಿ, ಮೈಸೂರು –ಕೊಡಗು ಭಾಗಕ್ಕೆ ಸಂಬಂಧಿಸಿದ ಮಹತ್ವದ ವಿಷಯಗಳ ಕುರಿತು ಚರ್ಚಿಸಿದರು. ನಂತರ ಮಾತನಾಡಿದ ಯದುವೀರ್ ಒಡೆಯರ್ ಅವರು, ಕೊಡಗು ಜಿಲ್ಲೆಯ ವಿವಿಧ ಭಾಗಗಳಲ್ಲಿ ಆನೆಗಳು ಕೃಷಿಭೂಮಿಗಳು ಮತ್ತು ಜನವಸತಿ ಪ್ರದೇಶಗಳಿಗೆ ನುಗ್ಗುತ್ತಿರುವ ಘಟನೆಗಳು ಹೆಚ್ಚುತ್ತಲೇ ಇದೆ, ಇದು ಜಿಲ್ಲೆಯ ಜನರ ಪ್ರಮುಖ ಸಮಸ್ಯೆಯಾಗಿ ಪರಿಣಮಿಸಿದೆ. ಆನೆಗಳ ದಾಳಿಯಿಂದ ಮಾನವ ಜೀವಹಾನಿ, ಬೆಳೆನಷ್ಟ, ಆಸ್ತಿಹಾನಿ ಮತ್ತು ಸಾರ್ವಜನಿಕರಲ್ಲಿ ಭಯದ ವಾತಾವರಣ ನಿರ್ಮಾಣವಾಗುತ್ತಿದೆ. ವಿಶೇಷವಾಗಿ ಅರಣ್ಯ ಅಂಚಿನ ಗ್ರಾಮಗಳಲ್ಲಿ ವಾಸಿಸುವ ರೈತರು, ತೋಟಗಾರರು ಮತ್ತು ಕಾರ್ಮಿಕರು ಈ ಸಮಸ್ಯೆಯಿಂದ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಆನೆ–ಮಾನವ ಸಂಘರ್ಷವನ್ನು ಕಡಿಮೆಗೊಳಿಸಲು ಸಮಗ್ರ ಹಾಗೂ ದೀರ್ಘಕಾಲೀನ ಕಾರ್ಯತಂತ್ರ ರೂಪಿಸಲು ಕೇಂದ್ರ ಸರ್ಕಾರದ ನೆರವು ಅಗತ್ಯವಿದೆ ಎಂದು ಅವರು ಮನವಿ ಮಾಡಿದರು.

ತಡೆಗೋಡೆಗಳ ಬಲವರ್ಧನೆ, ಸೌರಬೇಲಿ ವ್ಯವಸ್ಥೆ, ಆನೆಗಳ ಚಲನವಲನದ ವೈಜ್ಞಾನಿಕ ಮೇಲ್ವಿಚಾರಣೆ, ಮುನ್ನೆಚ್ಚರಿಕೆ ವ್ಯವಸ್ಥೆ, ಅರಣ್ಯ ವಾಸಸ್ಥಳಗಳ ಸುಧಾರಣೆ, ತ್ವರಿತ ಪ್ರತಿಕ್ರಿಯಾ ತಂಡಗಳ ರಚನೆ ಹಾಗೂ ಪೀಡಿತ ಕುಟುಂಬಗಳಿಗೆ ಮತ್ತು ರೈತರಿಗೆ ಸೂಕ್ತ ಪರಿಹಾರ ನೀಡುವ ವ್ಯವಸ್ಥೆಯನ್ನು ಬಲಪಡಿಸುವಂತೆ ಅವರು ಕೋರಿದರು. ಇದೇ ಸಂದರ್ಭದಲ್ಲಿ ಮೈಸೂರಿನ ಹೊರವರ್ತುಲ ರಸ್ತೆಯ ಸಮೀಪ, ಸರ್ದಾರ್ ವಲ್ಲಭಭಾಯಿ ಪಟೇಲ್ ನಗರದ ಬಳಿ ಇರುವ ತಿಪ್ಪಯ್ಯನ ಕೆರೆಯನ್ನು ನಗರ ವನ ಯೋಜನೆಯಡಿ ಅಭಿವೃದ್ಧಿಪಡಿಸುವಂತೆ ಪ್ರತ್ಯೇಕ ಮನವಿಯನ್ನೂ ಸಲ್ಲಿಸಿದರು.

# ಸಂಪುಟ ವಿಸ್ತರಣೆ: ಹೈಕಮಾಂಡ್ ಜತೆ ಚರ್ಚಿಸಲು ಮುಂದಿನವಾರ ದೆಹಲಿಗೆ ಸಿಎಂ

**ಬೆಂಗಳೂರು, ಜೂ.17:** ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಹೈಕಮಾಂಡ್ ಬಳಿ ಚರ್ಚಿಸಿ ಅನುಮತಿ ಪಡೆಯಲು ಮುಂದಿನ ವಾರ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳಲಿದ್ದಾರೆ.

ಸಂಪುಟ ಸೇರ್ಪಡೆಗೊಳ್ಳಲು ಶಾಸಕರಿಂದ ತೀವ್ರ ಒತ್ತಡ ಹಾಗೂ ಬೇಡಿಕೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಇದೇ ತಿಂಗಳಲ್ಲಿ ಮೊದಲ ಹಂತದಲ್ಲಿ ಸಂಪುಟ ವಿಸ್ತರಣೆ ಮಾಡಲು ಸಿಎಂ ಉದ್ದೇಶಿಸಿದ್ದಾರೆ. ಹೀಗಾಗಿ ಅವರೊಂದಿಗೆ ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಮುಂದಿನ ಸೋಮವಾರ ಇಲ್ಲವೆ ಮಂಗಳವಾರ ದೆಹಲಿಗೆ ತೆರಳಿ ಹೈಕಮಾಂಡ್ ಜೊತೆ ಸಮಾಲೋಚನೆ ನಡೆಸಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ನಿನ್ನೆ ರಾತ್ರಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ವಿಧಾನ ಪರಿಷತ್ತಿನ ಚುನಾವಣೆಯ ಜೊತೆಗೆ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಹಾಗೂ ಸಂಪುಟ ವಿಸ್ತರಣೆ ವಿಚಾರ ಪ್ರಸ್ತಾಪವಾಗಿದೆ. ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಲು ಕೇವಲ 20 ಶಾಸಕರಿಗೆ ಮಾತ್ರಅವಕಾಶವಿದ್ದು, ಉಳಿದವರಿಗೆ ನಿಗಮ–ಮಂಡಳಿಯಲ್ಲಿ ಅವಕಾಶ ಮಾಡಿಕೊಡುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ ಎಂದು ಮೂಲಗಳು ಹೇಳಿವೆ.

ಮೊದಲ ಬಾರಿಗೆ ಶಾಸಕರಾದವರಿಗೆ ಸಂಪುಟದಲ್ಲಿ ಅವಕಾಶವಿಲ್ಲ. ಪ್ರಾತಿನಿಧ್ಯ ಸಿಗದ ಪ್ರದೇಶ, ಜಾತಿ, ವರ್ಗಗಳಿಗೆ ಸಂಪುಟ ವಿಸ್ತರಣೆ ಸಂದರ್ಭದಲ್ಲಿ ಆದ್ಯತೆ ನೀಡಲಾಗುವುದು. ಅರ್ಹತೆ, ಹಿರಿತನ, ಅನುಭವವನ್ನು ಪರಿಗಣಿಸಲಾಗು ವುದು. ಎಲ್ಲರಿಗೂ ಅವಕಾಶ ಸಿಗುವುದಿಲ್ಲ ಎಂಬುದು ನಿಮಗೂ ಗೊತ್ತಿದೆ. ಸಚಿವ ಸ್ಥಾನ ಸಿಗದ ಶಾಸಕರಿಗೆ ಅವರ ಹಿರಿತನ ಮತ್ತು ಅನುಭವದ ಆಧಾರದ ಮೇಲೆ ಪ್ರಮುಖ ನಿಗಮ–ಮಂಡಳಿಗಳ ಅಧ್ಯಕ್ಷ ಸ್ಥಾನ ನೀಡಲಾಗುವುದು. ಅವಕಾಶ ವಂಚಿತರು ಅಸಮಾಧಾನ ಗೊಳ್ಳಬಾರದು ಎಂದು ಸಿಎಂ ಹೇಳಿದ್ದಾರೆ ಎನ್ನಲಾಗಿದೆ.

# ಕರ್ನಾಟಕ ಮಾದರಿ ಪ್ರಕಾಶಿಸುತ್ತಿದೆ: ಜನಕಲ್ಯಾಣ ಯೋಜನೆಗಳು ಅದ್ಭುತ ಆರ್ಥಿಕ ಬೆಳವಣಿಗೆಯನ್ನು ಸಮತೋಲನಗೊಳಿಸಿದ ಮಹತ್ಸಾಧನೆ



**ಗ್ಯಾರಂಟಿ ಯೋಜನೆಗಳ ಭ'ರ'ವ'ಸೆ'ಗ'ಳ'ನ್ನು ಈಡೇರಿಸಿದರೆ ರಾಜ್ಯ ದಿವಾಳಿಯಾಗುತ್ತದೆ ಎಂದು ಬಿಜೆಪಿಯವರು ಟೀಕಿಸುತ್ತಿದ್ದರು. ಆದರೆ ಅಂಕಿ-ಅಂಶಗಳು ಬೇರೆಯದೇ ಆದ ಸತ್ಯವನ್ನು ಸಾಬೀತುಪಡಿಸುತ್ತಿವೆ.**

**ಸರ್ಕಾರವು ಸಾಮಾನ್ಯ ಜನರ ಬದುಕನ್ನು ಆರ್ಥಿಕವಾಗಿ ಸಬಲೀಕರಣ ಗೊಳಿಸುತ್ತಲೇ, ಮತ್ತೊಂದೆಡೆ ಬೃಹತ್ ಮೂಲಸೌಕರ್ಯ ಅಭಿವೃದ್ಧಿಗೆ ಹೇಗೆ ಉತ್ತೇಜನ ನೀಡಬಹುದು ಎಂಬುದನ್ನು ತೋರಿಸಿಕೊಡುವ ಮೂಲಕ ಕರ್ನಾಟಕವು ದೇಶಕ್ಕೇ ಒಂದು ಯಶಸ್ವಿ ಉದಾಹರಣೆಯಾಗಿದೆ**

ರಾಜ್ಯವು ಈ ಅದ್ಭುತ ಸಮತೋಲನವನ್ನು ಹೇಗೆ ಸಾಧಿಸುತ್ತಿದೆ ಎಂಬುದು ಇಲ್ಲಿದೆ:

**ಸದೃಢ ಆರ್ಥಿಕ ಬೆಳವಣಿಗೆ:**

* 2020–21ರಿಂದ ರಾಜ್ಯದ ಆರ್ಥಿಕತೆ ವಾಸ್ತವಿಕ ಮೌಲ್ಯದಲ್ಲಿ 53% ಬೆಳವಣಿಗೆ ಕಂಡಿದ್ದು, ರಾಜ್ಯದ ಬಜೆಟ್ ಗಾತ್ರ ದ್ವಿಗುಣಗೊಂಡಿದೆ. ಇದು ವೆಚ್ಚ ಮಾಡುವ ಸಾಮರ್ಥ್ಯವನ್ನು ಹೆಚ್ಚಿಸಿದೆ.

* ಕಳೆದ ಆರು ವರ್ಷಗಳಲ್ಲಿ ಕಂದಾಯ ಸ್ವೀಕೃತಿಗಳು ದುಪ್ಪಟ್ಟಾಗಿದ್ದು, ಸರ್ಕಾರದ ಈ ಹಲವಾರು ಬದ್ಧತೆಗಳಿಗೆ ಹಣಕಾಸು ಒದಗಿಸುವ ಬಲವಾದ ಆಧಾರಸ್ತಂಭವಾಗಿದೆ.

ಬಂಡವಾಳ ವೆಚ್ಚ (Capex) ಕುಸಿದಿಲ್ಲ, ಹೆಚ್ಚಾಗಿದೆ! (ಅತಿದೊಡ್ಡ ಅಪಪ್ರಚಾರಕ್ಕೆ ಉತ್ತರ):

* 2023ರಿಂದ ಐದು ಗ್ಯಾರಂಟಿ ಯೋಜನೆಗಳಿಗೆ ಸುಮಾರು 1.4 ಲಕ್ಷ ಕೋಟಿ ವೆಚ್ಚ ಮಾಡಿದರೂ, ದೀರ್ಘಕಾಲಿಕ ಆಸ್ತಿಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿಯ ಮೇಲಿನ ವೆಚ್ಚ ನಿರಂತರವಾಗಿ ಹೆಚ್ಚುತ್ತಿದೆ.

* ಬಂಡವಾಳ ವೆಚ್ಚವು (Capex) 2020–21 ರಿಂದೀಚೆಗೆ ಸುಮಾರು ಶೇ.86ರಷ್ಟು ಗಮನಾರ್ಹ ಬೆಳವಣಿಗೆಯನ್ನು ಕಂಡಿದೆ.

* ಸಾಮಾಜಿಕ ಹೂಡಿಕೆಗಳು ಅಭಿವೃದ್ಧಿಯ ಮಹತ್ವಾಕಾಂಕ್ಷೆಗಳಿಗೆ ಧಕ್ಕೆ ತರಬೇಕಾಗಿಲ್ಲ ಎಂಬುದನ್ನು ರಾಜ್ಯವು ಪರಿಣಾಮಕಾರಿಯಾಗಿ ಸಾಬೀತುಪಡಿಸುತ್ತಿದೆ.

**ಹಣಕಾಸು ಶಿಸ್ತು ಕಾಪಾಡಿಕೊಳ್ಳಲಾಗಿದೆ:**

* ಕೋವಿಡ್ ನಂತರ ಕರ್ನಾಟಕವು ತನ್ನ ಹಣಕಾಸಿನ ಶಿಸ್ತನ್ನು ಯಶಸ್ವಿಯಾಗಿ ಮರುಸ್ಥಾಪಿಸಿದೆ.

* ರಾಜ್ಯದ ಹಣಕಾಸು ಕೊರತೆ (Fiscal Deficit) ಪ್ರಸ್ತುತ FRBM ನಿಗದಿಪಡಿಸಿರುವ ಮಿತಿಯೊಳಗೆ ಸುರಕ್ಷಿತವಾಗಿದೆ.

* ಗ್ಯಾರಂಟಿ ಯೋಜನೆಗಳ ವೆಚ್ಚವೂ ಸ್ಥಿರವಾಗುತ್ತಿದ್ದು, 2024–25ರಲ್ಲಿ ಬಜೆಟ್‌ನ 14%ಕ್ಕಿಂತ ಹೆಚ್ಚಿದ್ದ ವೆಚ್ಚದ ಪ್ರಮಾಣ ಈಗ ಕ್ರಮೇಣ ಕಡಿಮೆಯಾಗುತ್ತಿದೆ.

ಗೃಹಲಕ್ಷ್ಮಿಯಂತಹ ಪ್ರಮುಖ ಯೋಜನೆಗಳನ್ನು ಒಳಗೊಂಡಿರುವ ಈ ಐದು ಗ್ಯಾರಂಟಿಗಳು "ಉಚಿತ ಕೊಡುಗೆಗಳು" ಅಲ್ಲ; ಅವು ಜನರ ಖರೀದಿ ಶಕ್ತಿಯನ್ನು ಹೆಚ್ಚಿಸಿ, ತಳಮಟ್ಟದ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಮಹತ್ವದ ಸಾಮಾಜಿಕ ಹೂಡಿಕೆಗಳಾಗಿವೆ.

ಜನರ ಕಲ್ಯಾಣ ಮತ್ತು ಆರ್ಥಿಕ ಅಭಿವೃದ್ಧಿ ಎರಡನ್ನೂ ಒಂದೇ ಸಮಯದಲ್ಲಿ ಸಾಧಿಸಬಹುದು ಎಂಬುದನ್ನು ಕರ್ನಾಟಕ ಇಡೀ ದೇಶಕ್ಕೆ ತೋರಿಸಿಕೊಡುತ್ತಿದೆ!

**-ರಣದೀಪ್ ಸಿಂಗ್ ಸುರ್ಜೇವಾಲ**
**ಎಐಸಿಸಿ ಪ್ರಧಾನ ಕಾರ್ಯದರ್ಶಿ**
**ಕರ್ನಾಟಕ ರಾಜ್ಯದ ಉಸ್ತುವಾರಿ**

# 232 ಗ್ರೇಡ್-2 ತಹಸೀಲ್ದಾರ್‌ಗಳಿಗೆ ಬಡ್ತಿ

**ಬಹುಕಾಲದ ಬೇಡಿಕೆಯನ್ನು ಸರ್ಕಾರ ಈಡೇರಿಸಿದೆ: ಸಚಿವ ಡಾ. ಜಿ.ಪರಮೇಶ್ವರ್**

**ಬೆಂಗಳೂರು, ಜೂ.17:** ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಗ್ರೇಡ್–2 ತಹಶೀಲ್ದಾರ್ ಅಧಿಕಾರಿಗಳಿಗೆ ರಾಜ್ಯ ಸರ್ಕಾರ ಭರ್ಜರಿ ಗುಡ್‌ನ್ಯೂಸ್ ನೀಡಿದೆ. ಬಡ್ತಿ ನೀಡಬೇಕೆಂಬ ಬಹುಕಾಲದ ಬೇಡಿಕೆಯನ್ನು ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಈಡೇರಿಸಿದೆ. ಈ ಬಗ್ಗೆ ಕಂದಾಯ ಸಚಿವರು ಆದ ಡಿಸಿಎಂ ಡಾ.ಜಿ.ಪರಮೇಶ್ವರ್ ಮಾತನಾಡಿದ್ದು, ಗ್ರೇಡ್–2 ತಹಶೀಲ್ದಾರ್ ವಿಚಾರದಲ್ಲಿ ಕೈಗೊಂಡ ನಿರ್ಧಾರ ಕೇವಲ ಆಡಳಿತಾತ್ಮಕ ಮೈಲಿಗಲ್ಲಷ್ಟೇ ಅಲ್ಲ. ಬದಲಿಗೆ ನ್ಯಾಯಬದ್ಧ, ಪಾರದರ್ಶಕ ಹಾಗೂ ಸಮಯೋಚಿತ ನಿರ್ಧಾರಗಳ ಮೂಲಕ ಆಡಳಿತ ಯಂತ್ರವನ್ನು ಬಲಪಡಿಸುವ ಸರ್ಕಾರದ ದೃಢ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಬಣ್ಣಿಸಿದ್ದಾರೆ. ರಾಜ್ಯದಲ್ಲಿ ಗ್ರೇಡ್–2 ತಹಶೀಲ್ದಾರ್ ಹುದ್ದೆಯಿಂದ ಗ್ರೇಡ್–1 ಹುದ್ದೆಗೆ ಬಡ್ತಿ ನೀಡಬೇಕೆಂಬ ಬಹುಕಾಲದ ಬೇಡಿಕೆ ಕಳೆದ ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿತ್ತು. ರಾಜ್ಯ ಸರ್ಕಾರವು ಇದನ್ನು ಆದ್ಯತೆಯ ಮೇರೆಗೆ ಪರಿಗಣಿಸಿ, ಇದೀಗ ಅರ್ಹತೆಗೆ ಅನುಸಾರವಾಗಿ ಬಡ್ತಿ ನೀಡಿದೆ. ಈ ಮೂಲಕ ಕಂದಾಯ ಅಧಿಕಾರಿಗಳ ದೀರ್ಘಕಾಲದ ಕಾಯುವಿಕೆಗೆ ಅಂತ್ಯವಾಗಿದೆ ಎಂದಿದ್ದಾರೆ.

ರಾಜ್ಯದಲ್ಲಿ ಕಳೆದ 5 ವರ್ಷಗಳಿಗೂ ಹೆಚ್ಚು ಕಾಲದಿಂದ ನಮ್ಮ ಅನೇಕ ಸಮರ್ಥ ಹಾಗೂ ಪ್ರತಿಭಾವಂತ ಅಧಿಕಾರಿಗಳು, ತಮ್ಮ ಕಠಿಣ ಶ್ರಮ ಮತ್ತು ಸೇವಾ ನಿಷ್ಠೆಯ ಹೊರತಾಗಿಯೂ ವೃತ್ತಿಜೀವನದಲ್ಲಿ ಪ್ರಗತಿ ಕಾಣದೆ ಮಾನಸಿಕ ಒತ್ತಡಕ್ಕೆ ಸಿಲುಕಿದ್ದರು. ಇದೀಗ ಒಟ್ಟು 232 ಗ್ರೇಡ್–2 ತಹಶೀಲ್ದಾರ್‌ಗಳಿಗೆ ಗ್ರೇಡ್–1 ಹುದ್ದೆಗೆ ಬಡ್ತಿ ಕೊಟ್ಟಿದ್ದೇವೆ. ಹಲವು ವರ್ಷಗಳಿಂದ ಬಾಕಿ ಉಳಿದಿದ್ದ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಮೂಲಕ, "ಸರ್ಕಾರವು ಅರ್ಹತೆ, ಬದ್ಧತೆ ಮತ್ತು ಪ್ರಾಮಾಣಿಕತೆ ಸದಾ ಗುರುತಿಸಿ ಪ್ರೋತ್ಸಾಹಿಸುತ್ತದೆ ಎಂಬ ವಿಶ್ವಾಸವನ್ನು ನೌಕರ ವರ್ಗದಲ್ಲಿ ಮೂಡಿಸುವಲ್ಲಿ ನಾವು ಯಶಸ್ವಿಯಾಗಿದ್ದೇವೆ ಎಂದಿದ್ದಾರೆ.

**ನವಕರ್ನಾಟಕ ಕಟ್ಟೋಣ**

ಕಂದಾಯ ಇಲಾಖೆಯು ಮುಂಬರುವ ದಿನಗಳಲ್ಲಿ ಮತ್ತಷ್ಟು ವೇಗ, ಪಾರದರ್ಶಕತೆ ಮತ್ತು ಜವಾಬ್ದಾರಿಯುತವಾಗಿ ಸೇವೆ ಒದಗಿಸುವ ಜನಕೇಂದ್ರಿತ ಸಂಸ್ಥೆಯಾಗಿ ರೂಪುಗೊಳ್ಳಲಿದೆ. ಇಲಾಖೆಯ ಅಧಿಕಾರಿ ವರ್ಗದ ಸಬಲೀಕರಣದ ಮೂಲಕ ಪ್ರತಿಯೊಬ್ಬ ನಾಗರಿಕನ ಅಗತ್ಯಗಳಿಗೂ ಸ್ಪಂದಿಸುವ ಸರ್ಕಾರದ ಕಾರ್ಯವಿಧಾನವನ್ನು ಇನ್ನಷ್ಟು ಪರಿಣಾಮಕಾರಿ ಆಗಿಸಲಿದ್ದೇವೆ. ಉತ್ತರದಾಯಿತ್ವ, ಪಾರದರ್ಶಕ, ಸಂವೇದನಾಶೀಲ ಮತ್ತು ಸರ್ವರಿಗೂ ಸುಲಭವಾಗಿ ಲಭ್ಯವಾಗುವ ಸೇವಾ ಮಾದರಿಯ ಮೂಲಕ 'ನವ ಕರ್ನಾಟಕ'ವನ್ನು ಕಟ್ಟೋಣ ಎಂದು ಪರಮೇಶ್ವರ್ ಕರೆ ನೀಡಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜೂನ್ 18 2026, ಗುರುವಾರ

## ಒಳಪುಟಗಳಲ್ಲಿ

ರಕ್ಷಣಾ ಕ್ಷೇತ್ರದಲ್ಲಿ ಭಾರತದ ಮಹತ್ವದ ಸಾಧನೆ - 1.78 ಲಕ್ಷ ಕೋಟಿ ತಲುಪಿದ ರಕ್ಷಣಾ ವಲಯದ ತಯಾರಿಕೆ - ಪು.4

ಎರಡನೇ ಹಂತದ ವಿಸ್ತರಣೆಯಲ್ಲಿ ಸಚಿವ ಸ್ಥಾನ ಸಿಗಲಿದೆ: ಜಮೀರ್ ಖಾನ್ ವಿಶ್ವಾಸ - ಪು.5

ಜಿ.ಎಸ್. ಪಾಟೀಲ್‌ಗೆ ಸಚಿವ ಸ್ಥಾನಕ್ಕೆ ಆಗ್ರಹಿಸಿ ಬೆಂಬಲಿಗರಿಂದ ಪಾದಯಾತ್ರೆ - ಪು.6

# ಭಾರತೀಯ ನಾವಿಕರ ಸುರಕ್ಷತೆ, ಹಾರ್ಮುಜ್‌ನಲ್ಲಿ ಸುಗಮ ಸಂಚಾರಕ್ಕೆ ಮೋದಿ ಕರೆ

### ಜಿ7 ಶೃಂಗಸಭೆ ವೇಳೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜತೆ ಪ್ರಧಾನಿ ಮೋದಿ ಮಾತುಕತೆ

### ............. ದ್ವಿಪಕ್ಷೀಯ ಸಂಬಂಧ ಸ್ಥಿರಗೊಳಿಸುವ ಕುರಿತು ಚರ್ಚೆ




**ಎವಿಯನ್-ಲೆಸ್-ಬೈನ್ಸ್ (ಫ್ರಾನ್ಸ್), ಜೂ.17: ಜಿ7 ಶೃಂಗಸಭೆಯ ಪಾರ್ಶ್ವದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಬುಧವಾರ ದ್ವಿಪಕ್ಷೀಯ ಮಾತುಕತೆ ನಡೆಸಿದರು.**

ವ್ಯಾಪಾರ, ರಕ್ಷಣೆ, ಇಂಧನ ಭದ್ರತೆ, ತಂತ್ರಜ್ಞಾನ, ನಿರ್ಣಾಯಕ ಖನಿಜಗಳು ಮತ್ತು ಕಾರ್ಯತಂತ್ರದ ಪೂರೈಕೆ ಸರಪಳಿಗಳು ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವ ಕುರಿತು ಇಬ್ಬರೂ ನಾಯಕರು ವ್ಯಾಪಕ ಚರ್ಚೆಗಳನ್ನು ನಡೆಸಿದರು. ಉತ್ಪಾದನೆ, ಸೆಮಿಕಂಡಕ್ಟರ್, ಡಿಜಿಟಲ್ ಮೂಲಸೌಕರ್ಯ, ಶುದ್ಧ ಇಂಧನ ಮತ್ತು ಸ್ಥಿತಿಸ್ಥಾಪಕ ಜಾಗತಿಕ ಪೂರೈಕೆ ಸರಪಳಿಗಳಲ್ಲಿ ಎರಡೂ ದೇಶಗಳು ಸಹಕಾರ ವಿಸ್ತರಣೆ ಬಗ್ಗೆ ಸಭೆಯಲ್ಲಿ ಇಬ್ಬರು ನಾಯಕರು ಚರ್ಚಿಸಿದರು.

ಎರಡೂ ದೇಶಗಳು ಪ್ರಗತಿ ಪಥದಲ್ಲಿ ಸಾಗುತ್ತಿದ್ದು, ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವ ಸನಿಹದಲ್ಲಿದ್ದೇವೆ ಎಂದು ಟ್ರಂಪ್ ಹೇಳಿದರು. ಅಮೆರಿಕದಲ್ಲಿ ಭಾರತದ ಆರ್ಥಿಕ ಹೆಜ್ಜೆ ಗುರುತನ್ನು ವಿವರಿಸಿದ ಟ್ರಂಪ್, ಸೂಚಿಸಿದ ಟ್ರಂಪ್, ಅಮೆರಿಕದಲ್ಲಿ ಭಾರತ ಬಹಳಷ್ಟು ಹೂಡಿಕೆ ಮಾಡುತ್ತಿದೆ. ನಮಗೆ 19.2 ಟ್ರಿಲಿಯನ್ ಡಾಲರ್‌ಗಿಂತ ಹೆಚ್ಚು ಬರುತ್ತಿದೆ. ಈ ನಿಟ್ಟಿನಲ್ಲಿ ಭಾರತದ ಕ್ರಮವನ್ನು ಪ್ರಶಂಸಿಸುವುದಾಗಿ ಟ್ರಂಪ್ ಹೇಳಿದರು.

ಕಳೆದ ವಾರ ಓಮಾನ್ ಕರಾವಳಿಯಲ್ಲಿ ಭಾರತೀಯ ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ಮೂರು ಹಡಗುಗಳ ಮೇಲೆ ಅಮೆರಿಕ ದಾಳಿ ನಡೆಸಿ ಮೂವರು ಭಾರತೀಯ ನಾವಿಕರ ಸಾವಿಗೆ ಕಾರಣವಾದ ನಂತರ ಸಮುದ್ರ ಭದ್ರತೆಯ ಬಗ್ಗೆ ಹೆಚ್ಚಿನ ಕಳವಳಗಳ ನಡುವೆ ಮೋದಿ ಅವರ ಹೇಳಿಕೆಗಳು ಬಂದಿವೆ.

ಜಾಗತಿಕ ಹಡಗು ಮಾರ್ಗಗಳನ್ನು ರಕ್ಷಿಸುವ, ಭಾರತೀಯ ನಾವಿಕರನ್ನು ರಕ್ಷಿಸುವ ಮಹತ್ವವನ್ನು ಪ್ರಧಾನಿ ಪುನರುಚ್ಚರಿಸಿದರು ಮತ್ತು ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಸಾಗಣೆಗೆ ಕರೆ ನೀಡಿದರು. "ನಾವು ಯಾವಾಗಲೂ ನೌಕಾಯಾನ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದ್ದೇವೆ ಮತ್ತು ಅದಕ್ಕೆ ಹೆಚ್ಚಿನ ಒತ್ತು ನೀಡಬೇಕು. ಲಕ್ಷಾಂತರ ಭಾರತೀಯ ನಾವಿಕರು ಸಮುದ್ರ ವ್ಯಾಪಾರ ವಲಯದಲ್ಲಿ ವಿಶ್ವದ ವಿವಿಧ ಸಮುದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅವರ ಭದ್ರತೆಯೂ ಅಷ್ಟೇ ಮುಖ್ಯ ಎಂದು ನಂಬುತ್ತೇನೆ. (ಇರಾನ್ ಜೊತೆಗಿನ) ಒಪ್ಪಂದದಲ್ಲಿ ನಾವಿಕರ ಭದ್ರತೆಯನ್ನು ಖಚಿತಪಡಿಸಿಕೊಳ್ಳಲಾಗುತ್ತದೆ ಮತ್ತು ಆದ್ಯತೆ ನೀಡಲಾಗುತ್ತದೆ ಎಂಬ ವಿಶ್ವಾಸವಿದೆ ಎಂದು ಮೋದಿ ಹೇಳಿದರು.

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮತ್ತು ಈ ಪ್ರದೇಶದಲ್ಲಿ ಶಾಂತಿ ಉಪಕ್ರಮಗಳನ್ನು ಮಾಡಲಾಗಿದೆ ಮುನ್ನಡೆಸಲು ಟ್ರಂಪ್ ಪ್ರಯತ್ನಗಳನ್ನು ಪ್ರಧಾನಿ ಶ್ಲಾಘಿಸಿದರು. "ಪಶ್ಚಿಮ ಏಷ್ಯಾದಲ್ಲಿ ಶಾಂತಿ ಪ್ರಯತ್ನದ ಪ್ರಗತಿಯಲ್ಲಿ ನಿಮ್ಮ ನಾಯಕತ್ವವನ್ನು ನಾನು ಶ್ಲಾಘಿಸುತ್ತೇನೆ" ಎಂದು ಮೋದಿ ಹೇಳಿದ್ದಾರೆ. ಏತನ್ಮಧ್ಯೆ, ಟ್ರಂಪ್ ಎರಡೂ ದೇಶಗಳ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರ ಮತ್ತು ಆರ್ಥಿಕ ಪಾಲುದಾರಿಕೆಯನ್ನು ವಿವರಿಸಿದ್ದಾರೆ ಮತ್ತು ಭಾರತೀಯ ನಾಯಕನ ವೈಯಕ್ತಿಕ ಬಾಂಧವ್ಯವನ್ನು ಪ್ರತಿಪಾದಿಸಿದ್ದಾರೆ.

### ಮೋದಿ ಶಾಂತ, ತಾಳ್ಮೆ, ಆದರೆ ಕಡಕ್

ಮೋದಿ ಜೊತೆ ಟ್ರಂಪ್ ದ್ವಿಪಕ್ಷೀಯ ಮಾತುಕತೆ ನಡೆಸಿದ್ದು, ವ್ಯಾಪಾರ ಒಪ್ಪಂದಗಳಿಗೆ ಸಂಬಂಧಿಸಿದಂತೆ ಉತ್ತಮ ಚರ್ಚೆಗಳಾಗಿವೆ ಎಂದು ಟ್ರಂಪ್ ಹೇಳಿದ್ದಾರೆ. ಇದೇ ವೇಳೆ ತಮ್ಮ ವ್ಯಕ್ತಿತ್ವವನ್ನು ಪ್ರಧಾನಿಯವರ ವ್ಯಕ್ತಿತ್ವದೊಂದಿಗೆ ಹೋಲಿಸುತ್ತಾ, ಪ್ರಧಾನಿ ಮೋದಿ ನನಗಿಂತ ಭಿನ್ನ ವ್ಯಕ್ತಿ, ಅವರು ನೋಡಲು ಕೂಲ್, ಆದರೆ ಕಿಲ್ಲರ್, ನಾನು ಹಾಗಲ್ಲ, ಅವರನ್ನು ನೋಡಿ ಎಂದು ಟ್ರಂಪ್ ಲಘು ದಾಟಿಯಲ್ಲಿ ಹೇಳಿದ್ದಾರೆ. ಈ ತಿಂಗಳ ಆರಂಭದಲ್ಲಿ, ಭಾರತದ ಅತಿ ಹೆಚ್ಚು ಕಾಲ ಸೇವೆ ಸಲ್ಲಿಸಿದ ಪ್ರಧಾನಿಯಾಗಿ ನರೇಂದ್ರ ಮೋದಿ ಅವರನ್ನು ಟ್ರಂಪ್ ಅಭಿನಂದಿಸಿದ್ದರು. ಅವರನ್ನು "ಬಲವಾದ, ಆರೋಗ್ಯಕರ ಮತ್ತು ಬುದ್ಧಿವಂತ ವ್ಯಕ್ತಿ" ಎಂದು ಬಣ್ಣಿಸಿದರು ಮತ್ತು ಅವರು ಮುಂದಿನ ವರ್ಷಗಳಲ್ಲಿ ದೇಶವನ್ನು ಯಶಸ್ವಿಯಾಗಿ ಮುನ್ನಡೆಸುತ್ತಾರೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

## ಸಿಎಂ ವಿಶೇಷ ಕರ್ತವ್ಯಾಧಿಕಾರಿಯಾಗಿ ಬಿ.ಎಸ್. ಶ್ರೀಧರ್ ನೇಮಕ



ಬೆಂಗಳೂರು, ಜೂ.17: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿಯಾಗಿ ಬಿ.ಎಸ್. ಶ್ರೀಧರ್ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಮಾಡಿದೆ. ಡಿ.ಕೆ. ಶಿವಕುಮಾರ್ ಡಿಸಿಎಂ ಆಗಿದ್ದಾಗಲೂ ಅವರೊಂದಿಗೆ ಕರ್ತವ್ಯ ನಿರ್ವಹಿಸಿದ್ದರು.

## ಪರಿಷತ್ ಚುನಾವಣೆಗೆ ಇಂದು ಮತದಾನ

### ಗೆಲ್ಲುವ 7ನೇ ಅಭ್ಯರ್ಥಿ ಯಾರು?

**ಬೆಂಗಳೂರು, ಜೂ.17:** ವಿಧಾನಪರಿಷತ್ತಿನ 7 ಸ್ಥಾನಗಳಿಗೆ ಗುರುವಾರ ಮತದಾನ ನಡೆಯಲಿದೆ. ಮತದಾನ ಪ್ರಕ್ರಿಯೆಯನ್ನು ಸುಗಮವಾಗಿ ಮತ್ತು ಶಾಂತಿಯುತವಾಗಿ ನಡೆಸಲು ಬೆಂಗಳೂರಿನ ವಿಧಾನಸೌಧದಲ್ಲಿ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.

ವಿಧಾನಸೌಧದ ಪ್ರಮುಖ ಸಮಿತಿ ಕೊಠಡಿಯನ್ನು ತಾತ್ಕಾಲಿಕ ಮತಗಟ್ಟೆಯನ್ನಾಗಿ ಪರಿವರ್ತಿಸಲಾಗಿದ್ದು, ಚುನಾವಣಾ ಆಯೋಗದ ಅಧಿಕಾರಿಗಳು ಈಗಾಗಲೇ ಸ್ಥಳ ಪರಿಶೀಲನೆ ನಡೆಸಿ ಅಂತಿಮ ಹಂತದ ವ್ಯವಸ್ಥೆಗಳನ್ನು ಪೂರ್ಣಗೊಳಿಸಿದ್ದಾರೆ.

ಗುರುವಾರ ಬೆಳಗ್ಗೆ 9 ಗಂಟೆಯಿಂದಲೇ ಮತದಾನ ಪ್ರಕ್ರಿಯೆ ಆರಂಭವಾಗಲಿದ್ದು, ಸಂಜೆ 5 ಗಂಟೆಯವರೆಗೆ ಶಾಸಕರು ಹಕ್ಕನ್ನು ಚಲಾಯಿಸಲು ಮುಕ್ತ ಅವಕಾಶ ಕಲ್ಪಿಸಲಾಗಿದೆ. ನಿಗದಿತ ಸಮಯದೊಳಗೆ ಬಂದು ಮತ ಚಲಾಯಿಸುವಂತೆ ಈಗಾಗಲೇ ಎಲ್ಲಾ ರಾಜಕೀಯ ಪಕ್ಷಗಳು ತಮ್ಮ ಶಾಸಕರಿಗೆ ಕಟ್ಟುನಿಟ್ಟಿನ ಸೂಚನೆ (ವಿಪ್) ನೀಡಿವೆ. ಮತದಾನ ಮುಕ್ತಾಯವಾದ ತಕ್ಷಣವೇ ಮತ ಎಣಿಕೆ ಕಾರ್ಯವೂ ಆರಂಭವಾಗುವ ಸಾಧ್ಯತೆ. ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ಲೋಪದೋಷಗಳು ಅಥವಾ ಅಕ್ರಮಗಳು ನಡೆಯದಂತೆ ತಡೆಯಲು ಚುನಾವಣಾ ಆಯೋಗವು ಬಿಗಿ ಭದ್ರತೆಯನ್ನು ಕೈಗೊಂಡಿದೆ. ಮತದಾನ ನಡೆಯುವ ಕಮಿಟಿ ಕೊಠಡಿಯ ಒಳಗಡೆ ಹಾಗೂ ಹೊರಭಾಗದ ಹಜಾರಗಳಲ್ಲಿ ಅತ್ಯಾಧುನಿಕ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇಡೀ ಪ್ರಕ್ರಿಯೆಯನ್ನು ವಿಡಿಯೋ ರೆಕಾರ್ಡಿಂಗ್ ಮಾಡುವ ಮೂಲಕ ಸಂಪೂರ್ಣ ಪಾರದರ್ಶಕತೆಯನ್ನು ಕಾಯ್ದುಕೊಳ್ಳಲಾಗುತ್ತಿದೆ.ಶಾಸಕರು ಯಾವುದೇ ಮುಲಾಜಿಲ್ಲದೆ, ಸ್ವತಂತ್ರವಾಗಿ ಮತ್ತು ಗೌಪ್ಯವಾಗಿ ಮತ ಚಲಾಯಿಸಲು ಅನುಕೂಲವಾಗುವಂತೆ ಕೊಠಡಿಯೊಳಗೆ ಎರಡು ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಶಾಸಕರ ಗೌಪ್ಯತೆಯನ್ನು ಕಾಪಾಡುವುದು ಈ ಚುನಾವಣೆಯ ಪ್ರಮುಖ ಆದ್ಯತೆಯಾಗಿದ್ದು, ಭದ್ರತಾ ಸಿಬ್ಬಂದಿ ಹಾಗೂ ಚುನಾವಣಾ ಏಜೆಂಟರ ಸಮ್ಮುಖದಲ್ಲಿಯೇ ಮತದಾನ ಪ್ರಕ್ರಿಯೆ ಅಚ್ಚುಕಟ್ಟಾಗಿ ಜರುಗಲಿದೆ.

ಕಾಂಗ್ರೆಸ್‌ನ ಐವರು, ಬಿಜೆಪಿಯ ಇಬ್ಬರು ಹಾಗೂ ಎನ್‌ಡಿಎ ಬೆಂಬಲಿತ ಗೋವಿಂದರಾಜು ಸೇರಿ ಒಟ್ಟು 8 ಮಂದಿ ಕಣದಲ್ಲಿದ್ದಾರೆ.

# ಪ್ರಶ್ನೆ ಪತ್ರಿಕೆ ಸೋರಿಕೆ: ರಾಹುಲ್ ಗಾಂಧಿ ಪ್ರತಿಭಟನೆ

**ಕೋಟಾ, ಜೂ. 17:** ದೇಶದ ಶಿಕ್ಷಣ ವಲಯದಲ್ಲಿ ಎದ್ದಿರುವ ಪ್ರಶ್ನೆ ಪತ್ರಿಕೆ ಸೋರಿಕೆ ಬಿರುಗಾಳಿ ನಡುವೆ ಕೋಚಿಂಗ್ ರಾಜಧಾನಿ ಎಂದೇ ಕರೆಯಲಾಗುವ ರಾಜಸ್ಥಾನದ ಕೋಟಾ ನಗರದಲ್ಲಿ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಮಹಾರ್‍ಯಾಲಿ ನಡೆಸಿದರು.

ಮೇ 3ರಂದು ನೀಟ್ ಪರೀಕ್ಷೆ ನಡೆದಿದ್ದು, ಪರೀಕ್ಷೆಯಲ್ಲಿ ಅಕ್ರಮ ಮತ್ತು ಸೋರಿಕೆಯ ಆರೋಪಗಳು ಸಾಬೀತಾದ ನಂತರ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಪರೀಕ್ಷೆಯನ್ನು ರದ್ದುಗೊಳಿಸಿತ್ತು. ಇದೀಗ ಜೂನ್ 21ರಂದು ಮರುಪರೀಕ್ಷೆ ನಡೆಯಲಿದೆ. ಆದರೆ ಈ ವಿದ್ಯಮಾನವು ಲಕ್ಷಾಂತರ ವಿದ್ಯಾರ್ಥಿಗಳನ್ನು ಆತಂಕಕ್ಕೆ ದೂಡಿದೆ. ಈಗಾಗಲೇ ಒತ್ತಡಕ್ಕೆ ಒಳಗಾಗಿ ಹಲವು ವಿದ್ಯಾರ್ಥಿಗಳು ಆತ್ಮಹತ್ಯೆಗೆ ಶರಣಾಗಿದ್ದಾರೆ. ಇವೆಲ್ಲದರ ನಡುವೆ ಮರುಪರೀಕ್ಷೆಗೆ ಮೂರು ದಿನ ಬಾಕಿ ಇರುವಾಗ ರಾಹುಲ್ ಗಾಂಧಿ ಕೋಟಾದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ್ದು, ಬಿಜೆಪಿಯನ್ನು ಆತಂಕಕ್ಕೆ ದೂಡಿದೆ.

ಕೋಟಾದಲ್ಲಿ ಸಾವಿರಾರು ಸಣ್ಣ-ದೊಡ್ಡ ಕೋಚಿಂಗ್ ಸೆಂಟರ್‌ಗಳಿದ್ದು, ಪ್ರತಿವರ್ಷ ಐಐಟಿ, ಜೆಇಇ ಮತ್ತು ನೀಟ್‌ನಂತಹ ಕಠಿಣ ವೈದ್ಯಕೀಯ ಹಾಗೂ ಎಂಜಿನಿಯರಿಂಗ್ ಪ್ರವೇಶ ಪರೀಕ್ಷೆಗಳ ತಯಾರಿಗಾಗಿ ದೇಶದ ಮೂಲೆ ಮೂಲೆಗಳಿಂದ ಸುಮಾರು 2ರಿಂದ 2.5 ಲಕ್ಷ ವಿದ್ಯಾರ್ಥಿಗಳು ಇಲ್ಲಿಗೆ ಬರುತ್ತಾರೆ. ಕೋಟಾದ ಆರ್ಥಿಕತೆಯೇ ಈ ವಿದ್ಯಾರ್ಥಿಗಳು ಮತ್ತು ಇಲ್ಲಿನ ಕೋಚಿಂಗ್ ಉದ್ಯಮದ ಮೇಲೆ ನಿಂತಿದೆ.



ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ 89ಕ್ಕೂ ಹೆಚ್ಚು ಪತ್ರಿಕೆ ಸೋರಿಕೆಯಿಂದಾಗಿ ಯುವಕರ ಭವಿಷ್ಯ ಹರಾಜಾಗಿದೆ.ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಸರ್ಕಾರವೇ ಮರು ಪರೀಕ್ಷೆ ನಡೆಸುತ್ತಿದೆ ಎಂದು ಕಾಂಗ್ರೆಸ್ ಅಗ್ಗದ ರಾಜಕೀಯ ಮಾಡುತ್ತಿದೆ ಎಂದು ಬಿಂಬಿಸಿ ಇಡೀ ಹೋರಾಟದ ತೇಜೋವಧೆ ಮಾಡಲು ಬಿಜೆಪಿ ಪ್ರಯತ್ನಿಸುತ್ತಿದೆ.

**-ರಾಹುಲ್ ಗಾಂಧಿ, ಲೋಕಸಭೆ ವಿಪಕ್ಷ ನಾಯಕ**

### ರಾಹುಲ್ ವಿದ್ಯಾರ್ಥಿಗಳ ಗಮನ ಹಾಳುಮಾಡುತ್ತಿದ್ದಾರೆ

ಬಿಜೆಪಿಯ ರಾಷ್ಟ್ರೀಯ ವಕ್ತಾರ ಸುಧಾಂಶು ತ್ರಿವೇದಿ ಮತ್ತು ಗೌರವ್ ಭಾಟಿಯಾ ಅವರು ದೆಹಲಿ ಹಾಗೂ ಕೋಟಾದಲ್ಲಿ ಪತ್ರಿಕಾಗೋಷ್ಠಿ ನಡೆಸಿ ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮರು ಪರೀಕ್ಷೆಗೆ ಕೇವಲ ಮೂರು ದಿನಗಳಿರುವಾಗ ರಾಜಕೀಯ ಪ್ರವಾಸ ಕೈಗೊಂಡು ರಾಹುಲ್ ಗಾಂಧಿ ವಿದ್ಯಾರ್ಥಿಗಳ ಗಮನವನ್ನು ಹಾಳು ಮಾಡುತ್ತಿದ್ದಾರೆ. ಅವರ ಭವಿಷ್ಯದ ಜೊತೆ ಆಟವಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

### ರ್‍ಯಾಲಿ ಹಳಿತಪ್ಪಿಸಲು ಬಿಜೆಪಿ ಯತ್ನ: ಕಾಂಗ್ರೆಸ್ ಆರೋಪ

ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋತ್ ಸೇರಿ ಪ್ರಮುಖ ಕಾಂಗ್ರೆಸ್ ನಾಯಕರ ಪ್ರಕಾರ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ (ಕೋಟಾ ಇವರದೇ ಕ್ಷೇತ್ರ) ಅವರ ಕಚೇರಿಗೆ ನಿಕಟವಾಗಿರುವ ಕೆಲವರು ಸ್ಥಳೀಯ ಕೋಚಿಂಗ್ ಸಂಸ್ಥೆಗಳು, ಪೇಯಿಂಗ್ ಗೆಸ್ಟ್ ಮಾಲೀಕರು ಮತ್ತು ಹಾಸ್ಟೆಲ್ ನಡೆಸುವವರ ಮೇಲೆ ತೀವ್ರ ಒತ್ತಡ ಹೇರುತ್ತಿದ್ದಾರೆ. ರಾಹುಲ್ ಗಾಂಧಿ ಅವರ ಸಂವಾದ ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳನ್ನು ಕಳುಹಿಸದಂತೆ ಮತ್ತು ಕಳುಹಿಸಿದರೆ ಭೀಕರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಪರೋಕ್ಷವಾಗಿ ಬೆದರಿಕೆ ಹಾಕಲಾಗುತ್ತಿದೆ ಎಂಬ ಆರೋಪಗಳಿವೆ. ರಾಹುಲ್ ಗಾಂಧಿ ಅವರ ಕಾರ್ಯಕ್ರಮವನ್ನು ಹಳಿ ತಪ್ಪಿಸಲು ಬಿಜೆಪಿ ಮತ್ತು ಸ್ಥಳೀಯ ಆಡಳಿತ ವ್ಯವಸ್ಥಿತ ಪ್ರಯತ್ನಗಳನ್ನು ನಡೆಸುತ್ತಿವೆ. ಇನ್ನು ಕೋಟಾ ನಗರದಾದ್ಯಂತ ರಾಹುಲ್ ಗಾಂಧಿ ಅವರ ಕಾರ್ಯಕ್ರಮವನ್ನು ಸ್ವಾಗತಿಸಲು ಹಾಕಲಾಗಿದ್ದ ಬ್ಯಾನರ್‌ಗಳು ಮತ್ತು ಹೋರ್ಡಿಂಗ್ಸ್‌ಗಳನ್ನು ಸ್ಥಳೀಯ ನಗರಪಾಲಿಕೆ ರಾತ್ರೋರಾತ್ರಿ ತೆರವುಗೊಳಿಸಿದೆ. ಅದೇ ಸಮಯದಲ್ಲಿ, ಬಿಜೆಪಿ ಕಾರ್ಯಕ್ರಮಗಳ ಬ್ಯಾನರ್‌ಗಳಿಗೆ ಯಾವುದೇ ಅಡ್ಡಿ ಮಾಡದೆ ಆಡಳಿತ ಯಂತ್ರವನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

### ಆತ್ಮಹತ್ಯೆ ಮಾಡಿಕೊಂಡ ನೀಟ್ ಆಕಾಂಕ್ಷಿಗಳು

**1) ರಿಯಾ ಕುಮಾರಿ:** ವೈದ್ಯಕೀಯ ಪ್ರವೇಶ ಪರೀಕ್ಷೆ ನೀಟ್ ಸಿದ್ಧತೆಯಲ್ಲಿ ತೊಡಗಿದ್ದ 23 ವರ್ಷದ ಯುವತಿ ಡೆಹ್ರಾಡೂನ್‌ನ ಚಂದ್ರಬನಿ ಪ್ರದೇಶದಲ್ಲಿರುವ ತನ್ನ ನಿವಾಸದಲ್ಲಿ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ. ಘಟನೆ ಮಂಗಳವಾರ ವರದಿಯಾಗಿದೆ. ಮೃತಳನ್ನು ರಿಯಾ ಕುಮಾರಿ ಎಂದು ಗುರುತಿಸಲಾಗಿದ್ದು,

ಪೊಲೀಸರ ಮಾಹಿತಿ ಪ್ರಕಾರ, ರಿಯಾ ಸೋಮವಾರ ತಡರಾತ್ರಿಯವರೆಗೆ ತನ್ನ ಕೋಣೆಯಲ್ಲಿ ವ್ಯಾಸಂಗ ಮಾಡುತ್ತಿದ್ದಳು. ಮಂಗಳವಾರ ಬೆಳಿಗ್ಗೆ 10:30ರ ಸುಮಾರಿಗೆ ತಾಯಿ ಉಪಾಹಾರಕ್ಕಾಗಿ ಕರೆದಾಗ ಆಕೆ ಕೋಣೆಯ ಬಾಗಿಲು ತೆರೆಯಲಿಲ್ಲ. ಎಷ್ಟೇ ಕೂಗಿದರೂ ಒಳಗಿನಿಂದ ಪ್ರತಿಕ್ರಿಯೆ ಬಾರದಿದ್ದಾಗ, ಆತಂಕಗೊಂಡ ಪೋಷಕರು ಬಾಗಿಲು ಮುರಿದು ಒಳನುಗ್ಗಿದ್ದಾರೆ. ಈ ವೇಳೆ ರಿಯಾ ನೇಣುಬಿಗಿದುಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದಾಳೆ. ಘಟನಾ ಸ್ಥಳದಲ್ಲಿ ಡೆತ್‌ನೋಟ್ ಪತ್ತೆಯಾಗಿದ್ದು, ಅಪ್ಪ-ಅಮ್ಮ, ಐ ಲವ್ ಯು ಎಂದು ಬರೆದಿದ್ದಾಳೆ. 12ನೇ ತರಗತಿಯಲ್ಲಿ ಶೇ. 96.7ರಷ್ಟು ಅಂಕಗಳನ್ನು ಪಡೆದು ಕಾಲೇಜಿಗೆ ಟಾಪರ್ ಆಗಿದ್ದಳು. ಆದರೆ, ನಿರೀಕ್ಷಿತ ಯಶಸ್ಸು ಸಿಗದ ಕಾರಣ ಆಕೆ ತೀವ್ರ ಹತಾಶೆಗೆ ಒಳಗಾಗಿದ್ದಳು. ಜೊತೆಗೆ, ಇತ್ತೀಚೆಗೆ ರದ್ದಾಗಿದ್ದ ನೀಟ್ ಪರೀಕ್ಷೆ ಹಾಗೂ ಮರುಪರೀಕ್ಷೆ ಆತಂಕವೂ ತೀವ್ರ ಮಾನಸಿಕ ಒತ್ತಡ ಹೇರಿತ್ತು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

**2) ಉಮೇಶ್:** ರಾಜಸ್ಥಾನದ ಸೀಕರ್‌ನಲ್ಲಿ ನೀಟ್ ಅಭ್ಯರ್ಥಿಯಾಗಿದ್ದ 22 ವರ್ಷದ ಉಮೇಶ್ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಮಂಗಳವಾರ ಪೊಲೀಸರು ತಿಳಿಸಿದ್ದಾರೆ. ನೀಟ್ ಮಾಡಿಕೊಳ್ಳುತ್ತಿದ್ದ ಈತ ಖಾಸಗಿ ಪಿಜಿಯಲ್ಲಿ ವಾಸಿಸುತ್ತಿದ್ದ. ಅಲ್ಲೇ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮಾಹಿತಿ ತಿಳಿದ ಉದ್ಯೋಗ ನಗರ ಪೊಲೀಸ್ ತಂಡವು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದೆ. ಕೊಠಡಿಯಲ್ಲಿ ಡೆತ್‌ನೋಟ್ ಸಿಕ್ಕಿದ್ದು, "ನಾನು ತುಂಬಾ ದೂರ ಹೋಗುತ್ತಿದ್ದೇನೆ, ಎಲ್ಲಿಗೆ ಹೋಗುತ್ತಿದ್ದೇನೆ ಎಂದು ನನಗೆ ಗೊತ್ತಿಲ್ಲ... ಕ್ಷಮಿಸಿ," ಎಂದು ಬರೆದಿದ್ದಾನೆ. ಪೊಲೀಸರ ತನಿಖೆ ಮುಂದುವರಿದಿದೆ.

**3) ಕೀರ್ತನಾ:** ತಮಿಳುನಾಡಿನ ಕೊಯಮತ್ತೂರಿನಲ್ಲಿ ಮತ್ತೊಂದು ಘಟನೆ ನಡೆದಿದ್ದು, ವೈದ್ಯಕೀಯ ಕೋರ್ಸ್ ಆಕಾಂಕ್ಷಿಯಾಗಿದ್ದ ಕೀರ್ತನಾ 2025ರಲ್ಲಿ ಇಷ್ಟವಿಲ್ಲದ ಕೋರ್ಸ್ ಸಿಕ್ಕಿದ ಕಾರಣ 2026ರಲ್ಲಿ ಮತ್ತೆ ನೀಟ್ ಪರೀಕ್ಷೆ ಬರೆದಿದ್ದರು. ಆದರೆ, ಪರೀಕ್ಷೆ ರದ್ದುಗೊಂಡಿತ್ತು. ಇದೀಗ ಆಕೆ ವಿಷ ಸೇವಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದಾರೆ. ನೀಟ್-ಯುಜಿ ಮರುಪರೀಕ್ಷೆಗೆ ಕೆಲವೇ ದಿನಗಳು ಬಾಕಿಯಿರುವಾಗ ಈ ಘಟನೆ ಸಂಭವಿಸಿದೆ.

**ಸಹಾಯವಾಣಿ**

**ಪರೀಕ್ಷೆಯ ಒತ್ತಡ, ಆತಂಕ ಅಥವಾ ಯಾವುದೇ ರೀತಿಯ ಮಾನಸಿಕ ತೊಂದರೆಗಳಿದ್ದರೆ ಸಹಾಯ ಪಡೆಯಲು ಹಿಂಜರಿಯಬೇಡಿ. ಭಾರತ ಸರ್ಕಾರದ ಉಚಿತ ಮತ್ತು 24/7 ಲಭ್ಯವಿರುವ ಸಹಾಯವಾಣಿ ಸಂಖ್ಯೆಗಳು ಇಲ್ಲಿವೆ: ಟೆಲಿ-ಮಾನಸ್ (Tele-MANAS - ಭಾರತ ಸರ್ಕಾರ): 14416 ಅಥವಾ 1800-891-4416 ಕಿರಣ್ (Kiran - ಮಾನಸಿಕ ಆರೋಗ್ಯ ಸಹಾಯವಾಣಿ): 1800-599-0019**

# ಇರಾನ್ ಜತೆಗಿನ ಒಪ್ಪಂದಕ್ಕೆ ಇಂದು ಅಥವ ನಾಳೆ ಸಹಿ

**ಎವಿಯನ್-ಲೆಸ್-ಬೈನ್ಸ್ (ಫ್ರಾನ್ಸ್),** ಫ್ರಾನ್ಸ್‌ನಲ್ಲಿ ನಡೆದ ಜಿ7 ಶೃಂಗಸಭೆಯಲ್ಲಿ ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತ್ತಾಹ್ ಎಲ್-ಸಿಸಿ ಅವರೊಂದಿಗೆ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕ ಮತ್ತು ಇರಾನ್ ನಡುವಿನ ಒಪ್ಪಂದವು "ಅಂತಿಮವಲ್ಲ" ಎಂದು ಹೇಳಿದ್ದಾರೆ. ಅಮೆರಿಕ ಮತ್ತು ಇರಾನ್ ತಿಂಗಳುಗಳ ಯುದ್ಧವನ್ನು ಕೊನೆಗೊಳಿಸಲು ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕುವ ಎರಡು ದಿನಗಳ ಮೊದಲು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒಪ್ಪಂದದ ಪಠ್ಯವನ್ನು ಇಷ್ಟಪಡದಿದ್ದರೆ, ಅಮೆರಿಕ ಮತ್ತೆ ದಾಳಿಗಳನ್ನು ಪ್ರಾರಂಭಿಸುತ್ತದೆ ಎಂದು ಹೇಳಿದ್ದಾರೆ. "ಇದು ಒಪ್ಪಂದ ಮಾತ್ರ ಮತ್ತು ನನಗೆ ಅದು ಇಷ್ಟವಾಗದಿದ್ದರೆ, ಇರಾನ್ ಸರಿಯಾಗಿ ಒಪ್ಪಿಕೊಳ್ಳದಿದ್ದರೆ, ಮತ್ತೆ ಬಾಂಬ್ ದಾಳಿ ಮುಂದುವರೆಸುತ್ತೇವೆ ಎಂದು ಎಚ್ಚರಿಕೆ ಕೊಟ್ಟಿದ್ದಾರೆ. ಈ ಹೇಳಿಕೆಯಿಂದ ಜಾಗತಿಕ ಮಟ್ಟದಲ್ಲಿ ಮತ್ತೆ ಆತಂಕದ ವಾತಾವರಣ ಉಂಟಾಗುವ ಭೀತಿ ಎದುರಾಗಿದೆ.

### ಪ್ರಧಾನಿ ಮೋದಿ ಬಗ್ಗೆ ಅವಹೇಳನಕಾರಿ ಹೇಳಿಕೆ

# ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಹಕ್ಕುಚ್ಯುತಿ ಮಂಡನೆ

ನವದೆಹಲಿ, ಜೂ.17: ಪ್ರಧಾನಿ ಮೋದಿ ಬಗ್ಗೆ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಆರು ಬಿಜೆಪಿ ಸಂಸದರು ಹಕ್ಕುಚ್ಯುತಿ ನೋಟಿಸ್ ಸಲ್ಲಿಸಿದ್ದಾರೆ. ಖರ್ಗೆ ಅವರ ಹೇಳಿಕೆ ಸದನದ ಘನತೆ ಮತ್ತು ಸಂಸದೀಯ ಸಂಪ್ರದಾಯಗಳಿಗೆ ಹೊಂದಿಕೆಯಾಗುವುದಿಲ್ಲ ಎಂದು ಸಂಸದರು ಆರೋಪಿಸಿದ್ದಾರೆ. ರಾಜ್ಯಸಭೆಯ ಅಧ್ಯಕ್ಷರು ಈ ವಿಷಯವನ್ನು ಗಮನದಲ್ಲಿಟ್ಟುಕೊಂಡು ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಹಕ್ಕುಚ್ಯುತಿ ಪ್ರಕರಣದ ವಿಚಾರಣೆಯನ್ನು ಪ್ರಾರಂಭಿಸಬೇಕೆಂದು ಬಿಜೆಪಿ ಸಂಸದರು ಒತ್ತಾಯಿಸಿದ್ದಾರೆ.



ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಸಲ್ಲಿಸಲಾದ ಹಕ್ಕುಚ್ಯುತಿ ನೋಟಿಸ್ ರಾಜ್ಯಸಭೆಯ ಅಧ್ಯಕ್ಷ ಸಿ.ಪಿ. ರಾಧಾಕೃಷ್ಣನ್ ಅವರು ತನಿಖೆಗಾಗಿ ಸವಲತ್ತು ಸಮಿತಿಗೆ ಉಲ್ಲೇಖಿಸಿದ್ದಾರೆ. ಸಮಿತಿಯು ಈಗ ಈ ವಿಷಯವನ್ನು ತನಿಖೆ ಮಾಡಿ ತನ್ನ ವರದಿಯನ್ನು ಸಿದ್ಧಪಡಿಸುತ್ತದೆ. ವರದಿಯ ಆಧಾರದ ಮೇಲೆ ಮುಂದಿನ ಕ್ರಮವನ್ನು ನಿರ್ಧರಿಸಲಾಗುತ್ತದೆ.

ರಾಜ್ಯಸಭೆಯಲ್ಲಿನ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮಗಳ ನಿಯಮ 188ರ ಅಡಿಯಲ್ಲಿ ಆರು ಬಿಜೆಪಿ ಸಂಸದರಾದ ಬ್ರಿಜ್ ಲಾಲ್, ಮಿಥಿಲೇಶ್ ಕುಮಾರ್, ಸುಮಿತ್ರಾ ಬಾಲ್ಮಿಕ್, ಶಿವೇಶ್ ಕುಮಾರ್, ಡಾ. ಸಿಕಂದರ್ ಕುಮಾರ್ ಮತ್ತು ನಾಗೇಂದ್ರ ರೈ ಅವರು ಜಂಟಿಯಾಗಿ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಹಕ್ಕು ಉಲ್ಲಂಘನೆಯ ನೋಟಿಸ್ ಸಲ್ಲಿಸಿದರು. ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಪದೇ ಪದೇ ಮತ್ತು ಉದ್ದೇಶಪೂರ್ವಕವಾಗಿ ಅತ್ಯಂತ ಅವಹೇಳನಕಾರಿ ಮತ್ತು ಅಗೌರವದ ಹೇಳಿಕೆಗಳನ್ನು ನೀಡಿದ್ದಾರೆ. ಇದರಿಂದಾಗಿ ಸಂಸತ್ತು ಮತ್ತು ಅದರ ಸದಸ್ಯರ ಘನತೆಗೆ ಧಕ್ಕೆ ಉಂಟಾಗಿದೆ ಎಂದು ನೋಟಿಸ್‌ನಲ್ಲಿ ಆರೋಪಿಸಲಾಗಿದೆ. ಪ್ರಕರಣವನ್ನು ಪರಿಗಣಿಸಿದ ನಂತರ, ರಾಜ್ಯಸಭೆಯ ಅಧ್ಯಕ್ಷ ಸಿ.ಪಿ. ರಾಧಾಕೃಷ್ಣನ್ ಅವರು ತನಿಖೆ, ಪರಿಶೀಲನೆ ಮತ್ತು ವರದಿಗಾಗಿ ವಿಷಯವನ್ನು ಸವಲತ್ತುಗಳ ಸಮಿತಿಗೆ ಉಲ್ಲೇಖಿಸಿದರು.

# ದೆಹಲಿ-ಎನ್‌ಸಿಆರ್‌ನ ಹಲವೆಡೆ ಭಯೋತ್ಪಾದಕ ದಾಳಿಗೆ ಸಂಚು: ಏಳು ಶಂಕಿತರ ಬಂಧನ

### ಪಾಕ್‌ನ ಐಎಸ್‌ಐನಿಂದ ನಿಯಂತ್ರಿಸುತ್ತಿದ್ದ ಗುಂಪಿನ ಚಟುವಟಿಕೆ ಪತ್ತೆ ಹಚ್ಚಿದ ದೆಹಲಿ ಪೊಲೀಸರು

**ನವದೆಹಲಿ, ಜೂ.17:** ಪಾಕಿಸ್ತಾನದ ಐಎಸ್‌ಐ ನಿಯಂತ್ರಿಸುವ ಅಂತಾರಾಷ್ಟ್ರೀಯ ಭಯೋತ್ಪಾದಕ-ಅಪರಾಧ ಗುಂಪಿನ ಚಟುವಟಿಕೆಗಳನ್ನು ಪತ್ತೆ ಮಾಡಿರುವ ದೆಹಲಿ ಪೊಲೀಸರು, ಏಳು ಮಂದಿ ದುಷ್ಕರ್ಮಿಗಳನ್ನು ಬಂಧಿಸಿದ್ದಾರೆ.

ಪಾಕ್ ಮೂಲದ ನಿರ್ವಾಹಕರ ನಿರ್ದೇಶನದ ಮೇರೆಗೆ ಇವರು ಕಾರ್ಯನಿರ್ವಹಿಸುತ್ತಿದ್ದರು. ಈ ಮಾಡ್ಯೂಲ್ ದೆಹಲಿ-ಎನ್‌ಸಿಆರ್ ಭಾಗಗಳಲ್ಲಿ ಭಯೋತ್ಪಾದಕ ದಾಳಿ ನಡೆಸಲು ನೆರೆದೇಶದಿಂದ ಶಸ್ತ್ರಾಸ್ತ್ರ ಮತ್ತು ಮಾದಕ ದ್ರವ್ಯಗಳನ್ನು ಸಾಗಿಸಲು ಡ್ರೋನ್ ಬಳಸಿಕೊಳ್ಳುತ್ತಿದ್ದರು ಎಂಬ ವಿಚಾರ ತನಿಖೆಯಿಂದ ಬಯಲಾಗಿದೆ.

ಬಂಧಿತರನ್ನು ಅನಸ್, ಮೋಹಿತ್, ದೀಪಕ್, ಆರಿಫ್, ಕರಣ್ವೀರ್ ಸಿಂಗ್, ಜತನ್ ಮತ್ತು ಸಬೀರ್ ಎಂದು ಗುರುತಿಸಲಾಗಿದೆ. ಈ ಕುರಿತು ಮಾಹಿತಿ ನೀಡಿರುವ ದೆಹಲಿ ಪೊಲೀಸ್ ವಿಶೇಷ ಘಟಕದ ಡಿಸಿಪಿ ನಾರಾ ಚೈತನ್ಯ ಅವರು, ಪಾಕಿಸ್ತಾನದ ದರೋಡೆಕೋರ ಮತ್ತು ಭಯೋತ್ಪಾದಕ ಶಹಜಾದ್ ಭಟ್ಟಿ ಮತ್ತು ಆತನ ಸಹಚರ ಅಜ್ಮಲ್ ಗುಜ್ಜರ್ ಈ ಕಾರಸ್ತಾನ ನಡೆಸುತ್ತಿದ್ದರು.

ಆರೋಪಿಗಳು 2025ರ ನವೆಂಬರ್‌ನಿಂದ ಪಾಕಿಸ್ತಾನ ಮೂಲದ ಈ ಹ್ಯಾಂಡ್ಲರ್‌ಗಳೊಂದಿಗೆ ಸಂಪರ್ಕದಲ್ಲಿದ್ದರು ಎಂದು ತನಿಖಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬಂಧಿತರಿಂದ 5 ಅತ್ಯಾಧುನಿಕ ಅರೆ-ಸ್ವಯಂಚಾಲಿತ ಪಿಸ್ತೂಲ್‌ಗಳು, 41 ಜೀವಂತ ಗುಂಡುಗಳು, ಏಳು ಮೊಬೈಲ್ ಫೋನ್ ಮತ್ತು ಒಂದು ಸ್ಕಾರ್ಪಿಯೋ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ವಶಕ್ಕೆ ಪಡೆದ ಮೊಬೈಲ್ ಫೋನ್‌ಗಳನ್ನು ವಿಧಿವಿಜ್ಞಾನ ಪರೀಕ್ಷೆಗೆ ಒಳಪಡಿಸಲಾಗಿದ್ದು, ಇದರಲ್ಲಿ ಹಲವಾರು ಸಂಭಾಷಣೆಗಳು, ಧ್ವನಿ ಮೆಮೊಗಳು ಮತ್ತು ಇತರ ಡೇಟಾಗಳು ಪತ್ತೆಯಾಗಿವೆ. ಈ ಗುಂಪು ಶಸ್ತ್ರಾಸ್ತ್ರಗಳು ಮತ್ತು ಮಾದಕವಸ್ತುಗಳ ಅಕ್ರಮ ವ್ಯಾಪಾರದ ಹಣ ರವಾನಿಸಲು ಬಳಸುತ್ತಿದ್ದ ಅನೇಕ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಲಾಗಿದೆ.

2026ರ ಮೇಯಲ್ಲಿ ಲಭ್ಯವಾದ ಗುಪ್ತಚರ ಮಾಹಿತಿಯ ಪ್ರಕಾರ, ಐಎಸ್‌ಐ ಆದೇಶಗಳನ್ನು ಅನುಸರಿಸಿ, ಹ್ಯಾಂಡ್ಲರ್‌ಗಳು ಭಾರತೀಯರನ್ನು ನೇಮಕ ಮಾಡಿಕೊಳ್ಳಲು ಸಕ್ರಿಯವಾಗಿ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ತೊಡಗಿಸಿಕೊಂಡಿದ್ದರು. ಈ ಕುರಿತು ಮಾಹಿತಿ ಪಡೆದ ಪೊಲೀಸರು, ಯಮುನಾ ವಿಹಾರ್‌ನಲ್ಲಿರುವ ಭಾಗೀರಥ ನೀರು ಸಂಸ್ಕರಣಾ ಘಟಕದ ಸಮೀಪದಲ್ಲಿ ಮೋಹಿತ್‌ನನ್ನು ಬಂಧಿಸಿ, ಅಕ್ರಮ ಪಿಸ್ತೂಲ್ ಮತ್ತು ಪಾಕಿಸ್ತಾನಕ್ಕೆ ಸಂಬಂಧಿಸಿದ ಚಾಟ್‌ಗಳನ್ನು ಹೊಂದಿರುವ ಮೊಬೈಲ್ ಫೋನ್ ವಶಪಡಿಸಿಕೊಂಡಿದ್ದರು.

ಇವರು ಪಾಕಿಸ್ತಾನದಿಂದ ಪಂಜಾಬ್‌ಗೆ ಡ್ರೋನ್‌ಗಳ ಮೂಲಕ ಶಸ್ತ್ರಾಸ್ತ್ರ ಮತ್ತು ಮಾದಕವಸ್ತು ಸರಕುಗಳನ್ನು ತರಿಸಿಕೊಂಡು ದೆಹಲಿ-ಎನ್‌ಸಿಆರ್‌ಗೆ ತೆಗೆದುಕೊಂಡು ಹೋಗಿ ನಂತರ ರಹಸ್ಯ ಡೆಡ್ ಡ್ರಾಪ್ ವಿತರಣಾ ವಿಧಾನದ ಮೂಲಕ ವಿತರಿಸುತ್ತಿದ್ದು, ಸುವ್ಯವಸ್ಥಿತ ಲಾಜಿಸ್ಟಿಕ್ಸ್ ಜಾಲವಿರುವುದನ್ನು ಪೊಲೀಸರು ಪತ್ತೆ ಹಚ್ಚಿದ್ದಾರೆ.



# ಟಿಎಂಸಿ ಬಗ್ಗೆ ನಾಳೆ ಸ್ಪೀಕರ್ ಓಂ ಬಿರ್ಲಾ ವಿಚಾರಣೆ

**ನವದೆಹಲಿ, ಜೂ. 17:** ಪಶ್ಚಿಮ ಬಂಗಾಳದ ತೃಣಮೂಲ ಕಾಂಗ್ರೆಸ್ ಪಕ್ಷದಲ್ಲಿ ಉಂಟಾಗಿರುವ ಭಿನ್ನಮತ ಮತ್ತು ಸಂಸದರ ಸೀಳಿಕೆಯ ಬಿಕ್ಕಟ್ಟು ಈಗ ದೇಶದ ಸಂಸತ್ತಿನ ಅಂಗಳ ತಲುಪಿದೆ. ಟಿಎಂಸಿ ಪಕ್ಷದ ಭವಿಷ್ಯವನ್ನು ನಿರ್ಧರಿಸಬಲ್ಲ ಅತ್ಯಂತ ಪ್ರಮುಖ ರಾಜತಾಂತ್ರಿಕ ನಡಾವಳಿಯಲ್ಲಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಜೂನ್ 19 ರಂದು ಟಿಎಂಸಿ ಪ್ರಧಾನ ಕಾರ್ಯದರ್ಶಿ ಹಾಗೂ ಸಂಸದ ಅಭಿಷೇಕ್ ಬ್ಯಾನರ್ಜಿ ಅವರಿಗೆ ತಮ್ಮ ವಾದ ಮಂಡಿಸಲು ಆಹ್ವಾನ ನೀಡಿದ್ದಾರೆ. ಪಕ್ಷದ ಉಭಯ ಬಣಗಳ ವಾದ–ಪ್ರತಿವಾದಗಳನ್ನು ಆಲಿಸಿದ ಬಳಿಕ ಸ್ಪೀಕರ್ ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ.

ಟಿಎಂಸಿಯ ಒಟ್ಟು 20 ಬಂಡಾಯ ಸಂಸದರು ರಾಷ್ಟ್ರೀಯತಾವಾದಿ ನಾಗರಿಕರ ಪಕ್ಷ ಎಂಬ ಪ್ರಾದೇಶಿಕ ಪಕ್ಷದೊಂದಿಗೆ ವಿಲೀನಗೊಂಡಿದ್ದು, ತಮಗೆ ಸಂಸತ್ತಿನಲ್ಲಿ ಪ್ರತ್ಯೇಕ ಗುಂಪಾಗಿ ಮಾನ್ಯತೆ ನೀಡಬೇಕು ಎಂದು ಸ್ಪೀಕರ್ಗೆ ಅರ್ಜಿ ಸಲ್ಲಿಸಿದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಈಗಾಗಲೇ ಬಂಡಾಯ ಸಂಸದರ ನಿಯೋಗವನ್ನು ಭೇಟಿಯಾಗಿ ಅವರ ಅಹವಾಲನ್ನು ಆಲಿಸಿದ್ದಾರೆ. ಮತ್ತೊಂದೆಡೆ, ಪಶ್ಚಿಮ ಬಂಗಾಳ ಸಿಎಂ ಮಮತಾ ನೇತೃತ್ವದ ಅಧಿಕೃತ ಟಿಎಂಸಿ ಬಣವೂ ಸಹ ಸ್ಪೀಕರ್ ಭೇಟಿಗೆ ಸಮಯಾವಕಾಶ ಕೋರಿತ್ತು. ಉಭಯ ಬಣಗಳ ನಡುವಿನ ಈ ಸಂಘರ್ಷ ನ್ಯಾಯಾಲಯದ ಮೆಟ್ಟಿಲೇರಿದರೆ ಯಾವುದೇ ಕಾನೂನು ತೊಡಕು ಎದುರಾಗಬಾರದು ಎಂಬ ಕಾರಣಕ್ಕೆ, ಸ್ಪೀಕರ್ ಅವರು ಈ ವಿಷಯದಲ್ಲಿ ದೇಶದ ಪ್ರಮುಖ ಕಾನೂನು ತಜ್ಞರ ಮತ್ತು ಸಾಂವಿಧಾನಿಕ ತಜ್ಞರ ಅಭಿಪ್ರಾಯವನ್ನು ಪಡೆಯುತ್ತಿದ್ದಾರೆ. ಜುಲೈ 3ನೇ ವಾರದಲ್ಲಿ ಆರಂಭವಾಗಲಿರುವ ಸಂಸತ್ತಿನ ಮುಂಗಾರು ಅಧಿವೇಶನಕ್ಕೂ ಮುನ್ನವೇ ಈ ಕುರಿತು ಅಂತಿಮ ತೀರ್ಮಾನ ಹೊರಬೀಳುವ ಸಾಧ್ಯತೆಯಿದೆ. ಸೋಮವಾರ ಮಧ್ಯಾಹ್ನ ಸುಮಾರು 2 ಗಂಟೆಗೆ ಸ್ಪೀಕರ್ ಕಚೇರಿಯಿಂದ ಅಭಿಷೇಕ್ ಬ್ಯಾನರ್ಜಿ ಅವರಿಗೆ ಇಮೇಲ್ ಕಳುಹಿಸಲಾಗಿತ್ತು. ಅಂದೇ ಸಂಜೆ 4 ಗಂಟೆಗೆ ಸ್ಪೀಕರ್ ಓಂ ಬಿರ್ಲಾ ಅವರನ್ನು ಭೇಟಿಯಾಗಿ ವಿವರಣೆ ನೀಡುವಂತೆ ಅದರಲ್ಲಿ ಸೂಚಿಸಲಾಗಿತ್ತು. ಆದರೆ, ಆ ಸಮಯದಲ್ಲಿ ಕೋಲ್ಕತಾದಲ್ಲಿ ಕಲ್ಲಿದ್ದಲು ಅಥವಾ ಶಿಕ್ಷಕರ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಇಡಿ ಅಧಿಕಾರಿಗಳು ಅಭಿಷೇಕ್ ಬ್ಯಾನರ್ಜಿ ಅವರ ತೀವ್ರ ವಿಚಾರಣೆ ನಡೆಸುತ್ತಿದ್ದರು.

ಹೀಗಾಗಿ ಟಿಎಂಸಿ ಸಂಸದ ಕೀರ್ತಿ ಆಜಾದ್ ಅವರು ತಕ್ಷಣವೇ ಸ್ಪೀಕರ್ ಕಚೇರಿಯನ್ನು ಸಂಪರ್ಕಿಸಿ, ಅಭಿಷೇಕ್ ಅವರು ತನಿಖಾ ಸಂಸ್ಥೆಗಳೊಂದಿಗೆ ಸಂಪೂರ್ಣವಾಗಿ ಸಹಕರಿಸುತ್ತಿದ್ದಾರೆ ಮತ್ತು ವಿಚಾರಣೆಯಲ್ಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ನಂತರ ಖುದ್ದಾಗಿ ಸ್ಪೀಕರ್ ಅವರನ್ನು ಭೇಟಿಯಾದ ಕೀರ್ತಿ ಆಜಾದ್ ಪರಿಸ್ಥಿತಿಯನ್ನು ವಿವರಿಸಿದರು. ಇಡಿ ಅಧಿಕಾರಿಗಳು ಮಧ್ಯರಾತ್ರಿಯವರೆಗೂ ವಿಚಾರಣೆ ನಡೆಸಿ ನಂತರ ಅಭಿಷೇಕ್ ಅವರನ್ನು ಬಿಡುಗಡೆ ಮಾಡಿದ್ದರು ಎಂದು ಪಕ್ಷದ ಮೂಲಗಳು ತಿಳಿಸಿವೆ.

ಲೋಕಸಭೆಯಲ್ಲಿ ಟಿಎಂಸಿಗೆ ಭಾರಿ ಆಘಾತ ನೀಡಿರುವ ಸುಮಾರು 20 ಸಂಸದರ ಈ ಬಣವನ್ನು ಹಿರಿಯ ನಾಯಕಿ ಕಾಕೋಲಿ ಘೋಷ್ ದಸ್ತಿದಾರ್ ಮುನ್ನಡೆಸುತ್ತಿದ್ದಾರೆ. ಸದ್ಯಕ್ಕೆ ತಾವೆಲ್ಲರೂ ಎನ್ಸಿಪಿಐ ಪಕ್ಷವನ್ನು ಸೇರುತ್ತಿರುವುದಾಗಿ ಘೋಷಿಸಿರುವ ಈ ಗುಂಪು, ಮುಂದಿನ ದಿನಗಳಲ್ಲಿ ತಾವೇ ಅಸಲಿ ಟಿಎಂಸಿ ಎಂದು ಘೋಷಿಸಿಕೊಳ್ಳಲು ಮತ್ತು ಪಕ್ಷದ ಚಿಹ್ನೆಯನ್ನು ಪಡೆಯಲು ಕಾನೂನು ಹೋರಾಟ ನಡೆಸಲು ಸಿದ್ಧತೆ ನಡೆಸಿದೆ.

# ರಕ್ಷಣಾ ಕ್ಷೇತ್ರದಲ್ಲಿ ಭಾರತದ ಮಹತ್ವದ ಸಾಧನೆ

## 1.78 ಲಕ್ಷ ಕೋಟಿ ತಲುಪಿದ ರಕ್ಷಣಾ ವಲಯದ ತಯಾರಿಕೆ

**ನವದೆಹಲಿ, ಜೂ.17:** ಭಾರತದ ರಕ್ಷಣಾ ತಯಾರಿಕೆಯು 2025–26ರ ಹಣಕಾಸು ವರ್ಷದಲ್ಲಿ ದಾಖಲೆಯ 1.78 ಲಕ್ಷ ಕೋಟಿ ರೂಪಾಯಿ ಮಟ್ಟ ತಲುಪಿದೆ. ಇದು ಹಿಂದಿನ ವರ್ಷಕ್ಕೆ ಹೋಲಿಸಿದರೆ 15.6 ಪ್ರತಿಶತ ಹೆಚ್ಚಳವಾಗಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇದನ್ನು ಆತ್ಮನಿರ್ಭರ್ ಭಾರತದ ದೊಡ್ಡ ಸಾಧನೆ ಎಂದು ಬಣ್ಣಿಸಿದ್ದಾರೆ.




ಹಿಂದಿನ ಹಣಕಾಸು ವರ್ಷ 2024–25ರಲ್ಲಿ ರಕ್ಷಣಾ ತಯಾರಿಕೆ 1.54 ಲಕ್ಷ ಕೋಟಿ ಇತ್ತು. 2020–21ರಲ್ಲಿ ಇದು 84,643 ಕೋಟಿ ಮಾತ್ರ ಇತ್ತು. ಈಗ 110 ಪ್ರತಿಶತ ಹೆಚ್ಚಳವಾಗಿದೆ. 2013–14ರಲ್ಲಿ 43,746 ಕೋಟಿ ಇದ್ದುದು ಈಗ ನಾಲ್ಕು ಪಟ್ಟು ಹೆಚ್ಚಾಗಿದೆ. ಇದು ರಕ್ಷಣಾ ಕ್ಷೇತ್ರದಲ್ಲಿ ಭಾರತದ ಬಲವರ್ಧನೆಯ ಸ್ಪಷ್ಟ ಸೂಚನೆಯಾಗಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆ ನೀಡಿ, ರಕ್ಷಣಾ ತಯಾರಿಕೆ ಇಲಾಖೆ, ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರಗಳ ಪ್ರಯತ್ನಗಳನ್ನು ಅವರು ಪ್ರಶಂಸಿಸಿದರು, ಇದು ದೇಶದ ರಕ್ಷಣಾ ಕೈಗಾರಿಕಾ ಬುನಾದಿಯ ಬಲವರ್ಧನೆಯ ಸ್ಪಷ್ಟ ಸಂಕೇತ. ಸರ್ಕಾರದ ನೀತಿಗಳು, ಹೊಸ ಉಪಕ್ರಮಗಳು ಮತ್ತು ಖಾಸಗಿ ಕ್ಷೇತ್ರದ ಹೆಚ್ಚುತ್ತಿರುವ ಪಾಲ್ಗೊಳ್ಳುವಿಕೆಯಿಂದ ಮುಂದಿನ ವರ್ಷಗಳಲ್ಲಿ ಇನ್ನಷ್ಟು ವೇಗವಾಗಿ ಬೆಳೆಯುತ್ತದೆ ಎಂದು ಹೇಳಿದ್ದಾರೆ.

**ಖಾಸಗಿ ಕಂಪನಿಗಳ ಪಾತ್ರ ಹೆಚ್ಚಳ :** ಒಟ್ಟು ತಯಾರಿಕೆಯಲ್ಲಿ ಸರ್ಕಾರಿ ಕಂಪನಿಗಳ (DPSUsಮತ್ತು ಇತರ PSUಗಳು) ಪಾಲು ಸುಮಾರು 76 ಪ್ರತಿಶತವಿದೆ. ಖಾಸಗಿ ಕ್ಷೇತ್ರದ ಪಾಲು 24 ಪ್ರತಿಶತಕ್ಕೆ ಏರಿದೆ (ಹಿಂದಿನ ವರ್ಷ 22 ಪ್ರತಿಶತ). ಈಜ26ರಲ್ಲಿ ಖಾಸಗಿ ಕ್ಷೇತ್ರವು ಸುಮಾರು 42,000 ಕೋಟಿ ಉತ್ಪಾದನೆ ಮಾಡಿದೆ.

**ರಕ್ಷಣಾ ರಫ್ತು ಸಹ ದಾಖಲೆ:** ರಕ್ಷಣಾ ತಯಾರಿಕೆಯ ಬೆಳವಣಿಗೆ ರಫ್ತಿನ ಮೇಲೂ ಪರಿಣಾಮ ಬೀರಿದೆ. FY26ರಲ್ಲಿ ಭಾರತವು 38,424 ಕೋಟಿ ರಕ್ಷಣಾ ಸಾಮಗ್ರಿ ರಫ್ತು ಮಾಡಿದೆ. ಇದು ಪ್ರಧಾನಿ ಮೋದಿ ಅವರ ಆತ್ಮನಿರ್ಭರ್ ಭಾರತ ಅಭಿಯಾನಕ್ಕೆ ದೊಡ್ಡ ಯಶಸ್ಸು ಎಂದು ರಕ್ಷಣಾ ಸಚಿವಾಲಯ ಹೇಳಿದೆ. ಭಾರತ ಈಗ ರಕ್ಷಣಾ ಸಾಮಗ್ರಿ ತಯಾರಿಕೆಯಲ್ಲಿ ಸ್ವಾವಲಂಬನೆಯತ್ತ ತ್ವರಿತಗತಿಯಲ್ಲಿ ಸಾಗುತ್ತಿದೆ.

# ಶಾಂತಿ ಒಪ್ಪಂದ ಉಲ್ಲಂಘಿಸಿದ ಇಸ್ರೇಲ್ ಲೆಬನಾನ್ ಮೇಲೆ ದಾಳಿ, ನಾಲ್ವರ ಸಾವು

**ಲೆಬನಾನ್, ಜೂ. 17:** ಅಮೆರಿಕ ಮತ್ತು ಇರಾನ್ ನಡುವೆ ಜಾಗತಿಕ ಮಟ್ಟದಲ್ಲಿ ಶಾಂತಿ ಮಾತುಕತೆಗಳು ಮತ್ತು ಕದನ ವಿರಾಮದ ಪ್ರಯತ್ನಗಳು ತೀವ್ರವಾಗಿ ನಡೆಯುತ್ತಿದ್ದರೂ, ಮಧ್ಯಪ್ರಾಚ್ಯದಲ್ಲಿ ರಕ್ತಪಾತ ಮಾತ್ರ ನಿಂತಿಲ್ಲ. ದಕ್ಷಿಣ ಲೆಬನಾನ್‌ನ ನಬಾತಿಯಾ ಪ್ರಾಂತ್ಯದ ಮೇಲೆ ಇಸ್ರೇಲ್ ಸೇನೆ ಮಂಗಳವಾರ ನಡೆಸಿದ ಭೀಕರ ವೈಮಾನಿಕ ಮತ್ತು ಡ್ರೋನ್ ದಾಳಿಗಳಲ್ಲಿ ಕನಿಷ್ಠ ನಾಲ್ವರು ನಾಗರಿಕರು ಸಾವನ್ನಪ್ಪಿದ್ದಾರೆ ಎಂದು ಲೆಬನಾನ್‌ನ ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ.



ಎಲ್ಲಾ ರಂಗಗಳಲ್ಲೂ ಯುದ್ಧ ಕೊನೆಗಾಣಿಸಲು ಅಮೆರಿಕ–ಇರಾನ್ ನಡುವೆ ಇತ್ತೀಚೆಗಷ್ಟೇ ಒಪ್ಪಂದ ಏರ್ಪಟ್ಟ ಬೆನ್ನಲ್ಲೇ ಈ ಘಟನೆ ನಡೆದಿರುವುದು ಜಾಗತಿಕ ಆತಂಕಕ್ಕೆ ಕಾರಣವಾಗಿದೆ. ಲೆಬನಾನ್‌ನ ಮೇಫಡೌನ್ ಎಂಬಲ್ಲಿ ಎರಡು ಪ್ರತ್ಯೇಕ ವಾಹನಗಳನ್ನು ಗುರಿಯಾಗಿಸಿ ಇಸ್ರೇಲ್ ಡ್ರೋನ್ ದಾಳಿ ನಡೆಸಿದೆ. ಇದರ ಬೆನ್ನಲ್ಲೇ ಶೌಕಿನ್ ಗ್ರಾಮದಲ್ಲೂ ಮತ್ತೊಂದು ವಾಹನದ ಮೇಲೆ ದಾಳಿ ಮಾಡಲಾಗಿದೆ ಎಂದು ವರದಿಗಳು ತಿಳಿಸಿವೆ.

ಅಮೆರಿಕ ಮತ್ತು ಇರಾನ್ ನಡುವಿನ ಶಾಂತಿ ಒಪ್ಪಂದದಲ್ಲಿ ಮಧ್ಯಸ್ಥಿಕೆ ವಹಿಸಿದ್ದ ಪಾಕಿಸ್ತಾನದ ಪ್ರಧಾನಿ, ಈ ಒಪ್ಪಂದದ ಪ್ರಕಾರ ಲೆಬನಾನ್ ಸೇರಿದಂತೆ ಎಲ್ಲಾ ಮುಂಭಾಗಗಳಲ್ಲಿ ತಕ್ಷಣವೇ ಮಿಲಿಟರಿ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಬೇಕು ಎಂದು ಸೋಮವಾರವಷ್ಟೇ ಸ್ಪಷ್ಟಪಡಿಸಿದ್ದರು. ಆದರೆ, ಒಪ್ಪಂದ ಘೋಷಣೆಯಾದ ಕೆಲವೇ ಗಂಟೆಗಳಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಇಸ್ರೇಲ್ ಸೇನೆಯು ದಕ್ಷಿಣ ಲೆಬನಾನ್ ಅನ್ನು ತನ್ನ ನಿಯಂತ್ರಣದಲ್ಲೇ ಇಟ್ಟುಕೊಳ್ಳಲಿದೆ ಮತ್ತು ದಾಳಿ ಮುಂದುವರಿಸಲಿದೆ ಎಂದು ಹೇಳಿಕೆ ನೀಡಿದ್ದರು.

ಇಸ್ರೇಲ್ ದಾಳಿಗೆ ಇರಾನ್ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಮಾತನಾಡಿ, ದಕ್ಷಿಣ ಲೆಬನಾನ್‌ನಿಂದ ಇಸ್ರೇಲ್ ಪಡೆಗಳು ಸಂಪೂರ್ಣವಾಗಿ ಹಿಂತೆಗೆದು ಕೊಳ್ಳದಿದ್ದರೆ ಯುದ್ಧ ಕೊನೆಗೊಂಡಿದೆ ಎಂದು ಅರ್ಥವಲ್ಲ. ಇಸ್ರೇಲ್‌ನ ಮುಂದುವರಿದ ಆಕ್ರಮಣವು ಶಾಂತಿ ಒಪ್ಪಂದದ ನೇರ ಉಲ್ಲಂಘನೆಯಾಗಿದೆ ಎಂದು ಎಚ್ಚರಿಸಿದ್ದಾರೆ. ಇತ್ತ ಇರಾನ್‌ನ ಸಶಸ್ತ್ರ ಪಡೆಗಳ ಕೇಂದ್ರ ಕಮಾಂಡ್, ಇಸ್ರೇಲ್ ತಕ್ಷಣವೇ ದಾಳಿ ನಿಲ್ಲಿಸದಿದ್ದರೆ ಇರಾನ್ ಸೇನೆಯಿಂದ ಭೀಕರ ಪ್ರತ್ಯುತ್ತರ ಎದುರಿಸಬೇಕಾಗುತ್ತದೆ ಎಂದು ಖಡಕ್‌ಎಚ್ಚರಿಕೆ ನೀಡಿದೆ.

ಇರಾನ್‌ನ ಪ್ರಮುಖ ಸಂಧಾನಕಾರ ಮೊಹಮ್ಮದ್ ಬಾಗೇರ್ ಗಾಲಿಬಾಫ್ ಅವರು ಲೆಬನಾನ್ ಸಂಸತ್ತಿನ ಸ್ಪೀಕರ್ ನಬಿ ಬೆರ್ರಿ ಅವರೊಂದಿಗೆ ದೂರವಾಣಿ ಮೂಲಕ ಚರ್ಚೆ ನಡೆಸಿದ್ದಾರೆ. ಲೆಬನಾನ್ ಮೇಲಿನ ಯುದ್ಧವನ್ನು ನಿಲ್ಲಿಸಲು, ಮನೆಗಳ ಧ್ವಂಸವನ್ನು ತಡೆಯಲು ಮತ್ತು ಇಸ್ರೇಲ್ ಪಡೆಗಳನ್ನು ಹಿಂಪಡೆಯುವಂತೆ ಮಾಡಲು ಅಮೆರಿಕವು ಇಸ್ರೇಲ್ ಮೇಲೆ ಒತ್ತಡ ಹೇರಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಇನ್ನೊಂದೆಡೆ, ಅಮೆರಿಕದೊಂದಿಗಿನ ಮುಂದಿನ ಹಂತದ ಮಾತುಕತೆಯಲ್ಲಿ ಇಸ್ರೇಲ್ ಸೇನೆಯನ್ನು ಲೆಬನಾನ್‌ನಿಂದ ಸಂಪೂರ್ಣವಾಗಿ ಹೊರಹಾಕಲು ಇರಾನ್ ಬದ್ಧವಾಗಿದೆ ಎಂಬ ಗಟ್ಟಿಯಾದ ಭರವಸೆ ತಮಗೆ ಸಿಕ್ಕಿದೆ ಎಂದು ಲೆಬನಾನ್‌ನ ಸಶಸ್ತ್ರ ಗುಂಪು ಹಿಜ್ಬುಲ್ಲಾ ತಿಳಿಸಿರುವುದಾಗಿ ರಾಯಿಟರ್ಸ್ ವರದಿ ಮಾಡಿದೆ. ಯುದ್ಧದ ತೀವ್ರತೆ ಕಡಿಮೆಯಾಗಬಹುದು ಎಂಬ ನಿರೀಕ್ಷೆಯಲ್ಲಿ ನಬಾತಿಯಾ ಪ್ರಾಂತ್ಯದ ನಾಗರಿಕರು ತಮ್ಮ ಮನೆ ಮತ್ತು ಆಸ್ತಿಪಾಸ್ತಿಗಳನ್ನು ಪರಿಶೀಲಿಸಲು ಮರಳುತ್ತಿದ್ದಾರೆ. ಆದರೆ ಅಲ್ಲಿ ಸದ್ಯ ತೀವ್ರ ನಿರಾಶೆ ಮತ್ತು ಭೀತಿಯ ವಾತಾವರಣ ನೆಲೆಸಿದೆ. ಇದು ಇಸ್ರೇಲ್ ಜೊತೆಗಿನ ದಶಕಗಳ ಹಳೆಯ ಸಂಘರ್ಷ. ನಂಬಿಕೆಗೆ ಅರ್ಹವಲ್ಲದ ಶತ್ರು ದೇಶದ ಮುಂದೆ ನಾವು ಎಂದಿಗೂ ಸುರಕ್ಷಿತವಾಗಿರಲು ಸಾಧ್ಯವಿಲ್ಲ ಎಂದು ಸ್ಥಳೀಯ ನಿವಾಸಿ ಮೊಹಮ್ಮದ್ ನಾಸರ್ ಅಳಲು ತೋಡಿಕೊಂಡಿದ್ದಾರೆ.

ಕಳೆದ ಮಾರ್ಚ್ 2 ರಂದು ಯುದ್ಧ ಪುನರಾರಂಭಗೊಂಡಾಗಿನಿಂದ ಇಸ್ರೇಲ್ ನಡೆಸಿದ ಭೀಕರ ದಾಳಿಗಳಿಗೆ ಲೆಬನಾನ್‌ನಲ್ಲಿ ಕನಿಷ್ಠ 3,826 ಜನರು ಬಲಿಯಾಗಿದ್ದಾರೆ ಮತ್ತು 11,851 ಕ್ಕೂ ಹೆಚ್ಚು ಜನರು ತೀವ್ರವಾಗಿ ಗಾಯಗೊಂಡಿದ್ದಾರೆ ಎಂದು ಅಲ್ಲಿನ ಆರೋಗ್ಯ ಸಚಿವಾಲಯದ ಅಂಕಿ–ಅಂಶಗಳು ತಿಳಿಸಿವೆ.

# ರಾಂಚಿಯಲ್ಲಿನ ಆರ್‌ಎಸ್‌ಎಸ್ ಕಚೇರಿ ಮೇಲೆ ಪೆಟ್ರೋಲ್ ಬಾಂಬ್ ಎಸೆಯಲು ಯತ್ನ: ದುಷ್ಕರ್ಮಿಗಳ ವಿರುದ್ಧ ಪ್ರಕರಣ

**ರಾಂಚಿ, ಜೂ.17:** ನಿವರಣ್‌ಪುರ ಪ್ರದೇಶದಲ್ಲಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘ ಕಚೇರಿಯ ಮೇಲೆ ಮಂಗಳವಾರ ತಡರಾತ್ರಿ ಪೆಟ್ರೋಲ್ ಬಾಂಬ್‌ಗಳನ್ನು ಬಳಸಿ ದಾಳಿ ಮಾಡಲು ಯತ್ನಿಸಿದ ಘಟನೆ ನಡೆದಿದೆ.



ಪೊಲೀಸರು ನೀಡಿದ ಮಾಹಿತಿಯ ಪ್ರಕಾರ, ಮಂಗಳವಾರ ತಡರಾತ್ರಿ ಇಬ್ಬರು ದುಷ್ಕರ್ಮಿಗಳು ಪೆಟ್ರೋಲ್ ತುಂಬಿದ ಬಾಟಲಿಗಳನ್ನು ಆರ್‌ಎಸ್‌ಎಸ್ ಕಚೇರಿ ಆವರಣದೊಳಗೆ ಎಸೆಯಲು ಪ್ರಯತ್ನಿಸಿದ್ದಾರೆ. ಆದರೆ, ಎರಡೂ ಬಾಟಲಿಗಳು ಗೋಡೆಗೆ ಬಡಿದು ಹೊರಭಾಗದಲ್ಲೇ ಬಿದ್ದಿವೆ. ದಾಳಿಯಲ್ಲಿ ಆರ್‌ಎಸ್‌ಎಸ್ ಕಚೇರಿಗೆ ಯಾವುದೇ ಹಾನಿಯಾಗಿಲ್ಲ.

ಘಟನೆಯ ಕುರಿತು ಮಾಹಿತಿ ತಿಳಿದ ರಾಂಚಿ ಪೊಲೀಸರು ದಾಳಿಕೋರರಿಗಾಗಿ ಹುಡುಕಾಟ ನಡೆಸಿದ್ದಾರೆ. ತನಿಖೆ ಆರಂಭಿಸಲಾಗಿದೆ. ಘಟನೆಯಲ್ಲಿ ಇಬ್ಬರು ಯುವಕರು ಭಾಗಿಯಾಗಿದ್ದಾರೆ ಎಂದು ಪ್ರಾಥಮಿಕ ಮಾಹಿತಿ ಸಿಕ್ಕಿದೆ. ವಿಧಿವಿಜ್ಞಾನ ವಿಜ್ಞಾನ ಪ್ರಯೋಗಾಲಯ ದಳ ಸೇರಿದಂತೆ ಹಲವಾರು ತಂಡಗಳು ಘಟನಾ ಸ್ಥಳದಲ್ಲಿ ಪರಿಶೀಲನೆ ನಡೆಸುತ್ತಿವೆ ಎಂದು ರಾಂಚಿ ನಗರ ಎಸ್‌ಪಿ ಪರಾಸ್ ರಾಣಾ ಹೇಳಿದ್ದಾರೆ.

ಇಬ್ಬರು ದಾಳಿಕೋರರು ಆರ್‌ಎಸ್‌ಎಸ್ ಕಚೇರಿಯ ಮೇಲೆ ಪೆಟ್ರೋಲ್ ಬಾಂಬ್‌ಗಳನ್ನು ಎಸೆಯುತ್ತಿರುವ ಸಿಸಿಟಿವಿ ದೃಶ್ಯಗಳನ್ನು ರಾಂಚಿ ಪೊಲೀಸರು ಪಡೆದುಕೊಂಡಿದ್ದಾರೆ. ಮೊದಲ ಬಾಟಲಿಯನ್ನು ಎಸೆದಾಗ, ಅದರಲ್ಲಿ ಉರಿಯುತ್ತಿರುವ ಫ್ಯೂಸ್ ನೆಲಕ್ಕೆ ಬಿದ್ದಿದೆ. ಇದರಿಂದಾಗಿ ಪೆಟ್ರೋಲ್ ಬಾಂಬ್ ಸ್ಫೋಟಗೊಂಡಿಲ್ಲ. ಎರಡನೇ ಪೆಟ್ರೋಲ್ ಬಾಂಬ್ ಎಸೆದಾಗ ಅದು ಕಚೇರಿಯ ಕಟ್ಟಡದ ಗೋಡೆಗೆ ಬಡಿದಿದೆ. ದಾಳಿಗಾಗಿ ಚಿಲ್ಲಿ ಸಾಸ್ ಬಾಟಲಿಗಳನ್ನು ಸುಧಾರಿತ ಪೆಟ್ರೋಲ್ ಬಾಂನ್‌ಗಳಾಗಿ ಮರುಬಳಕೆ ಮಾಡಲಾಗಿದೆ ಎಂದು ತನಿಖೆಯಿಂದ ತಿಳಿದುಬಂದಿದೆ

ಆರ್‌ಎಸ್‌ಎಸ್ ಕಚೇರಿಯ ಬಳಿ ಇರುವ ಹೋಟೆಲ್‌ನ ನೌಕರರು ಈ ಪ್ರಕರಣದಲ್ಲಿ ಶಂಕಿತರು ಎಂದು ಸ್ಥಳೀಯರು ನೀಡಿದ ಮಾಹಿತಿಯಾಗಿದೆ. ಕೆಲವು ದಿನಗಳ ಹಿಂದೆ, ಹೋಟೆಲ್ ಸಿಬ್ಬಂದಿ ಮತ್ತು ಆರ್‌ಎಸ್‌ಎಸ್ ಕಾರ್ಯಕರ್ತರ ನಡುವೆ ಕಸ ವಿಲೇವಾರಿ ಮತ್ತು ಇತರೆ ಸಮಸ್ಯೆಗಳ ಬಗ್ಗೆ ವಾಗ್ವಾದ ನಡೆದು ದೂರು ದಾಖಲಿಸಲಾಗಿತ್ತು. ಅಂದಿನಿಂದ ವಿವಾದ ಮುಂದುವರೆದಿದೆ.

ದಾಳಿಯಲ್ಲಿ ಹೋಟೆಲ್ ನೌಕರರು ಭಾಗಿಯಾಗಿದ್ದಾರೆ ಎಂದು ಪೊಲೀಸರೂ ಶಂಕಿಸಿದ್ದಾರೆ. ಆದರೂ, ಈ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಸಿಕ್ಕಿಲ್ಲ.

## ಎಡಿಎಂಕೆಗೆ ವಿಜಯಭಾಸ್ಕರ್ ರಾಜೀನಾಮೆ

**ಚೆನ್ನೈ, ಜೂ. 17:** ತಮಿಳುನಾಡು ರಾಜಕಾರಣದಲ್ಲಿ ಸದ್ಯ ದೊಡ್ಡ ತಲ್ಲಣ ಸೃಷ್ಟಿಯಾಗಿದ್ದು, ಮಾಜಿ ಆರೋಗ್ಯ ಸಚಿವ ಹಾಗೂ ವೈರಲಿಮಲೈ ಕ್ಷೇತ್ರದ ಎಡಿಎಂಕೆ ಶಾಸಕರಾಗಿದ್ದ ಡಾ. ಸಿ. ವಿಜಯಭಾಸ್ಕರ್ ತಮ್ಮ ಶಾಸಕ ಸ್ಥಾನಕ್ಕೆ ಅಧಿಕೃತವಾಗಿ ರಾಜೀನಾಮೆ ನೀಡಿದ್ದಾರೆ. ವಿಧಾನಸಭಾ ಸ್ಪೀಕರ್ ಜೆ.ಸಿ.ಡಿ. ಪ್ರಭಾಕರ್ ಅವರು ಈ ರಾಜೀನಾಮೆಯನ್ನು ತಕ್ಷಣವೇ ಅಂಗೀಕರಿಸಿದ್ದಾರೆ. ಪಕ್ಷದ ಒಳಗಿನ ತೀವ್ರ ಆಂತರಿಕ ಭಿನ್ನಮತ ಮತ್ತು ನಾಯಕತ್ವದ ಮೇಲಿನ ಅಸಮಾಧಾನವೇ ಈ ರಾಜೀನಾಮೆಗೆ ಮುಖ್ಯ ಕಾರಣ ಎಂದು ಹೇಳಲಾಗುತ್ತಿದೆ. ಈಗಾಗಲೇ ಎಐಡಿಎಂಕೆ ತೊರೆದಿದ್ದ ನಾಲ್ವರು ಪ್ರಮುಖ ಶಾಸಕರಾದ ಮರಗತಂ ಕುಮಾರವೇಲ್, ಎಸ್. ಜಯಕುಮಾರ್, ಪಿ. ಸತ್ಯಭಾಮಾ ಮತ್ತು ಇಸಕ್ಕಿ ಸುಬ್ಬಯ್ಯ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಅಧಿಕೃತವಾಗಿ ಟಿವಿಕೆ ಪಕ್ಷ ಸೇರಿದ್ದಾರೆ. ಇದೀಗ ವಿಜಯಭಾಸ್ಕರ್ ಅವರು ಆ ಸಾಲಿಗೆ ಸೇರುವ ಐದನೇ ಶಾಸಕರಾಗಿದ್ದು, ಮುಂಬರುವ ದಿನಗಳಲ್ಲಿ ಇನ್ನುಳಿದ ಬಂಡಾಯ ಶಾಸಕರು ಕೂಡ ರಾಜೀನಾಮೆ ನೀಡಿ ದಳಪತಿ ವಿಜಯ್ ಕೈ ಹಿಡಿಯುವ ಸಾಧ್ಯತೆ ದಟ್ಟವಾಗಿದೆ.




ನವದೆಹಲಿಯ ಅಟಲ್ ಅಕ್ಷಯ್ ಊರ್ಜಾ ಭವನದಲ್ಲಿ ಬುಧವಾರ ನಡೆದ "ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್ ಅನ್ನು ಬಲಪಡಿಸುವುದು: ರಾಜ್ಯ ನೀತಿಗಳು, ಕೇಂದ್ರಗಳು ಮತ್ತು ಮೂಲಸೌಕರ್ಯ" ಕಾರ್ಯಾಗಾರದಲ್ಲಿ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು "ಭಾರತದ ಹಸಿರು ಹೈಡ್ರೋಜನ್ ಪ್ರಮಾಣೀಕರಣ ಪೋರ್ಟಲ್" ಉದ್ಘಾಟಿಸಿದರು.

# ಹೊಸ ಪಕ್ಷಕ್ಕೆ ಅಣ್ಣಾಮಲೈ 50 ಲಕ್ಷ ಸದಸ್ಯರ ಗುರಿ

**ಚೆನ್ನೈ, ಜೂ.17:** ಇತ್ತೀಚೆಗಷ್ಟೇ ಬಿಜೆಪಿಗೆ ರಾಜೀನಾಮೆ ನೀಡಿ ವಿ ದಿ ಲೀಡರ್ಸ್ ಎಂಬ ಸಾಮಾಜಿಕ ಆಂದೋಲನ ಆರಂಭಿಸಿರುವ ಕೆ. ಅಣ್ಣಾಮಲೈ ಅವರ ಚಳವಳಿಯು, ಅಧಿಕೃತವಾಗಿ ರಾಜಕೀಯ ಪಕ್ಷವಾಗಿ ಬದಲಾಗಲು ಕ್ಷಣಗಣನೆ ಆರಂಭಿಸಿದೆ. ನಮ್ಮ ಆಂದೋಲನವು ಜುಲೈ ವೇಳೆಗೆ ಪೂರ್ಣ ಪ್ರಮಾಣದ ರಾಜಕೀಯ ಪಕ್ಷವಾಗಿ ಪರಿವರ್ತನೆಗೊಳ್ಳಲಿದ್ದು, ಸರಿಯಾದ ಹಾದಿಯಲ್ಲೇ ಸಾಗುತ್ತಿದೆ ಎಂದು ಅಣ್ಣಾಮಲೈ ಬುಧವಾರ ಮಹತ್ವದ ಪ್ರಕಟಣೆ ಹೊರಡಿಸಿದ್ದಾರೆ.



ಸಾಮಾಜಿಕ ಜಾಲತಾಣದ ವಿಡಿಯೋ ಸಂವಾದದಲ್ಲಿ ಮಾತನಾಡಿದ ಅವರು, ಪಕ್ಷದ ಸಂಘಟನೆ ಮತ್ತು ಮುಂದಿನ ಯೋಜನೆಗಳ ಬಗ್ಗೆ ಹಲವು ರೋಚಕ ಮಾಹಿತಿಗಳನ್ನು ಹಂಚಿಕೊಂಡಿದ್ದಾರೆ.

ವಿಡಿಯೋದಲ್ಲಿ ಮಾತನಾಡಿರುವ ಅಣ್ಣಾಮಲೈ, ಸದ್ಯಕ್ಕೆ ಯಾವುದೇ ವೈಯಕ್ತಿಕ ಲಾಭ ಅಥವಾ ನಿರೀಕ್ಷೆಯಿಲ್ಲದೆ ಬರೋಬ್ಬರಿ 18 ಲಕ್ಷ ಸದಸ್ಯರು ನಮ್ಮ ಸಂಘಟನೆಯನ್ನು ಸೇರಿಕೊಂಡಿದ್ದಾರೆ. ಇದು ಕೇವಲ ಆನ್ಲೈನ್ ಮೂಲಕ ಮಾತ್ರವಲ್ಲ, ತಳಮಟ್ಟದಲ್ಲಿ ಜನರನ್ನು ಖುದ್ದಾಗಿ ಭೇಟಿಯಾಗುವ ಮೂಲಕವೂ ಸದಸ್ಯತ್ವ ಅಭಿಯಾನ ಯಶಸ್ವಿಯಾಗಿ ನಡೆಯುತ್ತಿದೆ. ಈ ಚಳವಳಿಯು ತಮಿಳುನಾಡಿನಲ್ಲಿ ದೊಡ್ಡ ಬದಲಾವಣೆ ತರಲಿದೆ ಎಂಬ ನಂಬಿಕೆ ಜನರಲ್ಲಿದೆ. ಜುಲೈನಲ್ಲಿ ನಮ್ಮ ಸಂಘಟನೆ ರಾಜಕೀಯ ಪಕ್ಷವಾಗಿ ರೂಪಾಂತರಗೊಂಡ ನಂತರ, ಇದರ ಕಾರ್ಯವೈಖರಿ ಮತ್ತು ಚಟುವಟಿಕೆಗಳ ಸ್ವರೂಪವೇ ಬದಲಾಗಲಿದೆ. ಅದನ್ನು ಇಡೀ ರಾಜ್ಯದ ಜನತೆ ನೋಡಲಿದ್ದಾರೆ ಎಂದಿರುವ ಸಿಂಗಂ, ನಮ್ಮ ಮುಂದಿನ ಗುರಿ 50 ಲಕ್ಷ ಸದಸ್ಯರನ್ನು ತಲುಪುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಮ್ಮ ಈ ರಾಜಕೀಯ ಪಕ್ಷವು ಜನರ ನಿರೀಕ್ಷೆ ತಲುಪುವುದರಲ್ಲಿ ವಿಫಲವಾಗುವುದಿಲ್ಲ, ಜನರಿಗೆ ಸುಳ್ಳು ಹೇಳುವುದಿಲ್ಲ ಮತ್ತು ಅವರನ್ನು ತಪ್ಪು ದಾರಿಗೆ ಎಳೆಯುವುದಿಲ್ಲ. ನಮಗೆ ಎಲ್ಲಾ ಧರ್ಮಗಳು ಸಮಾನ, ಇದರಲ್ಲಿ ಯಾವುದೇ ಎರಡನೇ ಮಾತಿಲ್ಲ ಎಂದು ಅಣ್ಣಾಮಲೈ ಸಾರಿದ್ದಾರೆ.

ರಾಜಕೀಯ ವ್ಯವಸ್ಥೆಯನ್ನು ಶುದ್ಧೀಕರಿಸಲು ಅಣ್ಣಾಮಲೈ ಹೊಸ ಸೂತ್ರವನ್ನು ಮುಂದಿಟ್ಟಿದ್ದಾರೆ. ಅವರ ಪಕ್ಷದಲ್ಲಿ ರಾಜಕಾರಣಿಗಳ ಅಧಿಕಾರಾವಧಿಗೆ ಮಿತಿ ಇರಲಿದ್ದು, ಹಳಬರನ್ನು ಬದಿಗಿಟ್ಟು ಹೊಸಬರಿಗೆ ನಿರಂತರವಾಗಿ ಅವಕಾಶ ನೀಡುವ ವ್ಯವಸ್ಥೆ ಜಾರಿಗೆ ಬರಲಿದೆ. ವಿದೇಶಗಳಲ್ಲಿ (ಅಮೆರಿಕ, ಲಂಡನ್ ಸೇರಿದಂತೆ) ಭಾರಿ ಸಾಧನೆ ಮಾಡಿರುವ 40 ರಿಂದ 50 ವರ್ಷ ವಯಸ್ಸಿನ ತಮಿಳು ತಂತ್ರಜ್ಞರು ಮತ್ತು ಬುದ್ಧಿಜೀವಿಗಳಿಗೆ ರಾಜಕೀಯಕ್ಕೆ ಬರಲು ಸರಿಯಾದ ವೇದಿಕೆ ಇಲ್ಲದಂತಾಗಿದೆ. ಅಂತಹ ಪ್ರತಿಭೆಗಳನ್ನು ರಾಜಕೀಯಕ್ಕೆ ತರಲು ಈ ಪಕ್ಷ ಮುಂದೆ ಬರಲಿದೆ.

ತಮಿಳುನಾಡಿನ ಯುವ ಪೀಳಿಗೆಯನ್ನು ಕಾಡುತ್ತಿರುವ ಮಾದಕ ದ್ರವ್ಯ ಪಿಡುಗಿನ ವಿರುದ್ಧ ಅಣ್ಣಾಮಲೈ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಮುಂಬರುವ ತಿಂಗಳುಗಳಲ್ಲಿ ನಮ್ಮ ಸಂಘಟನೆಯನ್ನು ಕೇವಲ ರಾಜಕೀಯಕ್ಕೆ ಸೀಮಿತಗೊಳಿಸದೆ, ರಾಜ್ಯದ ಪ್ರಮುಖ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತುವ ಜನಾಂದೋಲನವನ್ನಾಗಿ ಮಾಡುತ್ತೇವೆ. ತಳಮಟ್ಟದಲ್ಲಿ ಮಾದಕ ದ್ರವ್ಯಗಳ ವಿರುದ್ಧ ಬೃಹತ್ ಸಾರ್ವಜನಿಕ ಚಳವಳಿಯನ್ನು ಹಮ್ಮಿಕೊಳ್ಳುತ್ತೇವೆ ಎಂದು ಅಣ್ಣಾಮಲೈ ಮಾಹಿತಿ ನೀಡಿದ್ದಾರೆ.

# ಸಿರಿ ಸಂಸ್ಥೆಯ ವತಿಯಿಂದ ಧರ್ಮಸ್ಥಳದ ಎ.ವಿ. ಶೆಟ್ಟಿ ದಂಪತಿಗೆ ಗೌರವಾರ್ಪಣೆ




**ಮುಂಬಯಿ, ಜೂ.17:** ಬೆಳ್ತಂಗಡಿಯ ರೆಂಕೆದಗುತ್ತುವಿನಲ್ಲಿ ಕಾರ್ಯಾಚರಿಸುತ್ತಿರುವ ಶ್ರೀಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆಯ ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್ ನಲ್ಲಿ ಪ್ರತಿ ತಿಂಗಳು ಆಚರಿಸುವಂತೆ ಸಿರಿ ಸಿಬ್ಬಂದಿಗಳ ಹುಟ್ಟು ಹಬ್ಬ ಆಚರಣೆ ಕಾರ್ಯಕ್ರಮವು ದಿನಾಂಕ: 16–06–2026 ರಂದು ಜರುಗಿತು.

ಈ ಕಾರ್ಯಕ್ರಮದಲ್ಲಿ ಧರ್ಮಸ್ಥಳ ಧರ್ಮಾಧಿಕಾರಿ ಡಾ..ಡಿ.ವೀರೇಂದ್ರ ಹೆಗ್ಗಡೆಯವರ ಆಪ್ತ ಕಾರ್ಯದರ್ಶಿ ಎ.ವಿ. ಶೆಟ್ಟಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಜೂನ್ ತಿಂಗಳಿನಲ್ಲಿ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರುವ ಸಿರಿ ಸಿಬ್ಬಂದಿಗಳಿಗೆ ಹಾಗೂ ಸಂಸ್ಥೆಗೆ ಹೊಸದಾಗಿ ಸೇರ್ಪಡೆಗೊಂಡ ಸಿಬ್ಬಂದಿಗಳಿಗೆ ಶುಭ ಹಾರೈಸಿದರು. ನಂತರ ಅವರು ಮಾತನಾಡಿ ಪೂಜ್ಯ ಹೆಗ್ಗಡೆಯವರು ಹಾಗೂ ಮಾತೋಶ್ರೀ ಹೇಮಾವತಿ ಅಮ್ಮನವರು ಮಹಿಳಾ ಸಬಲೀಕರಣದ ಧ್ಯೇಯೋದ್ದೇಶದಿಂದ ಪ್ರಾರಂಭಿಸಿರುವ ಸಿರಿ ಸಂಸ್ಥೆಯಲ್ಲಿ ಎಲ್ಲಾ ಸಿರಿ ಸಿಬ್ಬಂದಿಗಳು ಅತ್ಯಂತ ಶ್ರದ್ಧೆ, ಪ್ರಾಮಾಣಿಕತೆಯಿಂದ ದುಡಿಯುವ ಮೂಲಕ ಸಿರಿ ಬ್ರಿಯಾಂಡನ್ನು ರಾಷ್ಟ್ರ–ಅಂತಾರಾಷ್ಟ್ರೀಯ ಮಟ್ಟದಲ್ಲಿ ಎತ್ತಿ ಹಿಡಿಯುವ ಮೂಲಕ ಪೂಜ್ಯ ದಂಪತಿಗಳ ಕನಸನ್ನು ನನಸಾಗಿಸಬೇಕೆಂದು ಪ್ರೇರಣಾತ್ಮಕ ನುಡಿಗಳನ್ನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಿರಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್ ಜನಾರ್ದನರವರು ಎ,ವಿ, ಶೆಟ್ಟಿ ಮತ್ತು ಅವರ ಧರ್ಮಪತ್ನಿ ಶ್ರೀಮತಿ ಅರುಣ ವಿ ಶೆಟ್ಟಿಯವರನ್ನು ಅತ್ಯಂತ ಪ್ರೀತಿಪೂರ್ವಕವಾಗಿ ಸ್ವಾಗತಿಸಿದರು, ಪ್ರಾಸ್ತಾವಿಕವಾಗಿ ಮಾತನಾಡಿ, ಸಿರಿ ಸಂಸ್ಥೆಯ ಸಮಗ್ರ ಏಳಿಗೆಗಾಗಿ ಶ್ರಮವಹಿಸಿ, ಸಂಪೂರ್ಣ ಸಹಕಾರ ನೀಡುತ್ತಾ ಬಂದಿರುವ ಎ,ವಿ, ಶೆಟ್ಟಿ ದಂಪತಿಗಳಿಗೆ ಎಲ್ಲಾ ಸಿರಿ ಸಿಬ್ಬಂದಿಗಳ ಪರವಾಗಿ ಗೌರವಾರ್ಪಣೆ ಸಲ್ಲಿಸಿದರು. ವಿಶೇಷ ಆಹ್ವಾನಿತರಾಗಿ ಭಾಗವಹಿಸಿದ್ದ ಉಜಿರೆ ಎಸ್.ಡಿ.ಎಂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕರಾದ ಎಂ. ಜನಾರ್ದನರವರು ಕಾರ್ಯಕ್ರಮ ವನ್ನುದ್ದೇಶಿಸಿ ಮಾತನಾಡಿ, ಸಿರಿ ಸಿಬ್ಬಂದಿಗಳಿಗೆ ಶುಭಕೋರಿದರು.

ಇದೇ ಸಂದರ್ಭದಲ್ಲಿ ಧರ್ಮಸ್ಥಳದ ಪರಮಪೂಜ್ಯ ಖಾವಂದರು ಲೋಕ ಕಲ್ಯಾಣಾರ್ಥವಾಗಿ ನಡೆಸುತ್ತಿರುವ ವಿವಿಧ ಕಾರ್ಯಚಟುವಟಿಕೆಗಳ ಕುರಿತು ವಿಡಿಯೋ ಪ್ರದರ್ಶಿಸಲಾಯಿತು. ಕಾರ್ಯಕ್ರಮದಲ್ಲಿ ಸಿರಿ ಕ್ಲಬ್ ಅಧ್ಯಕ್ಷೆ ಉಷಾ, ಎಸ್.ಡಿ.ಎಂ ಆಸ್ಪತ್ರೆಯ ಸಿಬ್ಬಂದಿಗಳು ಹಾಗೂ ಸಿರಿ ಸಿಬ್ಬಂದಿಗಳು ಭಾಗವಹಿಸಿದ್ದರು.




ನವದೆಹಲಿಯಲ್ಲಿ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಬುಧವಾರ ಆಯೋಜಿಸಿದ್ದ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ.ವೀರೇಂದ್ರ ಕುಮಾರ್ ಅವರು ನಶಾ ಮುಕ್ತ ಭಾರತ್ ಸಪ್ತಾಹವನ್ನು ಉದ್ಘಾಟಿಸಿದರು ಮತ್ತು ನಶಾಮುಕ್ತಿ ಮಿತ್ರಗಾಗಿ ವೈಯಕ್ತಿಕ ಡ್ಯಾಶ್‌ಬೋರ್ಡ್ ಉದ್ಘಾಟಿಸಿದರು.

# ರಾಮಮಂದಿರ ದೇಣಿಗೆ ದುರುಪಯೋಗ: ಎಸ್‌ಐಟಿ ವಿಚಾರಣೆ

**ಅಯೋಧ್ಯೆ, ಜೂ. 17:** ಅಯೋಧ್ಯೆಯ ರಾಮಮಂದಿರದಲ್ಲಿ ದೇಣಿಗೆ ದುರುಪಯೋಗ ಮಾಡಲಾಗಿದೆ ಎಂಬ ಆರೋಪದ ಬಗ್ಗೆ ತನಿಖೆಗಾಗಿ ರಚಿಸಲಾದ ವಿಶೇಷ ತನಿಖಾ ತಂಡ (ಎಸ್‌ಐಟಿ) ತನಿಖೆಯನ್ನು ಆರಂಭಿಸಿದ್ದು ದೇವಾಲಯದಲ್ಲಿ ಹಲವು ಮಂದಿಯನ್ನು ಪ್ರಶ್ನಿಸಿದೆ. ಭಕ್ತರು ನೀಡುವ ಕಾಣಿಕೆಗಳನ್ನು ಸ್ವೀಕರಿಸುವ, ಎಣಿಸುವ ಮತ್ತು ಠೇವಣಿ ಇಡುವ ಕಾರ್ಯವಿಧಾನಗಳು ಹಾಗೂ ಬೆಲೆಬಾಳುವ ವಸ್ತುಗಳು ಮತ್ತು ನಿಧಿಗಳ ಲೆಕ್ಕಪತ್ರದ ಬಗ್ಗೆ ಮುಖ್ಯವಾಗಿ ತನಿಖೆ ನಡೆಸಲಾಗುತ್ತಿದೆ. ಜೂನ್ 16ರಂದು ಅಯೋಧ್ಯೆಗೆ ಆಗಮಿಸಿದ ತಂಡವು 24 ಗಂಟೆಗಳ ಕಾಲ ತನಿಖೆ ಮುಂದುವರೆಸಿದೆ ಎಂದು ವರದಿಯಾಗಿದೆ. ಎಸ್‌ಐಟಿ ತಂಡವು ದೇಣಿಗೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸುತ್ತಿದೆ. ದೇವಾಲಯದ ಖಾತೆಗಳನ್ನು ನಿರ್ವಹಿಸುವ ಎಲ್ಲ ಅಧಿಕಾರಿಗಳು, ಉದ್ಯೋಗಿಗಳು ಮತ್ತು ವ್ಯಕ್ತಿಗಳ ವಿವರಗಳನ್ನು ಕೋರಿದೆ. ಭಕ್ತರು ದಾನ ಮಾಡುವ ಚಿನ್ನ, ಬೆಳ್ಳಿ ಮತ್ತು ವಜ್ರದ ಆಭರಣಗಳ ಲೆಕ್ಕಪತ್ರ ನಿರ್ವಹಣೆ ಮತ್ತು ಭದ್ರತೆಯಲ್ಲಿ ತೊಡಗಿರುವವರ ಬಗ್ಗೆಯೂ ಎಸ್‌ಐಟಿ ಪರಿಶೀಲನೆ ನಡೆಸುತ್ತಿದೆ.

ದೇವಾಲಯದ ದೇಣಿಗೆ ನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಸಾರ್ವಜನಿಕ ವಿಶ್ವಾಸವನ್ನು ಕಾಪಾಡಿಕೊಳ್ಳಲು ನ್ಯಾಯಾಂಗ ತನಿಖೆಗೆ ಸಮಾಜವಾದಿ ಪಕ್ಷ ಮತ್ತು ಕಾಂಗ್ರೆಸ್ ಒತ್ತಾಯಿಸಿದೆ. ರಾಮಮಂದಿರದಲ್ಲಿ ಭಕ್ತರ ದೇಣಿಗೆ ದುರುಪಯೋಗ ಮಾಡಲಾಗುತ್ತಿದೆ ಎಂದು ಸಮಾಜವಾದಿ ಪಕ್ಷದ ಸಂಸದೆ ಡಿಂಪಲ್ ಯಾದವ್ ಮತ್ತು ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಅವರು ಸೇರಿದಂತೆ ಹಲವು ಮಂದಿ ಆರೋಪಿಸಿದ್ದಾರೆ.

ಬಿಜೆಪಿ ಮಾಜಿ ಸಂಸದ ಬ್ರಿಜ್‌ಭೂಷಣ್ ಶರಣ್ ಸಿಂಗ್ ಕೂಡಾ ರಾಮಮಂದಿರದಲ್ಲಿ ದೇಣಿಗೆ ದುರುಪಯೋಗ ನಡೆದಿದೆ ಎಂದು ಆರೋಪಿಸಿದ್ದಾರೆ. ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ಮತ್ತು ರಾಮಮಂದಿರ ಟ್ರಸ್ಟ್ ಕೆಲವು ಪ್ರಮುಖ ಪದಾಧಿಕಾರಿಗಳನ್ನು ಉಲ್ಲೇಖಿಸಿ ಮಾತನಾಡುತ್ತಾ, ಕೆಲವರು ರಾಮಮಂದಿರ ಆಂದೋಲನವನ್ನು ತಮ್ಮ ವೈಯಕ್ತಿಕ ಆಸ್ತಿ ಮತ್ತು ರಾಜಕೀಯ ಬೆಳವಣಿಗೆಗೆ ಬಳಸಿಕೊಂಡರು. ಜನಸಾಮಾನ್ಯರು ಭಕ್ತಿಯಿಂದ ನೀಡಿದ ಹಣ ದುರುಪಯೋಗವಾಗಿದೆ ಎಂದು ದೂರಿದ್ದಾರೆ.

# ಸರ್ಕಾರದ ಸಚಿವರಿಂದಲೇ ಬ್ರ್ಯಾಂಡ್ ಬೆಂಗಳೂರು ಅಸಲಿ ಮುಖವಾಡ ಬಯಲು: ಪ್ರತಿಪಕ್ಷ ನಾಯಕ ಅಶೋಕ್ ಟೀಕೆ

## ಅಧಿಕಾರಿಗಳೊಂದಿನ ಮೊದಲ ಸಭೆಯಲ್ಲೇ ರಸ್ತೆಗಳ ದುಸ್ಥಿತಿ, ಕಳಪೆ ಕಾಮಗಾರಿ ಬಗ್ಗೆ ಕೃಷ್ಣಬೈರೇಗೌಡ ಅಸಮಾಧಾನ

**ಬೆಂಗಳೂರು, ಜೂ.17:** ನಗರಾಭಿವೃದ್ಧಿ ಇಲಾಖೆ ಅಧಿಕಾರ ಸ್ವೀಕರಿಸಿದ ಮೊದಲ ದಿನವೇ ಸಚಿವ ಕೃಷ್ಣಬೈರೇಗೌಡ ಅವರು ಬೆಂಗಳೂರಿನ ರಸ್ತೆಗುಂಡಿಗಳು ಮತ್ತು ಕಳಪೆ ಕಾಮಗಾರಿಗಳ ಕುರಿತು ಅಧಿಕಾರಿಗಳ ಸಭೆಯಲ್ಲಿ ವ್ಯಕ್ತಪಡಿಸಿದ ಅಸಮಾಧಾನವನ್ನು ಮುಂದಿಟ್ಟುಕೊಂಡು ಪ್ರತಿಪಕ್ಷ ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದೆ. ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಸಾಮಾಜಿಕ ಜಾಲತಾಣದ ಮೂಲಕ ಪ್ರತಿಕ್ರಿಯಿಸಿ, ಕೃಷ್ಣ ಬೈರೇಗೌಡರ ಹೇಳಿಕೆಗಳು ಪರೋಕ್ಷವಾಗಿ ಮಾಜಿ ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಕಾರ್ಯವೈಖರಿಯ ಮೇಲಿನ ಟೀಕೆಯಾಗಿದೆ ಎಂದು ಆರೋಪಿಸಿದ್ದಾರೆ. ಕೃಷ್ಣ ಬೈರೇಗೌಡ ಅವರು ಇಲಾಖೆ ಅಧಿಕಾರಿ ವಹಿಸಿಕೊಂಡ ಮೊದಲ ದಿನವೇ ಬೆಂಗಳೂರಿನ ರಸ್ತೆಗಳ ದುಸ್ಥಿತಿ ಹಾಗೂ ಕಳಪೆ ಕಾಮಗಾರಿಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವುದು, ಕಳೆದ ಮೂರು ವರ್ಷಗಳಿಂದ ರಸ್ತೆಗುಂಡಿ ಮುಚ್ಚುವ ಹೆಸರಿನಲ್ಲಿ ಸರ್ಕಾರ ನಡೆಸಿದ ಕಾರ್ಯಗಳ ವೈಫಲ್ಯವನ್ನು ಬಯಲಿಗೆಳೆದಂತಾಗಿದೆ ಎಂದು ಟೀಕಿಸಿದ್ದಾರೆ.

ನೂತನ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಇಲಾಖೆಯ ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಇಲಾಖೆಯ ನಿಕಟಪೂರ್ವ ಸಚಿವ ಡಿ.ಕೆ. ಶಿವಕುಮಾರ್ ಅವರು ಕಳೆದ ಮೂರು ವರ್ಷಗಳಿಂದ ಆಡಿಕೊಂಡು ಬಂದಿರುವ ರಸ್ತೆಗುಂಡಿ ಮುಚ್ಚುವ ನಾಟಕ'ವನ್ನು ಬಟಾಬಯಲು ಮಾಡಿದ್ದಾರೆ. ಬೆಂಗಳೂರಿನ ರಸ್ತೆಗಳ ದುಸ್ಥಿತಿಗೆ ಮತ್ತು ಕಳಪೆ ಕಾಮಗಾರಿಗಳಿಗೆ ಕೃಷ್ಣ ಬೈರೇಗೌಡರು ಇಲಾಖೆಯ ಆಂತರಿಕ ಸಭೆಯಲ್ಲಿ ತೀವ್ರ ಅಸಮಾಧಾನ ಹೊರ ಹಾಕಿರುವುದು ಬೇರೆ ಯಾರದ್ದೋ ವಿರುದ್ಧವಲ್ಲ; ಅದು ನೇರವಾಗಿ ನಿಕಟಪೂರ್ವ ಬೆಂಗಳೂರು ಅಭಿವೃದ್ಧಿ ಸಚಿವ ಹಾಗೂ ಹಾಲಿ ಸಿಎಂ ಡಿ.ಕೆ. ಶಿವಕುಮಾರ್ ಅವರ ವಿರುದ್ಧವೇ ಎಂಬುದು ಸ್ಪಷ್ಟವಾಗಿದೆ.

ಕಳೆದ ಮೂರು ವರ್ಷಗಳಿಂದ ಬೆಂಗಳೂರನ್ನು ಉದ್ಧಾರ ಮಾಡುತ್ತಿದ್ದೇವೆ, ರಸ್ತೆಗುಂಡಿಗಳನ್ನು ಮುಚ್ಚಲು ಸಾವಿರಾರು ಕೋಟಿ ರೂಪಾಯಿ ಖರ್ಚು ಮಾಡಿದ್ದೇವೆ ಎಂದು ಡೋಲು ಬಾರಿಸಿಕೊಳ್ಳುತ್ತಿದ್ದವರ ಅಸಲಿ ಮುಖವಾಡವನ್ನು ಈಗ ಅವರದೇ ಪಕ್ಷದ ಸಚಿವರು ಸಾರ್ವಜನಿಕವಾಗಿ ಕಳಚಿ ಬಿಸಾಡಿದ್ದಾರೆ. ಮುಖ್ಯಮಂತ್ರಿ ಡಿಕೆ.ಶಿವಕಮಾರ್ ಅವರೇ, ನಿಮ್ಮದೇ ಸಚಿವರು ನಿಮ್ಮ ಮೂರು ವರ್ಷಗಳ ಆಡಳಿತ ವೈಫಲ್ಯವನ್ನು ಮತ್ತು ರಸ್ತೆಗುಂಡಿಗಳನ್ನು ಕಾಸು ಮಾಡುವ ಚಿನ್ನದ ಗುಂಡಿಗಳನ್ನಾಗಿ ಮಾಡಿಕೊಂಡಿದ್ದ ಹಗಲು ದರೋಡೆಯನ್ನು ಇಡೀ ರಾಜ್ಯದ ಮುಂದೆ ತೆರೆದಿಟ್ಟಿದ್ದಾರೆ. ಇದಕ್ಕೆ ಉತ್ತರಿಸಬೇಕಾದವರು



**ಬೆಂಗಳೂರಿನ ರಸ್ತೆಗಳ ದುಸ್ಥಿತಿ ಮತ್ತು ಕಳಪೆ ಕಾಮಗಾರಿಯ ಬಗ್ಗೆ ಇಲಾಖೆಯ ಮೊದಲ ಆಂತರಿಕ ಸಭೆಯಲ್ಲಿ ಕೃಷ್ಣ ಬೈರೇಗೌಡ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಳೆದ ಮೂರು ವರ್ಷಗಳಿಂದ ಇಲಾಖೆಯಲ್ಲಿ ನಡೆಯುತ್ತಿರುವ 'ಗುಂಡಿ ಮುಚ್ಚುವ ನಾಟಕ'ವನ್ನು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಬಯಲು ಮಾಡಿದ್ದಾರೆ.**

ಅಧಿಕಾರಿಗಳಲ್ಲ, ನೇರವಾಗಿ ನೀವೇ. 'ಬ್ರ್ಯಾಂಡ್ ಬೆಂಗಳೂರು' ಹೆಸರಿನಲ್ಲಿ ನಡೆದ ರೀಲ್ಸ್ ನಾಟಕಗಳು ಮತ್ತು ಬಿಡುಗಡೆಯಾದ ಕೋಟ್ಯಂತರ ರೂಪಾಯಿ ಹಣ ಎಲ್ಲಿಗೆ ಹೋಯಿತು. ಕಮಿಷನ್ ದಂಧೆಯ ಮರೆಯಲ್ಲಿ ಬೆಂಗಳೂರಿನ ರಸ್ತೆಗಳನ್ನು ಮೃತ್ಯುಕೂಪ ಮಾಡಿದ ಪಾಪ ಯಾರದ್ದು. ಅಧಿಕಾರಿಗಳ ಹೆಗಲ ಮೇಲೆ ಬಂದೂಕು ಇಟ್ಟು ತಪ್ಪಿಸಿಕೊಳ್ಳಲು ಇನ್ನು ಸಾಧ್ಯವಿಲ್ಲ. ಕೃಷ್ಣ ಬೈರೇಗೌಡರ ಈ ಪರೋಕ್ಷ ಟಾಂಗ್‌ಗೆ ಮತ್ತು ಬೆಂಗಳೂರಿನ ಜನತೆಗೆ ನೇರ ಉತ್ತರ ಕೊಡಿ ಎಂದು ಆಗ್ರಹಿಸಿದ್ದಾರೆ.



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬುಧವಾರ ಬೆಂಗಳೂರಿನ ಸದಾಶಿವನಗರದ ತಮ್ಮ ನಿವಾಸದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದರು.

# ಕನ್ನಡಿಗರಿಗೆ ಉದ್ಯಮ ಸ್ಥಾಪಿಸಲು ಅವಕಾಶ ನೀಡದ ಸರ್ಕಾರ: ನಿರಾಣಿ

**ಬೆಂಗಳೂರು, ಜೂ.17:** ಬೇರೆ ದೇಶದಿಂದ ಬಂಡವಾಳ ಹೂಡುವವ ರಿಗೆ ರೆಡ್ ಕಾರ್ಪರೆಟ್ ಹಾಸಿ ಅವರಿಗೆ ಅವಕಾಶ ನೀಡುವ ರಾಜ್ಯ ಸರ್ಕಾರ ಕನ್ನಡಿಗರೊಬ್ಬರು ಬಂಡವಾಳ ಹೂಡಿ ಕನ್ನಡಿಗರಿಗೆ ಉದ್ಯೋಗ ನೀಡಲು ಮುಂದಾದರೆ ಅಂತಹವರಿಗೆ ಅವಕಾಶವನ್ನು ರಾಜ್ಯ ಸರ್ಕಾರ ನೀಡುತ್ತಿಲ್ಲವೆಂದು ಉದ್ಯಮಿ ಹಾಗೂ ಬಿಜೆಪಿ ರಾಜ್ಯ ಉಪಾಧ್ಯಕ್ಷ ಮುರುಗೇಶ ನಿರಾಣಿ ಬೇಸರ ಹೊರಹಾಕಿದರು. ನವನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಅವರು, ವಿಮಾನಗಳಿಗೆ ಪೆಟ್ರೋಲ್ ತಯಾ ರಿಸುವ ಎಥನಾಲ್ ಘಟಕ ಹಾಗೂ ಬಯೋ ಪ್ಲಾಸ್ಟಿಕ್ ಘಟಕ ನಿರ್ಮಾಣಕ್ಕೆ ಹಿಂದಿನ ಮುಖ್ಯಮಂತ್ರಿ ಸಿದ್ದರಾ ಮಯ್ಯನವರ ಅವಧಿಯಲ್ಲಿ ಅವಕಾಶ ನೀಡಲು ಕೇಳಿಕೊಳ್ಳಲಾಗಿತ್ತು. ಆದರೆ, ಕಳೆದ ಒಂದು ತಿಂಗಳ ನಮ್ಮ ಬಂಡವಾಳ ಹೂಡಿಕೆಯ ಅರ್ಜಿಯನ್ನು ತಿರಸ್ಕರಿಸುವ ಮೂಲಕ ಕನ್ನಡಿಗರಿಗೆ ಉದ್ಯಮ ಸ್ಥಾಪಿಸಲು ಅವ ಕಾಶ ನೀಡುವುದಿಲ್ಲ ಎಂದು ಸರ್ಕಾರದ ನಡೆಯನ್ನು ತೋರಿಸಲಾಗಿದೆ ಎಂದು ಆರೋಪಿಸಿದರು.

ಜಮಖಂಡಿ ಅಥವಾ ಕೆರಕಲ ಮಟ್ಟಿಯ ಕೇದಾರ ಶುಗರ್ ಕಾರ್ಖಾನೆಯ ಆವರಣದನಮ್ಮ ಜಾಗದಲ್ಲಿ ಎಥೆನಾಲ್ ಘಟಕ ಮತ್ತು ಬಯೋ ಪ್ಲಾಸ್ಟಿಕ್ ಘಟಕ ನಿರ್ಮಾಣಕ್ಕೆ 6 ಸಾವಿರ ಕೋಟಿಯಷ್ಟು ಬಂಡವಾಳ ಹೂಡಿಕೆ ಮಾಡಲು ಸಿದ್ಧರಿದ್ದರೂ ಹಿಂದಿನ ಮುಖ್ಯಮಂತ್ರಿಗಳು ಅವಕಾಶ ನೀಡದೇ ನಮ್ಮ ಬೇಡಿಕೆಯನ್ನು ತಿರಸ್ಕರಿಸಿದ್ದಾರೆ. ಈಗ ಬಂದಿರುವ ಮುಖ್ಯಮಂತ್ರಿ ಡಿ.ಕೆ.ಶಿವುಕುಮಾರ ಅವರನ್ನು ಸಹ ಒಮ್ಮೆ ಭೇಟಿಯಾಗಿ ಅವಕಾಶ ನೀಡಲು ಕೇಳಲಾಗುವುದು. ಜಿಲ್ಲೆಯ ಸಾವಿರಾರು ಯುವಕರಿಗೆ ಉದ್ಯೋಗ ನೀಡುವಂತಹ ಉದ್ಯಮಕ್ಕೆ ಅವಕಾಶ ನೀಡಲಿಲ್ಲ. ಒಂದು ವೇಳೆ ಈಗಿರುವ ಸರ್ಕಾರದ ಮುಖ್ಯಮಂತ್ರಿ ಗಳು ಅವಕಾಶ ಕೊಡದೇ ಇದ್ದರೆ ಯುವಕರೊಂದಿಗೆ ವಿಧಾನಸೌಧದ ಮುಂದೆ ಹೋರಾಟ ನಡೆಸಲಾಗುವುದು

**ಮುರುಗೇಶ ನಿರಾಣಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ**

ಒಂದು ವೇಳೆ ರಾಜ್ಯ ಸರ್ಕಾರ ಒಂದು ತಿಂಗಳೊಳಗೆ ಎಥೆನಾಲ್ ಹಾಗೂ ಬಯೋ ಪ್ಲಾಸ್ಟಿಕ್ ಘಟಕ ಸ್ಥಾಪನೆಗೆ ಅವಕಾಶ ನೀಡದಿದ್ದರೆ ಈಗಾಗಲೇ ಆಂಧ್ರ ಪ್ರದೇಶದಲ್ಲಿ 400 ಎಕರೆ ಜಾಗವನ್ನು ಕಡಿಮೆ ದರದಲ್ಲಿ ಕೊಟ್ಟು ನಮ್ಮಲ್ಲಿ ಸ್ಥಾಪಿಸಲು ಆಂಧ್ರ ಸರ್ಕಾರ ಕೇಳಿಕೊಂಡಿದೆ. ಇನ್ನೂ ಮಹಾರಾಷ್ಟ್ರ ಮತ್ತು ಬಿಹಾರ ಮುಖ್ಯಮಂತ್ರಿಯವರು ಸಹ ನಮ್ಮಲ್ಲಿ ಎಥೆನಾಲ್ ಘಟಕ ಸ್ಥಾಪಿಸಲು ಮುಂದಾಗಿ ಎಂದು ಕೇಳಿಕೊಂಡಿದ್ದಾರೆ.

ಮೊದಲ ಆದ್ಯತೆಯನ್ನು ಕರ್ನಾಟಕಕ್ಕೆ ನೀಡಿದ್ದೇವೆ. ಸರ್ಕಾರ ಅವಕಾಶ ಕೊಡದೇ ಇದ್ದರೆ ಬೇರೆ ರಾಜ್ಯದಲ್ಲಿ ಸ್ಥಾಪನೆ ಮಾಡಲು ಮುಂದಾಗುತ್ತೇವೆ ಎಂದರು. ರಾಜಕೀಯ ಪುನರ್ಜನ್ಮನೀಡಿದ ಬಾಗಲಕೋಟೆ ಜಿಲ್ಲೆಗೆ



ಸಿದ್ದರಾಮಯ್ಯ ನವರು ಮಹಾ ಮೋಸ ಮಾಡಿದರು. ಜಿಲ್ಲೆಯ ಸಾವಿರಾರು ಯುವಕರಿಗೆ ಉದ್ಯೋಗ ನೀಡುವಂತಹ ಉದ್ಯಮಕ್ಕೆ ಅವಕಾಶ ನೀಡಲಿಲ್ಲ. ಒಂದು ವೇಳೆ ಈಗಿರುವ ಸರ್ಕಾರದ ಮುಖ್ಯಮಂತ್ರಿ ಗಳು ಅವಕಾಶ ಕೊಡದೇ ಇದ್ದರೆ ಯುವಕರೊಂದಿಗೆ ವಿಧಾನಸೌಧದ ಮುಂದೆ ಹೋರಾಟ ನಡೆಸಲಾಗುವುದು ಎಂದು ಹೇಳಿದರು. ಮಾಜಿ ಎಂ.ಕೆ.ಪಟ್ಟಣಶೆಟ್ಟಿ, ಹೂವಪ್ಪ ರಾಠೋಡ ಪತ್ರಿಕಾಗೋಷ್ಠಿಯಲ್ಲಿದ್ದರು.

## ಸಂಪುಟ ವಿಸ್ತರಣೆ ವೇಳೆ ಭ್ರಷ್ಟಾಚಾರ ಆರೋಪ

# ದುರುದ್ದೇಶಪೂರಿತ ಆಧಾರರಹಿತ ಆರೋಪ ನೋಡಿ ನಗುಬರುತ್ತಿದೆ: ಮಾಜಿ ಸಚಿವ ಮಾಜಿ ಸಚಿವ ಮಹದೇವಪ್ಪ ಕಿಡಿ

**ಬೆಂಗಳೂರು, ಜೂ.17:** ನಲವತ್ತು ವರ್ಷಗಳ ಸಾರ್ವಜನಿಕ ಜೀವನದಲ್ಲಿ ಸಂವಿಧಾನ ಮತ್ತು ಬಾಬಾಸಾಹೇಬರ ತತ್ವಗಳನ್ನು ಪಾಲಿಸುತ್ತಿರುವ ನನ್ನ ವಿರುದ್ಧ ಮಾಡಲಾಗುತ್ತಿರುವ ಆಧಾರ ರಹಿತ ಆರೋಪಗಳನ್ನು ನೋಡಿ ನಗು ಬರುತ್ತಿದೆ ಎಂದು ಮಾಜಿ ಸಚಿವ ಡಾ ಎಚ್.ಸಿ. ಮಹದೇವಪ್ಪ ಹೇಳಿದ್ದಾರೆ. ತಮ್ಮ ವಿರುದ್ಧ ಭ್ರಷ್ಟಾಚಾರ ಆರೋಪಗಳಿಗೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯೆ ನೀಡಿರುವ ಅವರು, ವಾಸ್ತವವಾಗಿ, ಸಚಿವ ಸಂಪುಟ ವಿಸ್ತರಣೆಯ ಸಂದರ್ಭದಲ್ಲೇ ಈ ಆರೋಪಗಳನ್ನು ಮಾಡಲಾಗುತ್ತಿರುವ ಹಿಂದಿನ ಉದ್ದೇಶ ಎಷ್ಟು ಸ್ಪಷ್ಟವಾಗಿದೆ ಎಂದರೆ ಅದನ್ನು ಸಣ್ಣ ಮಕ್ಕಳೂ ಸಹ ಅರ್ಥ ಮಾಡಿಕೊಳ್ಳ ಬಲ್ಲರು. ಆದ್ದರಿಂದ, ಈ ಆರೋಪಗಳ ಸ್ವರೂಪ ಮತ್ತು ಅವುಗಳ ಹಿಂದಿರುವ ಕಾರಣಗಳನ್ನು ಎಲ್ಲರೂ ಅರ್ಥಮಾಡಿ ಕೊಳ್ಳಬೇಕು ಎಂದಿದ್ದಾರೆ.

ಸಾರ್ವಜನಿಕ ಜೀವನದಲ್ಲಿರುವ ಯಾರು ಸಹ ಪರಿಶೀಲನೆಗೆ ಹೊರತಾಗಿಲ್ಲ ಎಂಬುದು ತಿಳಿದಿದೆ. ಆದರೆ ದುರುದ್ದೇಶಪೂರಿತ ಪ್ರಚಾರ, ಸುಳ್ಳು ಆರೋಪಗಳು, ಅಸಹಿಷ್ಣುತೆ ಮತ್ತು ಷಡ್ಯಂತ್ರಗಳಿಗೆ ಯಾವುದೇ ಅವಕಾಶ ಇರಬಾರದು. ಬಾಬಾ ಸಾಹೇಬರ ತತ್ವಗಳನ್ನು ಅನುಸರಿಸುವವನಾಗಿ, ಅವರ ಸಿದ್ಧಾಂತವೇ ನನ್ನ ಮಾದರಿಯಾಗಿದ್ದು, ಯಾರನ್ನಾದರೂ ದ್ವೇಷಿಸುವುದು ನನಗೆ ಸಾಧ್ಯವಿಲ್ಲ. ಕಾಂಗ್ರೆಸ್ ಸರ್ಕಾರದಲ್ಲಿ ಎರಡು ಬಾರಿ ಸಚಿವನಾಗಿ ಸೇವೆ ಸಲ್ಲಿಸಿದ ಅವಧಿಯಲ್ಲಿ, ಜನರಿಗೆ ಅವಕಾಶಗಳನ್ನು ಒದಗಿಸುವ ಮೂಲಕ ಪಕ್ಷಕ್ಕೆ ಗೌರವ ತರುವ ಕೆಲಸ ಮಾಡಿದ್ದೇನೆ. ಸಾರ್ವಜನಿಕ ಕಾರ್ಯಗಳ ಸಚಿವನಾಗಿ, ಈ ರಾಜ್ಯದಲ್ಲಿ ಸುಮಾರು 30,000 ಕಿ.ಮೀ ರಸ್ತೆಗಳು, ಸೇತುವೆಗಳು, ದೊಡ್ಡ ಕಟ್ಟಡಗಳು ಮತ್ತು ಮೂಲ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಿದ್ದೇನೆ. ಹಣದ ಹಿಂದೆ ಹೋಗದೆ ಕೆಲಸ ಮಾಡಿದ್ದೇನೆ. ಅದರ ಜೊತೆಗೆ, ಪರಿಶಿಷ್ಟ ಜಾತಿಗಳಿಗೆ ಅನುಕೂಲವಾಗುವ ಕಾನೂನುಗಳು ಮತ್ತು ಕಾಯಿದೆಗಳನ್ನು ರೂಪಿಸಲು ನಾನು ಪ್ರಾಮಾಣಿಕವಾಗಿ



ಶ್ರಮಿಸಿದ್ದೇನೆ ಎಂದಿದ್ದಾರೆ. ಬೆಂಗಳೂರಿನ ನಿವಾಸಿ ಯೋರ್ವರು ಡಾ.ಎಚ್.ಸಿ. ಮಹದೇವಪ್ಪ ವಿರುದ್ಧ ಭ್ರಷ್ಟಾಚಾರ ಆರೋಪಗಳನ್ನು ಮಾಡಿ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರಿಗೆ ದೂರು ನೀಡಿದ್ದಾರೆ. ಎಚ್.ಸಿ. ಮಹದೇವಪ್ಪ ಸಚಿವರಾಗಿದ್ದ ಅವಧಿಯಲ್ಲಿ ಸಾಮಾಜಿಕ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಮತ್ತು ಅಂಬೇಡ್ಕರ್ ಅಭಿವೃದ್ಧಿ ನಿಗಮ/ಮಂಡಳಿಯ ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮ, ಭ್ರಷ್ಟಾಚಾರ, ದಾಖಲೆಗಳ ನಕಲಿ ಸೃಷ್ಟಿ ಹಾಗೂ ಅಧಿಕಾರ ದುರುಪಯೋಗ ನಡೆದಿದೆ ಎಂದು ಆರೋಪಿಸಿ ದೂರು ಸಲ್ಲಿಸಿದ್ದಾರೆ.

## ತಮಗೂ, ಷಡ್ಯಂತ್ರಕ್ಕೂ ಯಾವುದೇ ಸಂಬಂಧವಿಲ್ಲ: ಪ್ರಕಾಶ್‌ರಾಜ್

# ಧರ್ಮಸ್ಥಳ ಪ್ರಕರಣ: ಚಿನ್ನಯ್ಯನ ಜತೆ ಮಾತುಕತೆ ವಿವರ ಪೊಲೀಸರಿಗೆ ನೀಡಿದ್ದೆ

**ಬೆಂಗಳೂರು, ಜೂ.17:** ನಟ, ಸಾಮಾಜಿಕ ಕಾರ್ಯಕರ್ತ ಪ್ರಕಾಶ್ ರಾಜ್ ಅವರು ಧರ್ಮಸ್ಥಳ ಪ್ರಕರಣದಲ್ಲಿ ತಮ್ಮ ಹೆಸರು ಕೇಳಿಬರುತ್ತಿರುವ ಸಂಬಂಧಿಸಿದಂತೆ ಸ್ಪಷ್ಟನೆ ನೀಡಿದ್ದಾರೆ. ಬೆಂಗಳೂರಿನ ಪತ್ರಕರ್ತರ ಭವನದಲ್ಲಿ ನಡೆದ ಮಾಧ್ಯಮಗೋಷ್ಠಿ ಯಲ್ಲಿ ಮಾತನಾಡಿದ ಅವರು, ತಮಗೂ ಮತ್ತು ಈ ಷಡ್ಯಂತ್ರಕ್ಕೂ ಯಾವುದೇ ಸಂಬಂಧವಿಲ್ಲ. ಆದರೆ, ಈ ಇಡೀ ಪ್ರಕರಣದ ಕೇಂದ್ರಬಿಂದು ವಾಗಿರುವ 'ಮಾಸ್ಕ್ ಮ್ಯಾನ್' ಚಿನ್ನಯ್ಯ ತಮಗೆ ಫೋನ್ ಮಾಡಿದ್ದ ಸಂಗತಿಯನ್ನು ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ. ಚಿನ್ನಯ್ಯ ಎಂಬ ವ್ಯಕ್ತಿ ನನಗೆ ಕರೆ ಮಾಡಿ ಮಾತನಾಡಿದ್ದು ನಿಜ. ಆತ ಮೂಲತಃ ಮಂಡ್ಯದವನೇ ಆಗಿದ್ದರೂ ನನ್ನ ಜೊತೆಗೆ ತಮಿಳಿನಲ್ಲಿ ಮಾತನಾಡಿದ್ದ. ನನ್ನನ್ನು ಭೇಟಿಯಾಗಬೇಕೆಂದು ಆತ ಕೇಳಿಕೊಂಡಾಗ, 'ನಾನ್ಯಾಕೆ ನಿನ್ನನ್ನು ಭೇಟಿ ಮಾಡಬೇಕು? ನೀನೇನಾದರೂ ಹೇಳಲು ಬಯಸಿದರೆ ಅದನ್ನು ರೆಕಾರ್ಡ್ ಮಾಡಿ ಕಳುಹಿಸು' ಎಂದು ತಿಳಿಸಿದ್ದೆ. ಅಲ್ಲದೆ ಈ ವಿಷಯವನ್ನು ಹಿರಿಯ



ಪೊಲೀಸ್ ಅಧಿಕಾರಿ ಪ್ರಣವ್ ಮೊಹಂತಿ ಸರ್ ಗಮನಕ್ಕೂ ತಂದಿದ್ದೆ. ಚಿನ್ನಯ್ಯ ಎಲ್ಲರಿಗೂ ಚಳ್ಳೆಹಣ್ಣು ತಿನ್ನಿಸಿದ್ದಾನೆ ಎಂಬುದು ಈಗ ತನಿಖೆಯಿಂದ ಬಹಿರಂಗವಾಗಿದೆ ಎಂದರು. ಗಿರೀಶ್ ಮಟ್ಟಣ್ಣನವರ್ ಹೇಳಿದ ರೀತಿಯಲ್ಲಿ ಕೇಳಿದರೆ ನಾನು ನಿನ್ನನ್ನು ಅಪ್ಪಿಕೊಳ್ಳುತ್ತೇನೆ ಎಂದು ಪ್ರಕಾಶ್ ರಾಜ್ ಹೇಳಿದ್ದರು ಎಂಬುದಾಗಿ ಚಿನ್ನಯ್ಯ ಕೋರ್ಟ್‌ನಲ್ಲಿ ಹೇಳಿಕೆ ನೀಡಿದ್ದಾನೆ. ಜೊತೆಗೆ ಕೇರಳದಿಂದ ಹಣ ಬಂದಿದೆ ಎನ್ನುತ್ತಾ ನನ್ನ ಹೆಸರನ್ನು ಉಲ್ಲೇಖ ಮಾಡಿದ್ದಾನೆ. ಆದರೆ, ನಾನು ಯಾವತ್ತೂ ಧರ್ಮಸ್ಥಳಕ್ಕೆ ಹೋಗಿಲ್ಲ, ಗಿರೀಶ್ ಮಟ್ಟಣ್ಣನವರ್ ಅವರನ್ನು ಭೇಟಿಯಾಗಿಯೂ ಇಲ್ಲ, ತಮಗೂ ಈ ಪ್ರಕರಣಕ್ಕೂ ಇರುವ ದೂರವನ್ನು ಸ್ಪಷ್ಟಪಡಿಸಿದರು.

ಧರ್ಮಸ್ಥಳದ ವಿರುದ್ಧ ತಾವು ಪಿತೂರಿ ನಡೆಸುತ್ತಿದ್ದಾರೆ ಎಂಬ ಆರೋಪಗಳನ್ನು ತಳ್ಳಿಹಾಕಿದ ಅವರು, "ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹಾಕಿದ್ದಾರೆ ಎಂಬ ಮಾತುಗಳು ಕೇಳಿಬಂದಾಗ, ಒಬ್ಬ ಜವಾಬ್ದಾರಿಯುತ ಸಾಮಾಜಿಕ ಕಾರ್ಯಕರ್ತನಾಗಿ ನಾನು ಈ ಬಗ್ಗೆ ಎಸ್ಐಟಿ ರಚನೆ ಮಾಡುವಂತೆ ಒತ್ತಾಯಿಸಿದ್ದೆ ಅಷ್ಟೇ. ಆ ಸಮಯದಲ್ಲಿ ಒಬ್ಬ ವ್ಯಕ್ತಿ ಕರೆ ಮಾಡಿ ಮಾಸ್ಕ್ ಮ್ಯಾನ್ ಚಿನ್ನಯ್ಯ ಮಾತನಾಡಬೇಕು ಅಂದಾಗ ನಾನು ಮಾತನಾಡಿದ್ದೆ. ನಾನು ಧರ್ಮಸ್ಥಳದ ವಿರುದ್ಧ ಯಾಕೆ ಷಡ್ಯಂತ್ರ ರೂಪಿಸಲಿ?" ಎಂದು ಪ್ರಶ್ನಿಸಿದರು. ತಮ್ಮ ಮೇಲಿನ ನಿರಂತರ ರಾಜಕೀಯ ದಾಳಿಗಳ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದ ಪ್ರಕಾಶ್ ರಾಜ್, "ನಾನು ಸಮಾಜದಲ್ಲಿ ಯಾವುದೇ ವಿಷಯದ ಬಗ್ಗೆ ಪ್ರಶ್ನೆ ಎತ್ತಿದರೂ ತಕ್ಷಣ ನನ್ನನ್ನು 'ಹಿಂದೂ ವಿರೋಧಿ' ಎಂದು ಹಣೆಪಟ್ಟಿ ಕಟ್ಟಲಾಗುತ್ತದೆ. ಈ ಇಡೀ ಪ್ರಕರಣ ಸದ್ಯ ನ್ಯಾಯಾಲಯದ ವ್ಯಾಪ್ತಿಯಲ್ಲಿದೆ. ತನಿಖೆಯಿಂದಲೇ ಸತ್ಯಾಸತ್ಯತೆ ಹೊರಬರಬೇಕಿದೆ" ಎಂದರು.

# ಎರಡನೇ ಹಂತದ ವಿಸ್ತರಣೆಯಲ್ಲಿ ಸಚಿವ ಸ್ಥಾನ ಸಿಗಲಿದೆ: ಜಮೀರ್ ಖಾನ್ ವಿಶ್ವಾಸ

**ಬೆಂಗಳೂರು, ಜೂ.17:** ಮೊದಲ ಹಂತದ ಸಂಪುಟ ರಚನೆಯಲ್ಲಿ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದೆ, ಸಿಗಲಿಲ್ಲ, ಎರಡನೇ ಹಂತದ ಸಂಪುಟ ರಚನೆಯಲ್ಲಿ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ. ಹೈಕಮಾಂಡ್ ಏನು ನಿರ್ಧಾರ ಮಾಡುತ್ತದೋ ಅದಕ್ಕೆ ಬದ್ಧ ಎಂದು ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ಅಭಿಮಾನಿಗಳು ಪ್ರತಿಭಟಿಸುವುದು ಸಹಜ. ಆದರೆ, ತಾವು ಮಂತ್ರಿ ಸ್ಥಾನಕ್ಕೆ ಬೇಡಿಕೆ ಇಟ್ಟಿಲ್ಲ. ಎಲ್ಲೂ ಬಹಿರಂಗವಾಗಿ ಸಚಿವ ಸ್ಥಾನ ಕೊಡಿ ಎಂದು ಕೇಳಿಲ್ಲ. ಸಚಿವ ಸ್ಥಾನ ಸಿಗದಿದ್ದರೂ ಬೇಸರವಿಲ್ಲ ಎಂದಿದ್ದಾರೆ. ತಮ್ಮನ್ನು ಹೈಕಮಾಂಡ್ ಆಪ್ತ ಎಂದು ಬಿಂಬಿಸುತ್ತಿರುವ ವಿಚಾರ ಬಗ್ಗೆ ಕೇಳಿದಾಗ, ನಾನು ಯಾವ ಹೈಕಮಾಂಡ್‌ಗೆ ಕ್ಲೋಸ್ ಇದ್ದೀನಿ, ಪಕ್ಷದ ಜವಾಬ್ದಾರಿ ಮೇರೆಗೆ ಕೇರಳ ಹಾಗೂ ತೆಲಂಗಾಣ ವಿಧಾನಸಭೆ ಚುನಾವಣೆಗಳಿಗೆ ಹೋಗಿ ಪಕ್ಷದ ಪರವಾಗಿ ಭರ್ಜರಿ ಪ್ರಚಾರ ಮಾಡಿದ್ದೇನೆ ಅಷ್ಟೆ ಎಂದು ಸ್ಪಷ್ಟಪಡಿಸಿದರು.



**ಡಿ.ಕೆ. ಸುರೇಶ್ ನಾನು ಸ್ನೇಹಿತರು:**

ಇತ್ತೀಚೆಗೆ ಡಿ.ಕೆ. ಸುರೇಶ್ ಅವರನ್ನು ಭೇಟಿ ಮಾಡಿದ ಬಗ್ಗೆಯೂ ಸ್ಪಷ್ಟನೆ ನೀಡಿರುವ ಅವರು, ತಾವು ಸುರೇಶ್ ಅವರನ್ನು ಭೇಟಿ ಮಾಡುವುದು ಹೊಸದೇನಲ್ಲ. ಇದು ಹಲವು ವರ್ಷಗಳಿಂದ ನಡೆದುಕೊಂಡು ಬಂದಿರುವ ಸ್ನೇಹಪೂರ್ವಕ ಭೇಟಿ. ನಾವು ತಿಂಗಳಿಗೆ ನಾಲ್ಕು ಬಾರಿ ಭೇಟಿ ಮಾಡುತ್ತೇವೆ. ಬೆಂಗಳೂರಿನಲ್ಲಿ ನಾನು ಕ್ವಾರ್ಟರ್ಸ್‌ನಲ್ಲಿದ್ದರೆ ಅವರು ಬರುತ್ತಾರೆ, ಅವರು ತಮ್ಮ ಮನೆಯಲ್ಲಿದ್ದರೆ ನಾನು ಹೋಗಿ ಭೇಟಿ ಮಾಡುತ್ತೇನೆ, ಅದರಲ್ಲೇನೂ ವಿಶೇಷವಿಲ್ಲ ಎಂದರು.

**ಪರಿಷತ್‌ನ ಎಲ್ಲ 5 ಸ್ಥಾನಗಳನ್ನೂ ಗೆಲ್ಲುತ್ತೇವೆ:**

ವಿಧಾನ ಪರಿಷತ್ ಚುನಾವಣೆ ನಿನ್ನೆ ನಡೆದ ಸಿಎಲ್‌ಪಿ ಮೀಟಿಂಗ್‌ಗೆ ಹೋಗಿದ್ದೆ. ನಮ್ಮ ಪಕ್ಷದ ಎಲ್ಲಾ 140 ಶಾಸಕರು ಒಗ್ಗಟ್ಟಾಗಿದ್ದೇವೆ. ಪರಿಷತ್ ಚುನಾವಣೆಯಲ್ಲಿ ಒಬ್ಬ ಅಭ್ಯರ್ಥಿಯ ಗೆಲುವಿಗೆ 28 ಶಾಸಕರ ಮತ ಬೇಕಾಗುತ್ತದೆ. ನಮ್ಮಲ್ಲಿ ಸ್ಪಷ್ಟ ಬಹುಮತ ಇರುವುದರಿಂದ ಹೆಚ್ಚುವರಿ ಮತಗಳ ಅಗತ್ಯ ನಮಗಿಲ್ಲ. ಹೀಗಾಗಿ ಈ ಚುನಾವಣೆಗೆ ನಾವು ಜೆಡಿಎಸ್ ಶಾಸಕರನ್ನು ಸಂಪರ್ಕಿಸುತ್ತೇವೆ ಎಂಬ ಸುದ್ದಿಯಲ್ಲಿ ಸತ್ಯಾಂಶವಿಲ್ಲ. ಅವರ ಬೆಂಬಲ ನಮಗೆ ಬೇಕಾಗಿಲ್ಲ ಎಂದು ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ.

# 2024ರ ಪಿಡಿಒ ಸ್ಪರ್ಧಾತ್ಮಕ ಪರೀಕ್ಷೆ ಅಂತಿಮಪಟ್ಟಿ ಪ್ರಕಟಿಸಿ

## ಕೆಪಿಎಸ್‌ಸಿ ಕಾರ್ಯದರ್ಶಿಗೆ ಸಚಿವ ಈಶ್ವರ ಖಂಡ್ರೆ ಸೂಚನೆ

**ಬೆಂಗಳೂರು, ಜೂ.17:** ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ) 150 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಕರ್ನಾಟಕ ಲೋಕ ಸೇವಾ ಆಯೋಗದ ಕಾರ್ಯದರ್ಶಿಗಳಿಗೆ ತಿಳಿಸಿದ್ದಾರೆ. ಕೆಪಿಎಸ್.ಸಿ. ಕಾರ್ಯದರ್ಶಿಗೆ ಕಳಿಸಿರುವ ಲಿಖಿತ ಸೂಚನೆಯಲ್ಲಿ ಅವರು, ಗ್ರಾಮೀಣ ಪ್ರದೇಶದ ಪ್ರಗತಿಯಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದ್ದು, ಕಲ್ಯಾಣ ಕರ್ನಾಟಕ ವೃಂದದಲ್ಲಿ 97 ಹಾಗೂ ಉಳಿಕೆ ವೃಂದದಲ್ಲಿ 150 ಪಂಚಾಯ್ತಿ ಅಧಿಕಾರಿಗಳ ಹುದ್ದೆಗಳ ಭರ್ತಿಗೆ 2024ರಲ್ಲಿ ಅಧಿಸೂಚನೆ ಆಗಿದ್ದರೂ ಅಂತಿಮ ಪಟ್ಟಿ ಪ್ರಕಟಿಸದಿರುವ ಬಗ್ಗೆ ಪ್ರಸ್ತಾಪಿಸಿದ್ದಾರೆ. ಹಳ್ಳಿಗಳ ಆತ್ಮ ಗ್ರಾಮಗಳಲ್ಲಿದ್ದು, ಹಳ್ಳಿಗಳ ಅಭಿವೃದ್ಧಿಯಾದಾಗ ಮಾತ್ರವೇ ದೇಶದ ಅಭಿವೃದ್ಧಿ ಸಾಧ್ಯ ಎಂಬ ಮಹಾತ್ಮಾ ಗಾಂಧೀ ಅವರ ಮಾತುಗಳನ್ನು ಉಲ್ಲೇಖಿಸಿರುವ ಈಶ್ವರ ಖಂಡ್ರೆ, ಪಿಡಿಓಗಳ ನೇರ ನೇಮಕಾತಿ ಪ್ರಕ್ರಿಯೆ ನಡೆಸುವ ಸಂಬಂಧ ಕೆ.ಪಿ.ಎಸ್.ಸಿಗೆ 2024ರ ಮಾರ್ಚ್ 14ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ. ಸರ್ಕಾರ, ನೇಮಕಾತಿಯ ಗರಿಷ್ಠ ವಯೋಮಿತಿಯಲ್ಲಿ ಸಡಿಲಿಕೆ ಮಾಡುವ ತೀರ್ಮಾನವನ್ನು ಕೈಗೊಂಡ ಹಿನ್ನೆಲೆಯಲ್ಲಿ 2024ರ ಸೆಪ್ಟೆಂಬರ್ 17ರಂದು



ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗಿದ್ದು, ಕಲ್ಯಾಣ ಕರ್ನಾಟಕ ವೃಂದದ 97 ಹುದ್ದೆಗಳಿಗೆ 2024 ನವೆಂಬರ್ 16 ಮತ್ತು 17ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ, ಅಂತಿಮ ಆಯ್ಕೆ ಪಟ್ಟಿಯನ್ನು 2026ರ ಫೆಬ್ರವರಿ 20ರಂದು ಪ್ರಕಟಿಸಲಾಗಿರುತ್ತದೆ. ಆದರೆ, ಉಳಿಕೆ ವೃಂದದ 150 ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು 2024ರ ಡಿಸೆಂಬರ್ 07 ಮತ್ತು 8ರಂದು ನಡೆಸಿದ್ದರೂ ಈವರೆಗೆ ಅಂತಿಮ ಪಟ್ಟಿ ಪ್ರಕಟಿಸಲಾಗಿರುವುದಿಲ್ಲ. ಹೀಗಾಗಿ ಕೂಡಲೇ ಅಂತಿಮ ಪಟ್ಟಿ ಪ್ರಕಟಿಸಿ ಎಂದು ತಿಳಿಸಿದ್ದಾರೆ. ನೇಮಕಾತಿಯಲ್ಲಿನ ಈ ವಿಳಂಬದಿಂದಾಗಿ ಗ್ರಾಮೀಣಾಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅಡ್ಡಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಆದಷ್ಟು ಶೀಘ್ರ ಪೂರ್ಣಗೊಳಿಸುವಂತೆ ಈಶ್ವರ ಖಂಡ್ರೆ ತಿಳಿಸಿದ್ದಾರೆ.

# ಸಂತೋಷ್ ಲಾಡ್ ಪರ ಸಾಹಿತಿ, ಕಲಾವಿದರಿಂದ ಬ್ಯಾಟಿಂಗ್

**ಬೆಂಗಳೂರು, ಜೂ.17:** ಸಿದ್ದ ರಾಮಯ್ಯ ಅವರ ಸಚಿವ ಸಂಪುಟದಲ್ಲಿ ಕಾರ್ಮಿಕ ಸಚಿವರಾಗಿ ಒಳ್ಳೆಯ ಕೆಲಸ ಮಾಡಿದ್ದ ಸಂತೋಷ ಲಾಡ್ ಅವರನ್ನು ಮುಂದಿನ ಸಚಿವ ಸಂಪುಟದ ವಿಸ್ತರಣೆಯಲ್ಲಿ ಸಚಿವ ರನ್ನಾಗಿ ತೆಗೆದುಕೊಳ್ಳಬೇಕೆಂದು ಸಾಹಿತಿ–ಕಲಾವಿದರ ತಂಡ ಕಾಂಗ್ರೆಸ್ ಮುಖಂಡರಲ್ಲಿ ಮನವಿ ಮಾಡಿದೆ.

ಧಾರವಾಡ ಲೋಕಸಭಾ ಕ್ಷೇತ್ರದ ಮಾಜಿ ಸಂಸದ ಪ್ರೊ. ಐ.ಜಿ. ಸನದಿ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಮಾಡಿ ಸಂತೋಷ್ ಲಾಡ್ ಅವರನ್ನು ಸಚಿವರನ್ನಾಗಿ ನೇಮಿಸಬೇಕು ಎಂದು ಮನವಿ ಮಾಡಿತು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ, ತಮ್ಮ ಮನವಿಯನ್ನು ದೆಹಲಿಯ ಹೈಕಮಾಂಡಿಗೆ ಕಳುಹಿಸಲಾಗುವುದು ಎಂದು ತಿಳಿಸದರು.

ನಂತರ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರನ್ನು ಸಾಹಿತಿಗಳ ತಂಡ ಭೇಟಿ ಮಾಡಿ ಲಾಡ್ ಅವರಿಗೆ ಸಚಿವ ಸ್ಥಾನ ಕಲ್ಪಿಸಲು ಮನವಿ ಮಾಡಿತು.

ಸಾಹಿತಿ – ಕಲಾವಿದರ ತಂಡದಲ್ಲಿ ರಂಜಾನ್ ದರ್ಗಾ, ಡಾ. ಮಲ್ಲಿಕಾ ಘಂಟಿ, ಡಾ. ಸುಕನ್ಯಾ ಮಾರುತಿ, ಆರ್ ಜಿ ಹಳ್ಳಿ ನಾಗರಾಜ, ಡಾ. ಎಂ.ಡಿ. ವಕ್ಕುಂದ, ಡಾ. ಡಿ.ಎಸ್. ಚೌಗಲೆ, ಡಾ. ವಸುಂಧರಾ ಭೂಪತಿ, ವಿಶ್ವೇಶ್ವರಿ ಹಿರೇಮಠ, ಶಂಕರ ಹಲಗತ್ತಿ ಮೊದಲಾದವರು ಇದ್ದರು.

## ನಾವೀನ್ಯತೆ, ಕೃತಕ ಬುದ್ಧಿಮತ್ತೆ, ಸುಧಾರಿತ ಉತ್ಪಾದನೆ - ಸುಸ್ಥಿರ ನಗರಾಭಿವೃದ್ಧಿಗೆ ಬೃಹತ್ ಯೋಜನೆ

# ಬೆಂಗಳೂರನ್ನು ವಿಶ್ವ ಆರ್ಥಿಕತೆಯ ಪ್ರಮುಖ ಕೇಂದ್ರವಾಗಿಸಲು ಮಹತ್ವದ ಹೆಜ್ಜೆ

**ಬೆಂಗಳೂರು, ಜೂ.17:** ಬೆಂಗಳೂರು ಮಹಾನಗರವನ್ನು ಜಾಗತಿಕ ಆರ್ಥಿಕ ಬೆಳವಣಿಗೆಯ ಪ್ರಮುಖ ಕೇಂದ್ರವನ್ನಾಗಿ ಪರಿವರ್ತಿ ಸಲು ಕರ್ನಾಟಕ ಸರ್ಕಾರವು ಮಹತ್ತರ ಹೆಜ್ಜೆ ಇಟ್ಟಿದೆ. 2037ರ ವೇಳೆಗೆ ಬೆಂಗಳೂರನ್ನು ನಾವೀನ್ಯತೆ, ಕೃತಕ ಬುದ್ಧಿಮತ್ತೆ, ಸುಧಾರಿತ ಉತ್ಪಾದನೆ ಮತ್ತು ಸುಸ್ಥಿರ ನಗರಾಭಿವೃದ್ಧಿಯಲ್ಲಿ ವಿಶ್ವದ ಪ್ರಮುಖ ಹಬ್‌ಗಳಲ್ಲಿ ಒಂದಾಗಿ ರೂಪಿಸುವ ಬೃಹತ್ ಯೋಜನೆಯನ್ನು ಸರ್ಕಾರ ಹಮ್ಮಿಕೊಂಡಿದೆ. ಈ ಮಹತ್ವಾಕಾಂಕ್ಷಿ ಯೋಜನೆಯ ಪರಿಶೀಲನೆಗಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಜೂ.16ರಂದು ಉನ್ನತ ಮಟ್ಟದ ಸಮಿತಿ ಸಭೆ ನಡೆಯಿತು. ಈ ಸಭೆಯಲ್ಲಿ 'ಇನ್‌ಸ್ಟಿಟ್ಯೂಟ್ ಫಾರ್ ಸಸ್ಟೈನಬಿಲಿಟಿ, ಎಂಪ್ಲಾಯ್‌ಮೆಂಟ್ ಅಂಡ್ ಫೌಂಡೇಶನ್' ವಿವಿಧ ವಲಯಗಳನ್ನು ಒಳಗೊಂಡ ಸಮಗ್ರ ಮಾರ್ಗಸೂಚಿ ಯನ್ನು ಪ್ರಸ್ತುತಪಡಿಸಲಾಯಿತು. ಬೆಂಗಳೂರಿನ ಸುಸ್ಥಿರ ಅಭಿವೃದ್ಧಿಗಾಗಿ ಈ ಹಿಂದೆ ಡಿಸಿಎಂ ಹಾಗೂ ಮಹಾನಗರಾಭಿವೃದ್ಧಿ ಇಲಾಖೆಯ ಉಸ್ತುವಾರಿ ಸಚಿವರಾಗಿದ್ದ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ರಾಜ್ಯ ಸರ್ಕಾರ ಮತ್ತು ಫೌಂಡೇಶನ್ ಜಂಟಿಯಾಗಿ ಒಡಂಬಡಿಕೆಗೆ ಸಹಿಹಾಕಿವೆ. ಈ ಯೋಜನೆಯ ಮೂಲಕ ಮುಂದಿನ ದಿನಗಳಲ್ಲಿ ಬೆಂಗಳೂರಿನ ಆರ್ಥಿಕತೆಯನ್ನು ಸುಮಾರು 390 ರಿಂದ 420 ಶತಕೋಟಿ ಡಾಲರ್ (ಅಂದಿನ ವಿನಿಮಯ ದರದಂತೆ ಸುಮಾರು ರೂ 35 ಲಕ್ಷ ಕೋಟಿಗೂ ಅಧಿಕ) ಮಟ್ಟಕ್ಕೆ ವಿಸ್ತರಿಸುವ ಹಾಗೂ ಹೆಚ್ಚುವರಿಯಾಗಿ 25 ರಿಂದ 30 ಲಕ್ಷ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ.

**ಹೊಸ ಬೆಳವಣಿಗೆ ಕೇಂದ್ರ ಸ್ಥಾಪನೆಗೆ ಪ್ರಸ್ತಾವನೆ:**

ಪ್ರಸ್ತುತ ಬೆಂಗಳೂರು ಮಹಾನಗರ ಪ್ರದೇಶವು ಸುಮಾರು 1.5 ಕೋಟಿ ಜನಸಂಖ್ಯೆ ಮತ್ತು 8,000 ಚದರ ಕಿಲೋಮೀಟರ್ ವಿಸ್ತೀರ್ಣವನ್ನು ಹೊಂದಿದ್ದು, 149 ಶತಕೋಟಿ ಡಾಲರ್ ಮೌಲ್ಯದ ಆರ್ಥಿಕತೆಯೊಂದಿಗೆ ಕರ್ನಾಟಕದ ಒಟ್ಟು ರಾಜ್ಯ ದೇಶೀಯ ಉತ್ಪನ್ನಕ್ಕೆ ಶೇಕಡಾ 43% ಕ್ಕಿಂತ ಹೆಚ್ಚು ಕೊಡುಗೆ ನೀಡುತ್ತಿದೆ. ಬೆಂಗಳೂರಿನ ತಲಾ ಜಿಡಿಪಿ ಸುಮಾರು 9,700 ಡಾಲರ್ ಆಗಿದ್ದು, ಇದು ಕರ್ನಾಟಕದ ಸರಾಸರಿಗಿಂತ (5,000 ಡಾಲರ್) 1.9 ಪಟ್ಟು ಮತ್ತು ಭಾರತದ ಸರಾಸರಿಗಿಂತ (2,500 ಡಾಲರ್) 4 ಪಟ್ಟು ಹೆಚ್ಚಾಗಿದೆ. 2015–25ರ ಅವಧಿಯಲ್ಲಿ ಬೆಂಗಳೂರು ಶೇ. 9.7ರಷ್ಟು ವಾರ್ಷಿಕ ಸಂಯೋಜಿತ ಬೆಳವಣಿಗೆ ದರ ದಾಖಲಿಸುವ ಮೂಲಕ ಹೈದರಾಬಾದ್ (ಶೇ.7.5) ಮತ್ತು ಕರ್ನಾಟಕದ ಸರಾಸರಿಯನ್ನು (ಶೇ.8.5) ಮೀರಿಸಿ ದೇಶದಲ್ಲೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಮಹಾನಗರವಾಗಿ ಹೊರಹೊಮ್ಮಿದೆ. ನಗರದ ಒಳಗೆ ಮತ್ತು ಹೊರಗೆ ಸಮತೋಲಿತ ಅಭಿವೃದ್ಧಿಯನ್ನು ತರಲು ಹೊಸ 'ಬೆಳವಣಿಗೆ ಕೇಂದ್ರ ಗಳನ್ನು' ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ. ಇವುಗಳನ್ನು ಕೈಗಾರಿಕೆ, ಐಟಿ/ಬಿಟಿ, ಸಂಶೋಧನೆ, ಉತ್ಪಾದನೆ ಮತ್ತು ಲಾಜಿಸ್ಟಿಕ್ಸ್ ಒಳಗೊಂಡ ಸಮಗ್ರ ಹಬ್‌ಗಳಾಗಿ ಅಭಿವೃದ್ಧಿಪಡಿಸಲಾಗುವುದು. ಇದರಿಂದ ಕೇಂದ್ರ ಬೆಂಗಳೂರಿನ ಮೇಲಿನ ಒತ್ತಡ ಕಡಿಮೆಯಾಗಲಿದ್ದು, ಸುತ್ತಮುತ್ತಲಿನ ಪ್ರದೇಶಗಳಿಗೂ ಆರ್ಥಿಕತೆ ವಿಸ್ತರಣೆಯಾಗಲಿದೆ.

**ಸಂಚಾರ ದಟ್ಟಣೆ ನಿಯಂತ್ರಣಕ್ಕೆ 4 ಹೊಸ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ :**

ಬೆಂಗಳೂರಿನ ಸಂಚಾರ ದಟ್ಟಣೆಗೆ ಮುಕ್ತಿ ಹಾಡಲು ಸರ್ಕಾರ ಬೃಹತ್ ಮೂಲಸೌಕರ್ಯ ಯೋಜನೆಗಳನ್ನು ಸಿದ್ಧಪಡಿಸಿದೆ. ನಗರದ ಸುತ್ತ 287 ಕಿಲೋಮೀಟರ್ ಉದ್ದದ ವೃತ್ತಾಕಾರ ರೈಲು ಜಾಲ ನಿರ್ಮಾಣದ ಪ್ರಸ್ತಾವನೆ ಸಲ್ಲಿಸಿದೆ. ಮೆಟ್ರೋ ರೈಲು ವಿಸ್ತರಣೆಗಾಗಿ 400–500 ಕಿಲೋಮೀಟರ್‌ಗಳ ಹೆಚ್ಚುವರಿ ಮೆಟ್ರೋ ಜಾಲ ಹಾಗೂ 100–200 ಕಿಲೋಮೀಟರ್‌ಗಳ ಗ್ರೀನ್‌ಫೀಲ್ಡ್ ಮೆಟ್ರೋ ಕಾರಿಡಾರ್‌ಗಳು, 4 ಹೊಸ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ ಕಾರಿಡಾರ್‌ಗಳು ಮತ್ತು ಉಪನಗರ ರೈಲು ಜಾಲದ ವಿಸ್ತರಣೆ.

ಮುಂದಿನ ಸರಣಿ ಕಾರ್ಯಾಗಾರಗಳು –ಯೋಜನೆಯ ಯಶಸ್ಸಿಗಾಗಿ ಖಾಸಗಿ ವಲಯ ಹಾಗೂ ಹೂಡಿಕೆದಾರರನ್ನು ಒಳಗೊಂಡ 'ಐಡಿಯಾಸ್ ಕಾರ್ಯಾಗಾರ–1' ಅನ್ನು ಜೂನ್ ಕೊನೆಯ ವಾರದಲ್ಲಿ ಆಯೋಜಿಸಲಾಗುತ್ತಿದೆ. ತದನಂತರ ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ಮುಂದಿನ ಹಂತದ ಸಭೆಗಳು ನಡೆದು, ಸೆಪ್ಟೆಂಬರ್ ಮೊದಲ ವಾರದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳಿಗೆ ಅಂತಿಮ ಪ್ರಸ್ತುತಿ ಸಲ್ಲಿಸಲಾಗುವುದು. ಭವಿಷ್ಯದ ಸವಾಲುಗಳನ್ನು ಎದುರಿಸಲು ಸಜ್ಜಾದ ಜಾಗತಿಕ ಮಟ್ಟದ ಸುಸ್ಥಿರ ಬೆಂಗಳೂರನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಕಲಬುರಗಿಯ ಶಾಲಾ-ಕಾಲೇಜು ಕಟ್ಟಡಗಳ ಸ್ಥಿತಿಗತಿ, ಕುರಿತು ವರದಿ ನೀಡಲು ಜಿ.ಪಂ ಸಿಇಓ ರಾಹುಲ್ ಸಂಕನೂರ ಸೂಚನೆ

**ಕಲಬುರಗಿ, ಜೂ. 17:** ಕಲಬುರಗಿ ನಗರವೂ ಸೇರಿದಂತೆ ಜಿಲ್ಲೆಯಲ್ಲಿ ಕಳೆದ ಒಂದು ವಾರದಲ್ಲಿ ಶಾಲಾ ತರಗತಿಗಳು ನಡೆಯುತ್ತಿರುವ ಸಂದರ್ಭದಲ್ಲೇ ಕಟ್ಟಡಗಳ ಮೇಲ್ಛಾವಣಿ ಪದರ ಕುಸಿದು ಬಿದ್ದಿರುವ ಮತ್ತು ವಿದ್ಯಾರ್ಥಿಗಳು ಗಾಯಗೊಂಡು ಆಸ್ಪತ್ರೆ ಸೇರಿರುವ ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಸಂಕನೂರ ಅವರ ಅಧ್ಯಕ್ಷತೆಯಲ್ಲಿ ಸಂಬಂಧಿಸಿದ ಶಿಕ್ಷಣ ಇಲಾಖೆಯ ಅಧಿಕಾರಗಳ ಸಭೆ ಹಮ್ಮಿಕೊಳ್ಳಲಾಗಿತ್ತು.



ಸಭೆಯಲ್ಲಿ ಜಿಲ್ಲಾ ಪಂಚಾಯತ್ ಹಿರಿಯ ಅಧಿಕಾರಿಗಳು, ಶಿಕ್ಷಣ ಇಲಾಖೆ ಹಾಗೂ ಪಂಚಾಯತ್ ರಾಜ್, ಕೆ.ಆರ್.ಐ.ಡಿ.ಎಲ್ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

ಜಿಲ್ಲೆಯಲ್ಲಿನ ಸರಕಾರಿ ಶಾಲೆಗಳ ಕಟ್ಟಡದ ಪ್ರಸ್ತುತ ಸ್ಥಿತಿಗತಿಗಳ ಕುರಿತು ಜಿಲ್ಲೆಯ ಎಲ್ಲಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರಿಗೆ ಜಂಟಿಯಾಗಿ ತಮ್ಮ ತಾಲೂಕಿನ ಸರಕಾರಿ ಶಾಲೆಗಳಿಗೆ ಭೇಟಿ ನೀಡಿ ಸಮಗ್ರ ಪರಿಶೀಲನೆ ಮಾಡಿ ಜಂಟಿ ವರದಿಯನ್ನು ಕೂಡಲೇ ಸಲ್ಲಿಸಲು ಸೂಚಿಸಿದರು.

ಈ ಕುರಿತು ಮೇಲುಸ್ತುವಾರಿ ಮಾಡಲು ಉಪ ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ ರವರಿಗೆ ಸೂಚಿಸುತ್ತಾ ರಿಪೇರಿ ಹಾಗೂ ಇನ್ನಿತರ ಸಣ್ಣಪುಟ್ಟ ದುರಸ್ತಿಗಳ ಶಾಲೆಗಳ ಪಟ್ಟಿ ಹಾಗೂ ದೊಡ್ಡ ಪ್ರಮಾಣದ ದುರಸ್ತಿ ಇದ್ದಲ್ಲಿ ಅಂತಹ ಪ್ರಸ್ತಾವನೆಯನ್ನು ತುರ್ತಾಗಿ ಸಲ್ಲಿಸಲು ಸಿಇಓ ಅವರು ತಿಳಿಸಿದರು.

ಈಗಾಗಲೇ ಕಳೆದ ವರ್ಷ ಜಿಲ್ಲೆಯಲ್ಲಿ ಶಾಲೆಗಳ ಕಟ್ಟಡಗಳ ಸ್ಥಿತಿಗತಿ ಕುರಿತು ಸಮೀಕ್ಷೆ ನೆಸಿದ್ದು, ಆಗ ಜಿಲ್ಲೆಯ 37 ಶಾಲಾ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವ ಬಗ್ಗೆ ಮತ್ತು 19 ಶಾಲೆಗಳ ಗೋಡೆಗಳಲ್ಲಿ ಬಿರುಕು ಬಿಟ್ಟಿರುವ ಕುರಿತು ವರದಿ ನೀಡಲಾಗಿದ್ದು, ಅವುಗಳ ದುರಸ್ತಿಗೆ ಕಳೆದ ವರ್ಷವೇ ಜಿಲ್ಲಾ ಪಂಚಾಯತ್ ಮೂಲಕ ಪ್ರಸ್ತಾವನೆ ಸಲ್ಲಿಸಲಾಗಿತ್ತು ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಆದರೆ, ಪ್ರಸ್ತಾವನೆಗೆ ಸಂಬಂಧಿಸಿದಂತೆ ಹಣ ಬಿಡುಗಡೆಯಾಗದ್ದರಿಂದ ದುರಸ್ತಿ ಕಾರ್ಯ ಕೈಗೊಳ್ಳಲು ಸಾಧ್ಯವಾಗಿಲ್ಲವೆಂದು ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸಭೆಯ ಗಮನಕ್ಕೆ ತಂದಿದ್ದು, ಈಗಾಗಲೇ ಮಳೆಗಾಲ ಆರಂಭವಾಗಿದೆ ಕೂಡಲೇ ದುರಸ್ತಿ ಕಾಮಗಾರಿಗಳನ್ನುಆರಂಭಿಸುವ ಅಗತ್ಯವನ್ನು ಒತ್ತಿ ಹೇಳಿದರು.

ಮುಂಬರುವ ದಿನಗಳಲ್ಲಿ ಯಾವುದೇ ಅನಾಹುತಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ಹಿನ್ನೆಲೆಯಲ್ಲಿ ಸಮಗ್ರ ತನಿಖೆಯ ವರದಿ ಅಗತ್ಯವಾಗಿದ್ದು, ಇದನ್ನು ತುರ್ತು ಕೆಲಸವೆಂದು ಭಾವಿಸಿ ಸಮೀಕ್ಷೆ ವರದಿ ಸಿದ್ಧಪಡಿಸುವಂತೆ ಸಂಬಂದಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು.




ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಐಟಿಯು ಅಡಿಯಲ್ಲಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಸಂಘದ ಸದಸ್ಯರು ಬುಧವಾರ ಬಿಎಲ್‌ಒ ಕೆಲಸದಿಂದ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಧರಣಿ ನಡೆಸಿದರು.

### ಕಲ್ಯಾಣ ಕರ್ನಾಟಕದ ಯುವ ವಿಜ್ಞಾನಿಗಳಿಗೆ ಹೊಸ ಆಶಾಕಿರಣ

# ವಿವಿ ಕ್ಯಾಂಪಸ್‌ನಲ್ಲಿ ಬಯೋ ಇನ್ನೋವೇಷನ್ ಸೆಂಟರ್-ಕುಲಪತಿ ಪ್ರೊ. ಮುನಿರಾಜು



**ಬಳ್ಳಾರಿ,ಜೂ.17.**ಕಲ್ಯಾಣ ಕರ್ನಾಟಕದ ಭಾಗದಲ್ಲಿ ಹಲವಾರು ಯುವ ಸಂಶೋಧನಾ ವಿಜ್ಞಾನಿಗಳು ಮುಂಚೂಣಿಯಲ್ಲಿದ್ದು, ಅವರಿಗಾಗಿ ಮುಂದಿನ ದಿನಗಳಲ್ಲಿ ವಿವಿಯ ಕ್ಯಾಂಪಸ್‌ನಲ್ಲಿ ಬಯೋ ಇನ್ನೋವೇಷನ್ ಸೆಂಟರ್ ತೆರೆಯಲಾಗುವುದು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ ಮುನಿರಾಜು ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರೊ.ಸಿದ್ದು ಪಿ ಆಲಗೂರ ಸಭಾಂಗಣದಲ್ಲಿ ವಿಶ್ವವಿದ್ಯಾಲಯ ಮತ್ತು ಸೆಂಟರ್ ಫಾರ್ ನ್ಯಾನೋ ಮತ್ತು ಸಾಫ್ಟ್ ಮ್ಯಾಟರ್ ಸೈನ್ಸಸ್ ಆರ್ ಆಂಡ್ ಡಿ ಕೋಶವು ಜಂಟಿಯಾಗಿ ಬುಧವಾರ ಆಯೋಜಿಸಿದ್ದ ನ್ಯಾನೋ ಜಾಥಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಯೋ ಇನ್ನೋವೇಷನ್ ಸೆಂಟರ್ ಆರಂಭದಿಂದ ಕಲ್ಯಾಣ ಕರ್ನಾಟಕ ಭಾಗದ ಯುವ ವಿಜ್ಞಾನಿಗಳಿಗಾಗಿ ನಮ್ಮ ವಿಶ್ವವಿದ್ಯಾಲಯವು ಉತ್ತಮ ವೇದಿಕೆಯಾಗಲಿದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಬೆಂಗಳೂರಿನ ಸಿಇಎನ್‌ಎಸ್ ವಿಜ್ಞಾನಿ ಪ್ರೊ.ಸುಭಾಷ್ ಸಿ.ಕೆ ಅವರು ಮಾತನಾಡಿ, ಇಂಡಿಯಾ ನ್ಯಾನೋ ವಿಜ್ಞಾನ, ತಂತ್ರಜ್ಞಾನ ಮತ್ತು ನಾವಿನ್ಯತೆಯಲ್ಲಿ ಬೆಂಗಳೂರು ಪ್ರಮುಖ ಕೇಂದ್ರವಾಗಿದೆ. ವಿಜ್ಞಾನ ಕ್ಷೇತ್ರದ ಯುವ ಸಂಶೋಧಕರನ್ನು ತಂತ್ರಜ್ಞಾನದಲ್ಲಿ ಸಕ್ರಿಯಗೊಳಿಸುವಲ್ಲಿ ವೇದಿಕೆಯಾಗಿ ಈ ಕೇಂದ್ರವು ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

ದೇಶದ ಉತ್ತರ ಮತ್ತು ದಕ್ಷಿಣ ಭಾಗಗಳ 12 ರಾಜ್ಯಗಳ 20 ವಿವಿಧ ಸ್ಥಳಗಳಲ್ಲಿ ಕಾರ್ಯಕ್ರಮವನ್ನು ಕೇಂದ್ರವು ಆಯೋಜಿಸಿದೆ. ಯುವ ವಿಜ್ಞಾನಿಗಳಿಗೆ ಸಂಪೂರ್ಣವಾಗಿ ನಾವೀನ್ಯತೆ ಮತ್ತು ಅನ್ವೇಷಣೆ ಆಧಾರಿತ ತರಬೇತಿಗೆ ಅನುವು ಮಾಡಿಕೊಡುವುದೇ ಕೇಂದ್ರದ ಉದ್ದೇಶವಾಗಿದೆ ಎಂದು ತಿಳಿಸಿದರು.

### ಅರ್ಹರನ್ನು ಮತದಾರ ಪಟ್ಟಿಯಿಂದ ಹೊರಗಿಡಲು ಎಸ್‌ಐಆರ್ ಬಳಕೆ

# ಬಿಜೆಪಿಯಿಂದ ತಂತ್ರ ಎಂದು ಮಾಜಿ ಸಚಿವ ಕಿಮ್ಮನೆ ರತ್ನಾಕರ್ ಆರೋಪ

**ಶಿವಮೊಗ್ಗ, ಜೂ.17:** ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಜಾಣತನದಿಂದ ಹೊರಗಿಡುವ ದೊಡ್ಡದೊಂದು ತಂತ್ರದ ಭಾಗವಾಗಿ ಆಡಳಿತಾರೂಢ ಬಿಜೆಪಿ ಎಸ್‌ಐಆರ್ ಬಳಸಿಕೊಳ್ಳುತ್ತಿದೆ ಎಂದು ಮಾಜಿ ಸಚಿವ ಹಾಗೂ ಕಾಂಗ್ರೆಸ್ ಮುಖಂಡ ಕಿಮ್ಮನೆ ರತ್ನಾಕರ್ ಆರೋಪಿಸಿದ್ದಾರೆ.

'ಮತದಾರರ ವಿಶೇಷ ಪಟ್ಟಿ ಪರಿಷ್ಕರಣೆ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಸ್ವಾತಂತ್ರ್ಯದ ನಂತರ ದೇಶದ ಜನಸಂಖ್ಯೆ 33 ಕೋಟಿ ಇದ್ದಾಗ, ಪ್ರತಿಯೊಬ್ಬ ಭಾರತೀಯನಿಗೂ ಮತದಾನದ ಹಕ್ಕು ಸಿಗಬೇಕು ಮತ್ತು ಯಾರೂ ಪಟ್ಟಿಯಿಂದ ಹೊರಗುಳಿಯಬಾರದು ಎಂದು ಕಾಂಗ್ರೆಸ್ ಶ್ರಮಿಸಿತ್ತು. ಆದರೆ ಇಂದು ದೇಶದ ಜನಸಂಖ್ಯೆ 140 ಕೋಟಿ ದಾಟಿದೆ. ಇಂತಹ ಸಂದರ್ಭದಲ್ಲಿ ಆಡಳಿತದಲ್ಲಿರುವ ಬಿಜೆಪಿ, ತನಗೆ ಅನುಕೂಲ ವಾಗುವಂತೆ ಮತದಾರರನ್ನು ಪಟ್ಟಿಯಿಂದ ಹೇಗೆ ಕೈಬಿಡಬೇಕು ಎಂಬ ಅನುಕೂಲಸಿಂಧು ರಾಜಕಾರಣಕ್ಕೆ ಇಳಿದಿದೆ ಎಂದು ಆಕ್ರೋಶ ಹೊರಹಾಕಿದರು.

ಇದೇ ವೇಳೆ ಬಿಜೆಪಿಯ ಕೋಮು ರಾಜಕಾರಣದ ವಿರುದ್ಧ ವಾಗ್ದಾಳಿ ನಡೆಸಿದ ಅವರು, "ಬಿಜೆಪಿಯವರು ಮುಸ್ಲಿಂ ಮತ್ತು ಕ್ರಿಶ್ಚಿಯನ್ ಸಮುದಾಯಗಳನ್ನು ದೂಷಿಸುತ್ತಾ ತಮ್ಮ ರಾಜಕೀಯ ಅಸ್ತಿತ್ವ ಕಾಯ್ದುಕೊಳ್ಳುತ್ತಿದ್ದಾರೆ. ಆದರೆ ಕಾಂಗ್ರೆಸ್ ಎಲ್ಲ ವರ್ಗಗಳನ್ನು ಒಟ್ಟಿಗೆ ಕೊಂಡೊಯ್ಯುವ ಸಂಕಲ್ಪ ಮಾಡಿದೆ. ದೇಶದಲ್ಲಿ ರಾಹುಲ್ ಗಾಂಧಿ ಒಬ್ಬರೇ ಬದಲಾವಣೆ ತರಲು ಸಾಧ್ಯವಿಲ್ಲ, ಅವರ ಹೋರಾಟಕ್ಕೆ ಬೂತ್ ಮಟ್ಟದ ಬೆಂಬಲ ಬೇಕು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ನಾವು ಗೆಲ್ಲಬೇಕಾದರೆ ಎಸ್‌ಐಆರ್ ಪರಿಣಾಮಕಾರಿಯಾಗಿ ನಿರ್ವಹಿಸಬೇಕು" ಎಂದರು.

ಮತ್ತೊಬ್ಬ ಹಿರಿಯ ಮುಖಂಡ, ಮಾಜಿ ಸಂಸದ ಆಯನೂರು ಮಂಜುನಾಥ್ ಮಾತನಾಡಿ, "ಎಸ್‌ಐಆರ್ ಮೂಲಕ ನಮ್ಮ ಅಳಿವು-ಉಳಿವಿನ ಹೋರಾಟ ಆರಂಭವಾಗಿದೆ. ನಮ್ಮ ಸೈದ್ಧಾಂತಿಕ ಅಸ್ತಿತ್ವವನ್ನು ಉಳಿಸಿಕೊಳ್ಳಲು ಪ್ರತಿಯೊಬ್ಬ ಕಾರ್ಯಕರ್ತನೂ ಈ ಎಸ್‌ಐಆರ್ ವ್ಯವಸ್ಥೆಯನ್ನು ಸರಿಯಾಗಿ ಅರ್ಥ ಮಾಡಿ ಕೊಳ್ಳಬೇಕು. ನಮ್ಮ ಬೂತ್ ಗೆದ್ದರೆ ನಾವು ಪೂರ್ಣ ಚುನಾವಣೆ ಗೆದ್ದಂತೆ, ಬೂತ್ ಸೋತರೆ ಇಡೀ ಚುನಾವಣೆಯನ್ನೇ ಸೋತಂತೆ ಎಂಬುದನ್ನು ಮರೆಯಬಾರದು. ಪ್ರತಿಯೊಬ್ಬರ ಮನೆ ಬಾಗಿಲಿಗೆ ತೆರಳಿ ಮತದಾರರ ಪಟ್ಟಿಯನ್ನು ಸೂಕ್ಷ್ಮವಾಗಿ ಪರಿಷ್ಕರಿಸಿ" ಎಂದು ಕರೆ ನೀಡಿದರು.

ಕಾರ್ಯಾಗಾರದ ಅಧ್ಯಕ್ಷತೆಯನ್ನು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಲಸೆ ಚಂದ್ರಪ್ಪ ವಹಿಸಿದ್ದರು. ವೇದಿಕೆಯಲ್ಲಿ ಪ್ರಮುಖ ಮುಖಂಡರಾದ ಪ್ರಫುಲ್ಲಾ ಮಧುಕರ್, ಬಿ.ಆರ್. ಜಯಂತ್, ಅನಿತಾ ಕುಮಾರಿ, ಕಲಗೋಡು ರತ್ನಾಕರ್, ಸುರೇಶ್ ಬಾಬು, ಉಷಾ, ಪ್ರಭಾವತಿ, ಸದ್ದಾಂ ದೊಡ್ಮನೆ, ಎಲ್. ಚಂದ್ರಪ್ಪ, ಗಣಪತಿ ಮಂಡಗಲಲೆ, ಕಬೀರ್ ಚಿಪ್ಪಿ, ದಿನೇಶ್, ಕನ್ನಡಪ್ಪ ಈಡಿಗ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದು, ಮುಂಬರುವ ಚುನಾವಣಾ ಕಾರ್ಯತಂತ್ರಗಳ ಕುರಿತು ಚರ್ಚಿಸಿದರು.

**ಪರಿಣಾಮಕಾರಿಯಾಗಿ ಕೆಲಸ ಮಾಡದಿದ್ದರೆ ಕೈತಪ್ಪಲಿದೆ 97 ಕ್ಷೇತ್ರ**

ರಾಜ್ಯದಲ್ಲಿ ಸದ್ಯ 7 ಕೋಟಿ ಮತದಾರರಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಗೆ ಕೇವಲ ಒಂದು ತಿಂಗಳ ಅಲ್ಪಾವಧಿ ನೀಡಲಾಗಿದೆ. ಇದರಿಂದಾಗಿ ಯಾವುದೇ ಸರಿಯಾದ ಮಾಹಿತಿಯೇ ಇಲ್ಲದೆ ಲಕ್ಷಾಂತರ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯುವ ಆತಂಕಕಾರಿ ವಾತಾವರಣ ಸೃಷ್ಟಿಯಾಗಿದೆ."ಮತದಾನದ ಹಕ್ಕು ಕಳೆದುಕೊಂಡರೆ, ಪ್ರಜಾಪ್ರಭುತ್ವದಲ್ಲಿ ನೀವು ಎಲ್ಲಾ ಹಕ್ಕುಗಳನ್ನು ಕಳೆದುಕೊಂಡಂತೆ. ಈ ಸತ್ಯವನ್ನು ಕಾರ್ಯಕರ್ತರು ಜನರಿಗೆ ಮನವರಿಕೆ ಮಾಡಿಕೊಡಬೇಕು. ಸದ್ಯ



ರಾಜ್ಯದಲ್ಲಿ ಕಾಂಗ್ರೆಸ್ 140 ಶಾಸಕರ ಬಲ ಹೊಂದಿದೆ ಎಂದು ನೆನಪಿಸಿದ ಅವರು, ಚುನಾವಣಾ ಸಮೀಕ್ಷೆ ಯೊಂದರ ಆಘಾತಕಾರಿ ವರದಿಯನ್ನು ಹಂಚಿಕೊಂಡರು. "ನಾವು ಎಸ್‌ಐಆರ್ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಿ, ಪರಿಣಾಮಕಾರಿಯಾಗಿ ಕೆಲಸ ಮಾಡದಿದ್ದರೆ ಮುಂದಿನ ಚುನಾವಣೆಯಲ್ಲಿ ಸುಮಾರು 97 ಕ್ಷೇತ್ರಗಳನ್ನು ಕಳೆದುಕೊಳ್ಳಲಿದ್ದೇವೆ ಎಂದು ಸಮೀಕ್ಷೆಯೊಂದು ಎಚ್ಚರಿಸಿದೆ. ಹೀಗಾಗಿ ಪ್ರತಿ ಬೂತ್ ಮಟ್ಟದಲ್ಲೂ ಕಾಂಗ್ರೆಸ್ ಕಾರ್ಯಕರ್ತರು ತೀವ್ರ ಜಾಗರೂಕರಾಗಿ ಮತದಾರರ ಪಟ್ಟಿ ಪರಿಷ್ಕರಣೆ ಮಾಡಬೇಕು" ಎಂದು ಕಿಮ್ಮನೆ ರತ್ನಾಕರ್ ಕಾರ್ಯಕರ್ತರಿಗೆ ಸೂಚನೆ ನೀಡಿದರು.

# ಅಭಿವೃದ್ಧಿಯನ್ನು ಕಂಡು ವಿರೋಧ ಪಕ್ಷದ ನಾಯಕರು ವಿಚಲಿತ- ವೆಂಕಟೇಶ್ ಹೆಗಡೆ

**ಬಳ್ಳಾರಿ ಜೂ 17.** ಬಳ್ಳಾರಿ-ವಿಜಯನಗರ ಜಿಲ್ಲೆಯ ಅಭಿವೃದ್ಧಿಗೆ ಮಾನ್ಯ ಸಂಸದರಾದ ಈ ತುಕಾರಾಂ ಅವರು ಮಾಡುತ್ತಿರುವ ನಿರಂತರ ಪ್ರಯತ್ನಗಳು ಮತ್ತು ಜನಪರ ಕೆಲಸಗಳನ್ನು ವಿರೋಧ ಪಕ್ಷದವರು ಸಹಿಸಿಕೊಳ್ಳಲಾಗದೆ ಅನಗತ್ಯ ಆರೋಪಗಳನ್ನು ಮಾಡುತ್ತಿದ್ದಾರೆ.

ಸಂಸದರಾದ ಇ. ತುಕಾರಾಂ ಅವರು ರಸ್ತೆ, ರೈಲು,ನೀರಾವರಿ, ಶಿಕ್ಷಣ, ಆರೋಗ್ಯ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಗಳೊಂದಿಗೆ ಸಮನ್ವಯ ಸಾಧಿಸಿ ಅನೇಕ ಯೋಜನೆಗಳನ್ನು ಜಿಲ್ಲೆಗೆ ತಂದಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಅಭಿವೃದ್ಧಿಯ ಹೊಸ ದಿಕ್ಕು ತೋರಿಸುತ್ತಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ಪ್ರಶ್ನಿಸುವ ಹಕ್ಕು ಎಲ್ಲರಿಗೂ ಇದೆ. ಆದರೆ ರಾಜಕೀಯ ಲಾಭಕ್ಕಾಗಿ ಸುಳ್ಳು ಆರೋಪಗಳು, ವೈಯಕ್ತಿಕ ನಿಂದನೆಗಳು ಮತ್ತು ದ್ವೇಷದ ಭಾಷೆಯನ್ನು ಬಳಸುವುದು ಸರಿಯಲ್ಲ. ಜನರು ಅಭಿವೃದ್ಧಿಯನ್ನು ನೋಡುತ್ತಿದ್ದಾರೆ, ಕೆಲಸ ಮಾಡುವವರನ್ನು ಗುರುತಿಸುತ್ತಿದ್ದಾರೆ.

ಇಂದು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳು, ಜನರ ವಿಶ್ವಾಸ ಮತ್ತು ಬೆಂಬಲವೇ ಇ.ತುಕಾರಾಂ ಅವರ ಜನಪ್ರಿಯತೆಗೆ ಸಾಕ್ಷಿಯಾಗಿದೆ.

ಅದಕ್ಕಾಗಿಯೇ ವಿರೋಧ ಪಕ್ಷದವರಿಗೆ ಅಭಿವೃದ್ಧಿಯ ವಿಚಾರವೇ ಜೀರ್ಣವಾಗುತ್ತಿಲ್ಲ.

ಜನರ ಆಶೀರ್ವಾದ ಮತ್ತು ಬೆಂಬಲದೊಂದಿಗೆ ಅಭಿವೃದ್ಧಿಯ ಪಯಣ ಮುಂದುವರಿಯಲಿದೆ.



ರಾಜಕೀಯ ಆರೋಪಗಳಿಗೆ ಜನರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ವೆಂಕಟೇಶ್ ಹೆಗಡೆ, ವಕೀಲರು,

ಕೆಪಿಸಿಸಿ ರಾಜ್ಯ ಮಾಧ್ಯಮ ವಕ್ತಾರರು ಹಾಗು ಕೆಪಿಸಿಸಿ ರಾಜ್ಯ ಸಂಯೋಜಕರು ಪ್ರಚಾರ ಸಮಿತಿ ವೆಂಕಟೇಶ್ ಹೆಗ್ಗಡೆ ತಿಳಿಸಿದ್ದಾರೆ.

# ಜಿ.ಎಸ್. ಪಾಟೀಲ್‌ಗೆ ಸಚಿವ ಸ್ಥಾನಕ್ಕೆ ಆಗ್ರಹಿಸಿ ಬೆಂಬಲಿಗರಿಂದ ಪಾದಯಾತ್ರೆ



**ತುಮಕೂರು, ಜೂ.17:** ತಿಂಗಳ ಅಂತ್ಯಕ್ಕೆ ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ ಇದ್ದು, ರೋಣ ಶಾಸಕ ಜಿ.ಎಸ್. ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಬೆಂಬಲಿಗರು ಎರಡು ದಿನಗಳ ಪಾದಯಾತ್ರೆಯನ್ನು ಬುಧವಾರ ತುಮಕೂರಿನ ಸಿದ್ದಗಂಗಾ ಮಠದಿಂದ ಆರಂಭಿಸಿದ್ದಾರೆ.

ಈ ಪಾದಯಾತ್ರೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮುಕ್ತಾಯಗೊಳ್ಳಲಿದೆ. ಜಿ.ಎಸ್. ಪಾಟೀಲ್ ಅವರ ಪುತ್ರ ಮಿಥುನ್ ಪಾಟೀಲ್ ಅವರು ಈ ಪಾದಯಾತ್ರೆಯ ನೇತೃತ್ವ ವಹಿಸಿದ್ದು, ಮತದಾರರು, ಅಭಿಮಾನಿಗಳು, ಕಾರ್ಯಕರ್ತರು ಮತ್ತು ವಿವಿಧ ಪ್ರಗತಿಪರ ಸಂಘಟನೆಗಳ ಸದಸ್ಯರು ಸೇರಿದಂತೆ ನೂರಾರು ಬೆಂಬಲಿಗರು ಸಚಿವ ಸ್ಥಾನಕ್ಕಾಗಿ ಆಗ್ರಹಿಸಿದ್ದಾರೆ.

ಸಿದ್ದಗಂಗಾ ಮಠದಲ್ಲಿ ಶಿವಕುಮಾರ ಸ್ವಾಮೀಜಿಯವರ ಸಮಾಧಿ(ಗದ್ದುಗೆ)ಗೆ ಪ್ರಾರ್ಥನೆ ಸಲ್ಲಿಸಿದ ನಂತರ ಯಾತ್ರೆ ಪ್ರಾರಂಭವಾಯಿತು. ಬೆಂಬಲಿಗರು ಮತ್ತು ಹಿತೈಷಿಗಳ ಸಮ್ಮುಖದಲ್ಲಿ ಸಿದ್ದಲಿಂಗ ಮಹಾಸ್ವಾಮೀಜಿ ಪಾದಯಾತ್ರೆಗೆ ಚಾಲನೆ ನೀಡಿದರು.ಹಲವಾರು ಮಠಾಧೀಶರು ಮತ್ತು ಧಾರ್ಮಿಕ ಮುಖಂಡರು ಈ ಪಾದಯಾತ್ರೆಗೆ ಬೆಂಬಲ ನೀಡಿದ್ದಾರೆ. ಮುರುಘಾ ಮಠದ ಮರುಳ ಸಿದ್ದೇಶ್ವರ ಸ್ವಾಮೀಜಿ, ಅಬ್ಬಿಗೆರೆ ಮಠದ ಯಲ್ಲಾಲಿಂಗೇಶ್ವರ ಸ್ವಾಮೀಜಿ ಮತ್ತು ಕುಕನೂರು ಇಟಗಿಯ ಗದುಗೆಪ್ಪ ಶ್ರೀಗಳು ಸಹ ಪಾದಯಾತ್ರೆಯಲ್ಲಿ ಭಾಗವಹಿಸಿದ್ದಾರೆ. ಪಾದಯಾತ್ರೆಯಲ್ಲಿ ಭಾಗವಹಿಸಿದ್ದ ಬೆಂಬಲಿಗರು, ಜಿ.ಎಸ್. ಪಾಟೀಲ್ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವಂತೆ ಕಾಂಗ್ರೆಸ್ ನಾಯಕರನ್ನು ಒತ್ತಾಯಿಸುವ ಫಲಕಗಳು ಮತ್ತು ಬ್ಯಾನರ್‌ಗಳನ್ನು ಹಿಡಿದಿದ್ದರು. ನಿನ್ನೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿವಾಸದ ಹೊರಗೆ ಹಲವಾರು ಕಾಂಗ್ರೆಸ್ ಕಾರ್ಯಕರ್ತರು ಜಮಾಯಿಸಿ, ಪಕ್ಷದ ಶಾಸಕ ಯಶವಂತರಾಯಗೌಡ ಪಾಟೀಲ್ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕೆಂದು ಒತ್ತಾಯಿಸಿದ್ದರು. ಇಂದು ಮತ್ತೊಬ್ಬ ಶಾಸಕನಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಬೆಂಬಲಿಗರು ಪಾದಯಾತ್ರೆ ಆರಂಭಿಸಿದ್ದಾರೆ.

### ಜಯದೇವ ಆಸ್ಪತ್ರೆಯಲ್ಲಿ ಒಂದೇ ದಿನ 11 ಮಂದಿ ಸಾವು

# ಮೃತರ ಕುಟುಂಬಸ್ಥರ ಆಕ್ರೋಶ, ವೈದ್ಯಾಧಿಕಾರಿಗಳ ಸ್ಪಷ್ಟನೆ

**ಮೈಸೂರು, ಜೂ.17:** ನಗರದ ಜಯದೇವ ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದ ಒಂದೇ ದಿನದಲ್ಲಿ 11 ಮಂದಿ ಮೃತಪಟ್ಟಿದ್ದಾರೆ ಎಂದು ಆರೋಪಿಸಿ ಮೃತರ ಕುಟುಂಬಸ್ಥರು ಬುಧವಾರ ಆಕ್ರೋಶ ವ್ಯಕ್ತಪಡಿಸಿದರು.

ರಾತ್ರಿ ವೈದ್ಯರೂ ಇರಲಿಲ್ಲ. ಸರಿಯಾದ ಮಾಹಿತಿಯೂ ನೀಡುವುದಿಲ್ಲ. ಅವರ ನಿರ್ಲಕ್ಷ್ಯದಿಂದ ಸಾವುಗಳು ಸಂಭವಿಸುತ್ತಿವೆ ಎಂದು ಆರೋಪಿಸಿದರು. ಈ ಘಟನೆಯ ವಿಡಿಯೊ ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡಿತ್ತು. ವಿ.ವಿಪುರಂ ಪೊಲೀಸರು ಆಗಮಿಸಿ, ಕುಟುಂಬಸ್ಥರನ್ನು ಸಮಾಧಾನಪಡಿಸಿದರು.

ವಿಷಯ ತಿಳಿಯುತ್ತಿದ್ದಂತೆ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಹಾಗೂ ಜಯದೇವ ಆಸ್ಪತ್ರೆ ನಿರ್ದೇಶಕ ಡಾ.ದಿನೇಶ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದರು.




ಮೆಡಿಕಲ್ ಸೂಪರಿಟೆಂಡೆಂಟ್ ಡಾ.ಕೆ.ಎಸ್.ಸದಾನಂದ ಅವರು ಅಧಿಕಾರಿಗಳಿಗೆ ಮಾಹಿತಿ ನೀಡಿದರು. 'ಸಮಯ ಮೀರಿ ಬಂದ ಕಾರಣ ರೋಗಿಗಳು ಮೃತಪಟ್ಟಿದ್ದಾರೆ. ನಿತ್ಯ ಇದೇ ಪ್ರಮಾಣದಲ್ಲಿ ಮೃತರಾಗುತ್ತಿದ್ದಾರೆ. ಆರೋಪ ಮಾಡುತ್ತಿರುವವರೂ ರೋಗಿಯನ್ನು 12 ಗಂಟೆ ತಡವಾಗಿ ಕರೆತಂದಿದ್ದರು. ರಾತ್ರಿ ಮೂವರು ವೈದ್ಯರು ಇದ್ದರು. ಎಲ್ಲಾ ರೋಗಿಗಳನ್ನೂ ಆರೈಕೆ ಮಾಡಿದ್ದಾರೆ. ಆ ಕುರಿತ ಸಿಸಿ ಟಿವಿ ದೃಶ್ಯಗಳು ಇವೆ' ಎಂದು ತಿಳಿಸಿದರು.

# ನಿವೃತ್ತ ಸೂಪರಿಂಟೆಂಡೆಂಟ್ ಇಂಜಿನಿಯರ್ ಮಾಣಿಕ್ ಕನಕಟ್ಟಿ ಮನೆ ಮೇಲೆ ಲೋಕಾಯುಕ್ತರ ದಾಳಿ

**ಕಲಬುರಗಿ, ಜೂ. 17:** ಜಿಲ್ಲೆಯಲ್ಲಿ ಬೆಳ್ಳಂಬೆಳಗ್ಗೆ ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಪೊಲೀಸರು ಶಾಕ್ ನೀಡಿದ್ದಾರೆ. ಪಂಚಾಯತ್ ರಾಜ್ ಇಲಾಖೆಯ ನಿವೃತ್ತ ಸೂಪರಿಂಟೆಂಡೆಂಟ್ ಇಂಜಿನಿಯರ್ ಮಾಣಿಕ ಕನಕಟ್ಟಿ ಅವರು ನಿವೃತ್ತರಾಗಿ 15 ದಿನಗಳಲ್ಲೇ ಅವರಿಗೆ ಸೇರಿದ ಮನೆ ಹಾಗೂ ವಿವಿಧ ಆಸ್ತಿಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ಏಕ ಕಾಲದಲ್ಲಿ ಭರ್ಜರಿ ದಾಳಿ ನಡೆಸಿದ್ದಾರೆ.

ಕಳೆದ ಎರಡು ವಾರಗಳ ಹಿಂದೆಯಷ್ಟೇ ನಿವೃತ್ತರಾಗಿದ್ದ ಮಾಣಿಕ ಕನಕಟ್ಟಿ ಅವರ ಕಲಬುರಗಿ ನಗರದ ಗೋದುತಾಯಿ ನಗರದಲ್ಲಿರುವ ನಿವಾಸ ಸೇರಿದಂತೆ ಒಟ್ಟು ಐದು ಕಡೆಗಳಲ್ಲಿ ಈ ಶೋಧ ಕಾರ್ಯ ನಡೆದಿದೆ. ಸದ್ಯ ನಿವೃತ್ತ ಇಂಜಿನಿಯರ್ ಬೆಂಗಳೂರಿನಲ್ಲಿ ವಾಸವಾಗಿದ್ದಾರೆ ಎನ್ನಲಾಗಿದೆ.

**ಐದು ಕಡೆ ಏಕಕಾಲದಲ್ಲಿ ಶೋಧ:** ಎಸ್ಪಿ ಸಿದ್ದರಾಜು ನೇತೃತ್ವ ಲೋಕಾಯುಕ್ತ ಎಸ್ಪಿ ಸಿದ್ದರಾಜು ಅವರ ನೇತೃತ್ವದ ಅಧಿಕಾರಿಗಳ ತಂಡವು ನಿಖರ ಮಾಹಿತಿ ಆಧರಿಸಿ ಈ ದಾಳಿ ನಡೆಸಿದೆ. ಕಲಬುರಗಿ ಮಾತ್ರವಲ್ಲದೆ



ಮಾಣಿಕ ಕನಕಟ್ಟಿ ಅವರಿಗೆ ಸೇರಿದ ಬೀದರ್ ಜಿಲ್ಲೆಯ ವಿವಿಧ ಆಸ್ತಿಗಳ ಮೇಲೂ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀಲನೆಗೆ ಇಳಿಯುತ್ತಿದ್ದಂತೆ ಆರಂಭದಲ್ಲೇ ಕೋಟ್ಯಂತರ ರೂಪಾಯಿ ಮೌಲ್ಯದ ಅಕ್ರಮ ಆಸ್ತಿಪಾಸ್ತಿಗಳು ಪತ್ತೆಯಾಗಿವೆ. ಪ್ರಾಥಮಿಕ ತನಿಖೆಯಲ್ಲೇ ಬೀದರ್ ಜಿಲ್ಲೆಯ ಹುಮ್ನಾಬಾದ್‌ನಲ್ಲಿರುವ ಎರಡು ಕಾಂಪ್ಲೆಕ್ಸ್‌ಗಳು, ಕಲಬುರಗಿಯ ಎರಡು ಐಷಾರಾಮಿ ಮನೆಗಳು ಹಾಗೂ ಬೀದರ್ ಜಿಲ್ಲೆಯ ಹಳ್ಳಿಖೇಡ ಗ್ರಾಮದಲ್ಲಿರುವ ಬರೋಬ್ಬರಿ 20 ಎಕರೆ ವಿಸ್ತೀರ್ಣದ ತೋಟ ಮತ್ತು ತೋಟದ ಮನೆಗೆ ಸಂಬಂಧಿಸಿದ ಮಹತ್ವದ ದಾಖಲೆಗಳನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

# ಬಳ್ಳಾರಿ ಜಿಲ್ಲೆಯ 11 ಸೂಕ್ಷ್ಮ ಪ್ರದೇಶಗಳಲ್ಲಿ ಸಾರ್ವಜನಿಕ ಮೊಹರಂ ಆಚರಣೆ ಸಂಪೂರ್ಣ ನಿಷೇಧ: ಜಿಲ್ಲಾ ದಂಡಾಧಿಕಾರಿ ನಾಗೇಂದ್ರ ಪ್ರಸಾದ್ ಆದೇಶ

**ಬಳ್ಳಾರಿ,ಜೂ.17.**ಜಿಲ್ಲೆಯ ವಿವಿಧ ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ 2026ರ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಆಚರಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶಿಸಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕರು ನೀಡಿದ ವರದಿಯನ್ವಯ, ಹಳೆಯ ವೈಷಮ್ಯಗಳ ಕಾರಣದಿಂದಾಗಿ ಹಬ್ಬದ ಸಂದರ್ಭದಲ್ಲಿ ಶಾಂತಿ ಭಂಗ ಉಂಟಾಗುವ ಸಾಧ್ಯತೆಗಳಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಜೂ.17 ರಿಂದ 26 ರವರೆಗೆ ಒಟ್ಟು 10 ದಿನಗಳ ಕಾಲ ಈ ನಿಷೇಧಾಜ್ಞೆ ಜಾರಿಯಲ್ಲಿರಲಿದೆ.

*ನಿಷೇಧಾಜ್ಞೆ ಅನ್ವಯವಾಗುವ 11 ಗ್ರಾಮಗಳ ವಿವರ:*

ಜಿಲ್ಲೆಯ ಒಟ್ಟು 7 ಪೊಲೀಸ್ ಠಾಣಾ ವ್ಯಾಪ್ತಿಯ 11 ಸೂಕ್ಷ ?ಮ ಗ್ರಾಮ/ಪ್ರದೇಶಗಳಲ್ಲಿ ಜನರು ಗುಂಪು ಸೇರುವುದು, ಮೆರವಣಿಗೆ ನಡೆಸುವುದು ಮತ್ತು ಪಂಜಾಗಳನ್ನು ಪ್ರತಿಷ್ಠಾಪಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

*ಸಿರುಗುಪ್ಪ ವ್ಯಾಪ್ತಿ (04 ಗ್ರಾಮಗಳು):* ನಾಡಂಗ, ಕೆ.ಸೂಗೂರು, ದೇಶನೂರು, ಅಲಬನೂರು.

* ಪಿ.ಡಿ. ಹಳ್ಳಿ ವ್ಯಾಪ್ತಿ (01 ಗ್ರಾಮ):* ಅಸುಂಡಿ.

* ಕಂಪ್ಲಿ ವ್ಯಾಪ್ತಿ (02 ಗ್ರಾಮಗಳು):* ನಂ.15-ಗೋನಾಳ್, ನಂ-10 ಮುದ್ದಾಪುರ.

* ಬಳ್ಳಾರಿ ಗಾಂಧಿನಗರ ವ್ಯಾಪ್ತಿ (01 ಸ್ಥಳ):* ಮಹಾನಂದಿಕೊಟ್ಟಂ ಒಳಗಡೆ ತಾಳೂರು ರಸ್ತೆಯ ಕನ್ನಡ ನಗರ ಮುಖ್ಯರಸ್ತೆ (ನ್ಯಾಯಾಧೀಶರ ವಸತಿ ಗೃಹ ಕಾಂಪೌಂಡ್ ಪಕ್ಕದಲ್ಲಿ).

*ಕುಡತಿನಿ ವ್ಯಾಪ್ತಿ (01 ಗ್ರಾಮ):* ಹೊನ್ನಳ್ಳಿ.



* ತೋರಣಗಲ್ಲು ವ್ಯಾಪ್ತಿ (01 ಗ್ರಾಮ):* ವಿ.ನಾಗಲಾಪುರ.

* ಬಳ್ಳಾರಿ ಗ್ರಾಮೀಣ ವ್ಯಾಪ್ತಿ (01 ಗ್ರಾಮ):* ಕೊಳಗಲ್ಲು ಗ್ರಾಮ.

ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35 (ಎ) (ಬಿ) (ಡಿ) (ಇ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಜಿಲ್ಲಾಧಿಕಾರಿಯವರು ಈ ಕೆಳಗಿನ ನಿಯಮಗಳನ್ನು ಜಾರಿಗೊಳಿಸಿದ್ದಾರೆ.

*ಶಸ್ತ್ರಾಸ್ತ್ರಗಳ ನಿಷೇಧ:* ಶಸ್ತ್ರ, ಬಡಿಗೆ, ಬರ್ಚಿ, ಗದೆ, ಬಂದೂಕು, ಚೂರಿ, ಕೋಲು, ಲಾಠಿ ಅಥವಾ ಶರೀರಕ್ಕೆ ಗಾಯ ಮಾಡಬಹುದಾದ ಯಾವುದೇ ವಸ್ತುಗಳನ್ನು ಒಯ್ಯುವುದನ್ನು ನಿಷೇಧಿಸಲಾಗಿದೆ.

*ಸ್ಫೋಟಕಗಳ ನಿಷೇಧ:* ಯಾವುದೇ ತರಹದ ದಾಹಕ (ನಾಶಕಾರಿ) ಪದಾರ್ಥ ಇಲ್ಲವೇ ಸ್ಫೋಟಕ ವಸ್ತುಗಳನ್ನು ಸಾಗಿಸುವಂತಿಲ್ಲ.

*ನಿಂದನೆಗೆ ತಡೆ:* ಯಾವುದೇ ವ್ಯಕ್ತಿಗಳ ಭಾವಚಿತ್ರಗಳನ್ನು ಅವಮಾನಕಾರಿಯಾದ ರೀತಿಯಲ್ಲಿ ಪ್ರದರ್ಶಿಸುವಂತಿಲ್ಲ.

*ಪ್ರಚೋದನೆಗೆ ನಿರ್ಬಂಧ:* ಬಹಿರಂಗವಾಗಿ ಪ್ರಚೋದನಾಕಾರಿ ಘೋಷಣೆ ಕೂಗುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ಸಭ್ಯತೆ ಅಥವಾ ನೀತಿಯನ್ನು ಉಲ್ಲಂಘಿಸುವ ಯಾವುದೇ ಸನ್ನೆ ಅಥವಾ ವಸ್ತುಗಳ ಪ್ರದರ್ಶನವನ್ನು ನಿರ್ಬಂಧಿಸಲಾಗಿದೆ.

*ಸಾರ್ವಜನಿಕ ಸಂಚಾರ:* ಗುಂಪುಗೂಡಿ ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿ ಕಾನೂನು ಕೈಗೆತ್ತಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ನಿಯಮ ಮೀರಿ ಬಳಸುವ ವಸ್ತುಗಳನ್ನು ಪೊಲೀಸ್ ಅಧಿಕಾರಿಗಳು ಜಪ್ತಿ ಮಾಡಿ ಸರ್ಕಾರಕ್ಕೆ ಜಮಾ ಮಾಡಲಿದ್ದಾರೆ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಕಲಬುರಗಿ ಕೇಂದ್ರ ಬಸ್ ನಿಲ್ದಾಣದಿಂದ, ವಿಮಾನ ನಿಲ್ದಾಣಕ್ಕೆ ನೂತನ ಸಿಟಿ ಬಸ್ ಸೇವೆಗೆ ಚಾಲನೆ

**ಕಲಬುರಗಿ, ಜೂ. 17:** ನಗರದಿಂದ 11 ಕಿಮೀ ದೂರ ದಲ್ಲಿರುವ ವಿಮಾನ ನಿಲ್ದಾಣಕ್ಕೆ ಹೋಗಲು ಮತ್ತು ವಿಮಾನದಿಂದ ಬರುವ ಪ್ರಯಣಿಕರನ್ನು ನಗರಕ್ಕೆ ಕರೆತರಲು, ನಗರದ ಕೆ.ಕೆ.ಆರ್.ಟಿ.ಸಿ ಸಂಸ್ಥೆಯಿಂದ ಕೇಂದ್ರ ಬಸ್ ನಿಲ್ದಾಣ– ವಿಮಾನ ನಿಲ್ದಾಣ ನಡುವೆ ನಗರ ಬಸ್ ಸೇವೆಗೆ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಪಾಟೀಲ ಅವರು ಹಸಿರು ಧ್ವಜ ತೋರಿಸುವ ಮೂಲಕ ಚಾಲನೆ ನೀಡಿದರು.




ಕಲಬುರಗಿ ಮತ್ತು ಬೆಂಗಳೂರು ನಡುವೆ ವಿಮಾನ ಸೇವೆಗಳು ಪುನರಾರಂಭಗೊಂಡಿ ರುವ ಹಿನ್ನೆಲೆಯಲ್ಲಿ, ಸಾರ್ವ ಜನಿಕರು ಹಾಗೂ ಪ್ರಯಾಣಿಕರ ಅನುಕೂಲ ಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಕೆ.ಕೆ.ಆರ್.ಟಿ.ಸಿ) ವತಿಯಿಂದ ನಗರದ ಪ್ರಮುಖ ಕೇಂದ್ರಗಳಿಂದ ವಿಮಾನ ನಿಲ್ದಾಣಕ್ಕೆ ನೂತನ ಸಿಟಿ ಬಸ್ ಸೇವೆಯನ್ನು ಆರಂಭಿಸಲಾಗಿದೆ ಎಂದರು.

ಈ ಕುರಿತು ಮಾಹಿತಿ ನೀಡಿದ ಅವರು ವಿಮಾನ ಪ್ರಯಾಣಿಕರು ಮಾತ್ರವಲ್ಲದೆ ಸಾರ್ವಜನಿಕರು ಕೂಡ ಈ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕು ಖಾಸಗಿ ವಾಹನಗಳ ವೆಚ್ಚಕ್ಕೆ ಹೋಲಿಸಿದರೆ ಈ ಬಸ್ ಸೇವೆ ಅತ್ಯಂತ ಕಡಿಮೆ ದರದಲ್ಲಿ ಲಭ್ಯವಿದ್ದು, ಸಾರ್ವಜನಿಕರ ಹಣ ಉಳಿತಾಯವಾಗಲಿದೆ ಎಂದರು.

ಬಸ್ ಸಂಚಾರದ ವಿವರ: ಈ ವಿಶೇಷ ಬಸ್ ಪ್ರತಿದಿನ ಬೆಳಿಗ್ಗೆ 6:10 ಗಂಟೆಗೆ ಕಲಬುರಗಿ ಕೇಂದ್ರೀಯ ಬಸ್ ನಿಲ್ದಾಣದಿಂದ ಹೊರಟು ನಗರದ ಪ್ರಮುಖ ರಸ್ತೆಗಳಾದ ವಲ್ಲಭಭಾಯಿ ಸರ್ಕಲ್(ತಿಮ್ಮಾಪೂರ) ಮತ್ತು ಅನ್ನಪೂರ್ಣ ಕ್ರಾಸ್ ಮಾರ್ಗವಾಗಿ 7:00 ಗಂಟೆಗೆ ವಿಮಾನ ನಿಲ್ದಾಣ ತಲುಪಲಿದೆ. ಹಾಗೆಯೇ ಬೆಳಿಗ್ಗೆ 8:00 ಗಂಟೆಗೆ ವಿಮಾನ ನಿಲ್ದಾಣದಿಂದ ಹೊರಟು ಕಲಬುರಗಿ ಕೇಂದ್ರೀಯ ಬಸ್ ನಿಲ್ದಾಣಕ್ಕೆ ಇದೇ ಮಾರ್ಗದ ಮೂಲಕ ಆಗಮಿಸಲಿದೆ. ಪ್ರಯಾಣಿಕರ ಅಗತ್ಯಕ್ಕೆ ತಕ್ಕಂತೆ ಟ್ರಿಪ್‌ಗಳ ಸೇವೆಯನ್ನು ಒದಗಿಸಲು ಸಂಸ್ಥೆ ಯೋಜಿಸಿದೆ ಎಂದು ಹೇಳಿದರು.




ನೀಟ್ ಪರೀಕ್ಷಾ ಹಗರಣದ ವಿರುದ್ಧ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬುಧವಾರ ಎಐಡಿಎಸ್‌ಒ ಕರ್ನಾಟಕದ ಸದಸ್ಯರು ಪ್ರತಿಭಟನೆ ನಡೆಸಿದರು.

# ಬಸವಕಲ್ಯಾಣ ಅಸಂಖ್ಯ ಶರಣರ ತ್ಯಾಗ ಭೂಮಿ




**ಬೀದರ, ಜೂ. 17:** ಬಸವಕಲ್ಯಾಣ ಸಾವಿರಾರು ಶರಣರು ಪ್ರಾಣಕೊಟ್ಟ ತ್ಯಾಗಭೂಮಿಯಾಗಿದ್ದು, ಇಲ್ಲಿ ಬಸವಣ್ಣನವರಿಗೆ ಚ್ಯುತಿ ಬಾರದಂತೆ ನಿರ್ವಹಿಸುತ್ತಾ ಬರುತ್ತಿದ್ದೇವೆ ಎಂದು ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದರು.

ಆಡಳಿತ ಸೌಧದ ಹತ್ತಿರ ಬೀದರ್‌ನ ವಚನ ಸಮೂಹ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಅನುಭವ ಗ್ರೀನ್ ಸಿಟಿ ಯೋಜನೆಗೆ ಅಡಿಗಲ್ಲು ಹಾಗೂ ವಚನ ಗ್ಲೋಬಲ್ ವೆಂಚರ್ಸ್ ಸಂಸ್ಥೆ ಉದ್ಘಾಟನೆ, 16ನೇ ವಾರ್ಷಿಕೋತ್ಸವ ನಿಮಿತ್ತ 16 ಸಾವಿರ ಸಸಿ ನೆಡುವ, ವೃಕ್ಷಾರೋಪಣ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಬಸವ ತತ್ವಗಳಿಗೆ ವಿರೋಧವಾಗಿ ಹಿಂದೂಶರಣರ ಸಮಾವೇಶ ನಡೆಸುತ್ತಿರುವ ಕನ್ಹೇರಿ ಶ್ರೀಗಳ ವಿರುದ್ಧ ನಾವು ನಿರಂತರ ಹೋರಾಟ ಮಾಡುತ್ತಿದ್ದೇವೆ. ಜೂ.28ರಂದು ಎಲ್ಲರೂ ಕಲ್ಯಾಣಕ್ಕೆ ಆಗಮಿಸಿ ಬಸವನಿಷ್ಠೆ ತೋರಿಸಿ, ಕನ್ಹೇರಿ ಶ್ರೀ ಕಲ್ಯಾಣ ಪ್ರವೇಶ ನಡೆಯದಂತೆ ತಡೆಯಬೇಕೆಂದು ಕರೆ ನೀಡಿದರು.

ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಮಾತನಾಡಿ, ಭಾರತ ಅತ್ಯಂತ ವೇಗವಾಗಿ ಬೆಳೆಯುತ್ತಿದೆ ಎಂದು ವಿಶ್ವ ಬ್ಯಾಂಕ್ ಹೇಳಿದರೆ ಸಾಕಾಗಲ್ಲ, ಇಲ್ಲಿನ ಪ್ರಜೆಗಳು ಶ್ರೇಷ್ಠ ವ್ಯಕ್ತಿತ್ವ ಹೊಂದಿದವರು ಎಂದು ಸಾಬೀತು ಮಾಡಿದಾಗ ಭಾರತ ಯಶಸ್ವಿ ರಾಷ್ಟ್ರವಾಗುತ್ತದೆ. ಬುದ್ಧಿಜೀವಿಗಳಲ್ಲಿ ಅಧಿಕಾರ ಪಡೆದುಕೊಂಡವರಲ್ಲಿ ಸ್ವಾರ್ಥ ಭಾವನೆ ಹೆಚ್ಚಾಗುತ್ತಿದೆ. ಬಸವಣ್ಣನವರ ತತ್ವಾದರ್ಶಗಳನ್ನು ಇಡೀ ಜಗತ್ತಿಗೆ ತೋರಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

# ಜಿಮ್ಸ್ ಆಸ್ಪತ್ರೆಯಲ್ಲಿ ವಿಶ್ವ ತಂಬಾಕುರಹಿತ ದಿನಾಚರಣೆ

**ಕಲಬುರಗಿ, ಜೂ. 17:** ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ಎದುರಿಸುವ ಮನವಿಯನ್ನು ಮರೆ ಮಾಚುವುದು ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ನಗರದ ಜಿಮ್ಸ್ ಆಸ್ಪತ್ರೆಯ ಹತ್ತನೆಯ ಮಹಡಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು ಜಿಮ್ಸ್‌ನ್ ಪ್ರಾಂಶುಪಾಲ ಡಾ. ಅಜಯ್ ಕುಮಾರ ಉದ್ಘಾಟಿಸಿದರು.




ಜಿಮ್ಸ್‌ನ ಜಿಲ್ಲಾ ಸಶಸ್ತ್ರಜ್ಞರು ಹಾಗೂ ಅಧೀಕ್ಷಕ ಡಾ. ರುಖೀಯ ಅಸ್ನಾ ರಬಾ ಅವರು, ತಂಬಾಕು ಹಾಗೂ ಅದರ ಉತ್ಪನ್ನಗಳ ವ್ಯಸನದಿಂದ ಆಗುವ ದುಷ್ಪರಿಣಾಮಗಳ ಕುರಿತು ಮಾತನಾಡಿದರು. ಅಲ್‌ಬದರ್ ಡೆಂಟಲ್ ಕಾಲೇಜಿನ ಪ್ರಾಂಶುಪಾಲ ಡಾ. ಸೈಯ್ಯದ್ ಝಕಾಉಲ್ಲಾಹ ಅವರೂ ಮಾತನಾಡಿದರು.

ಪ್ರಸ್ತಾವಿಕವಾಗಿ ಮಾತನಾಡಿದ ದಂತ ವಿಭಾಗದ ಮುಖ್ಯಸ್ಥೆ ಡಾ. ಅರ್ಚನಾ ಎಸ್. ಅವರು, ದಂತ ವಿಭಾಗದಲ್ಲಿ ಮಾಡುವ ನಿಕೋಟಿನ್ ರಿಪ್ಲೆಸ್ ಮೆಂಟ್ ಥೆರಪಿ ಹಾಗೂ ತಂಬಾಕು ವ್ಯಸನಿಗಳಿಗೆ, ವ್ಯಸನಮುಕ್ತಗೊಳಿಸಲು ತಿಂಗಳಿಗೆ ಸುಮಾರು 200–300 ವ್ಯಕ್ತಿಗಳೊಂದಿಗೆ ಸಮಾಲೋಚನೆ ಮಾಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮನೋಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಪ್ರಭುಕಿರಣ ಗೋಗಿ ಅವರು, ನಿಕೋಟೀನ್ ಮಾನವ ಮೆದುಳನ್ನು ದುರ್ಬಳಕೆ ಮಾಡಿಕೊಂಡು ಹೇಗೆ ವ್ಯಸನಿಯನ್ನಾಗಿ ಮಾಡಬಹುದು ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಸುಜಾತಾ ಪಾಟೀಲ್ ಅವರು, ಜಿಲ್ಲಾ ತಂಬಾಕು ನಿಯಂತ್ರಣ ಕಾರ್ಯಕ್ರಮ ಹಾಗೂ ಕೋಟ್ಪಾ ಕಾಯ್ದೆ ಕುರಿತು ಮಾತನಾಡಿದರು.

ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಜಿಲ್ಲಾ ಪಂಚಾಯತ, ಜಿಲ್ಲಾ ಆಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ತಂಬಾಕು ನಿಷೇಧ ಕುರಿತು ಜನಜಾಗೃತಿ ಮೂಡಿಸಲು ಜಿಲ್ಲಾ ಆಸ್ಪತ್ರೆಯ ಆವರಣದಿಂದ ಜಗತ್ ವೃತ್ತದವರೆಗೆ ವೈದ್ಯ ಮತ್ತು ಅರೆವೈದ್ಯಕೀಯ ವಿದ್ಯಾರ್ಥಿಗಳಿಂದ ಪ್ರಭಾತ್ ಪೇರಿ ಹಮ್ಮಿಕೊಳ್ಳಲಾಯಿತು.

ದಿನಾಚರಣೆ ಅಂಗವಾಗಿ ಜಿಮ್ಸ್, ಇ.ಎಸ್.ಐ.ಸಿ, ಎಚ್.ಕೆ.ಇ.ಎಸ್ ಹಾಗೂ ಅಲಬದರ್ ದಂತ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಬಿತ್ತಿ ಚಿತ್ರ ಪ್ರದರ್ಶನ ಸ್ಪರ್ಧೆಯನ್ನು ಆಯೋಜಿಸಿ ವಿಜೇತರಾಗಿದವರಿಗೆ ಬಹುಮಾನ ವಿತರಿಸಲಾಯಿತು.

# ಬೀದರ್‌ನಲ್ಲಿ ಅಕ್ರಮ ಗಣಿಗಾರಿಕೆ, ಬೆಲೆಬಾಳುವ ಕೆಂಪುಕಲ್ಲುಗಳ ಹಗಲು ದರೋಡೆ....!

**ಬೀದರ್, ಜೂ. 17:** ಮಹಾರಾಷ್ಟ್ರ ಮತ್ತು ತೆಲಂಗಾಣ ಎರಡು ರಾಜ್ಯದ ಗಡಿ ಹಂಚಿಕೊಂಡಿರುವ ಜಿಲ್ಲೆಯಲ್ಲಿ ಅಕ್ರಮವಾಗಿ ಬೆಲೆಬಾಳುವ ಕೆಂಪು ಕಲ್ಲು ಅಕ್ರಮ ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿದೆ. ಬೀದರ್ ಜಿಲ್ಲೆಯ ಎಲ್ಲಾ ತಾಲೂಕಿನಲ್ಲಿ 40ಕ್ಕೂ ಹೆಚ್ಚು ಸ್ಥಳದಲ್ಲಿ ಭೂಮಿಯ ಒಡಲನ್ನು ಬಗೆದು ಕೆಂಪು ಕಲ್ಲುಗಳನ್ನು ಅಕ್ರಮವಾಗಿ ತೆಗೆದುಮಾರಾಟ ಮಾಡಲಗುತ್ತಿದೆ. ಇಷ್ಟೆಲ್ಲಾ ನಡೆಯುತ್ತಿದ್ದರೂ, ಜಿಲ್ಲೆಯ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಮಾತ್ರ ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ.



ಗಡಿ ಜಿಲ್ಲೆ ಬೀದರ್‌ನಲ್ಲಿ ಕೆಂಪು ಕಲ್ಲು ಕೊರೆಯುವ ಧಂದೆ ಜೋರಾಗಿ ನಡೆಯುತ್ತಿದ್ದು, ಹಾಡಹಗಲೇ ಗಣಿಗಾರಿಕೆ ಮಾಡಲಾಗುತ್ತಿದೆ. ಬೀದರ್ ಹಾಗೂ ಭಾಲ್ಕಿ ತಾಲೂಕಿನಲ್ಲಿಯೇ ಅತೀ ಹೆಚ್ಚು ಗಣಿಗಾರಿಕೆ ನಡೆಯುತ್ತಿದ್ದು, ಈ ಬಗ್ಗೆ ಯಾರೂ ಕೂಡ ಚಕಾರ ಎತ್ತುತ್ತಿಲ್ಲ. ಬೀದರ್ ತಾಲೂಕಿನ ಸಿರ್ಸಿ, ಔರಾದ್, ಚಟ್ನಳ್ಳಿ, ಅಣದೂರು ವಾಡಿ, ಸಗೋಳ್ಳಗಿ ತಾಂಡಾ ಹಾಗೂ ಭಾಲ್ಕಿ ತಾಲೂಕಿನ ಖಾನಾಪುರ ಸುತ್ತಮುತ್ತ ಭಾರೀ ಪ್ರಮಾಣದಲ್ಲಿ ಕೆಂಪು ಕಲ್ಲು ಕೊರೆಯುವ ಕೆಲಸ ನಡೆಯುತ್ತಿದೆ. ದೊಡ್ಡದೊಡ್ಡ ಯಂತ್ರಗಳನ್ನು ಬಳಸಿಕೊಂಡು ಭೂಮಿಯ ಒಡಲಿನಿಂದ ಕಲ್ಲುಗಳನ್ನು ಹೆಕ್ಕಿ ತೆಗೆಯುತ್ತಿದ್ದಾರೆ.

ಪೋಲೀಸರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಈ ವಿಚಾರಗೊತ್ತಿದ್ದರು ಕಂಡು ಕಾಣದವರಂತೆ ಕುಳಿತಿದ್ದಾರೆ. ಸರಕಾರದ ನೀತಿ ನಿಯಮಗಳನ್ನು ಗಾಳಿಗೆ ತೂರಿ ಅಕ್ರಮವಾಗಿ ಕಲ್ಲು ಕೊರೆಯುವ ದಂಧೆಯನ್ನು ಯಾರ ಅಂಜಿಕೆ, ಅಳುಕ್ಕಿಲ್ಲದೇ ನಡೆಸಲಾಗುತ್ತಿದೆ. ಗ್ರಾಮದ ಅಕ್ಕಪಕ್ಕದಲ್ಲಿ ಫಲವತ್ತಾದ ಜಮೀನುಗಳಲ್ಲಿ ಅಕ್ರಮ ದಂಧೆ ನಡೆಯುತ್ತಿದ್ದರು ಅಧಿಕಾರಿಗಳು ಮಾತ್ರ ಸುಮ್ಮನೆ ಕುಳಿತ್ತಿದ್ದಾರೆ.

**ಒಂದು ಕಲ್ಲಿಗೆ 25 ರೂ. ಮಾರಾಟ:** ಜಿಲ್ಲೆಯಲ್ಲಿ ಕಳೆದ ಹತ್ತಾರು ವರ್ಷದಿಂದ ಕೆಂಪು ಕಲ್ಲು ಗಣಿಗಾರಿಕೆ ನಡೆಯುತ್ತಿದೆ. ಕೆಲವು ರೈತರಿಂದ ಜಮೀನನ್ನು ಖರೀದಿಸಿ ಅಲ್ಲಿಯೂ ಕಲ್ಲು ಗಣಿಗಾರಿಕೆ ಮಾಡುತ್ತಿದ್ದಾರೆ. ಇನ್ನು ಕೆಲವು ರೈತರು ತಮ್ಮ ಹೊಲದಲ್ಲಿಯೇ ಕಲ್ಲು ಕೊರೆಯುವವರನ್ನ ಕರೆದುಕೊಂಡು ಬಂದು ಕಲ್ಲು ತೆಗೆದು 25 ರೂ.ಗೆ ಒಂದರಂತೆ ಮಾರಾಟ ಮಾಡುತ್ತಿದ್ದಾರೆ. ಗಣಿಗಾರಿಕೆ ಮಾಡುವವರು ಅಕ್ಕಪಕ್ಕದ ಪೋಲೀಸ್ ಠಾಣಾ ಅಧಿಕಾರಿಗಳಿಗೆ ತಿಂಗಳಿಗೆ ಹಣ ಕೊಟ್ಟು ಗಣಿಗಾರಿಕೆ ನಡೆಯುವ ಸ್ಥಳಕ್ಕೆ ಭೇಟಿ ನೀಡದಂತೆ ಮಾಡಿದ್ದಾರೆ ಎಂಬುವುದು ಇಲ್ಲಿನ ಜನರ ಮಾತು.

**ಪರಿಸರ ಹಾಳು:** ಅಪ್ಪಕ್ಕೂ ಯಾರಾದರು ಅಧಿಕಾರಿಗಳು ಗಣಿ ಬಂದ್ ಮಾಡುವಂತೆ ಒತ್ತಡ ಹಾಕಿದರೆ ಒಂದೆರಡು ದಿನ ಬಂದ್ ಮಾಡಿ ಮತ್ತೆ ಆರಂಭಿಸುತ್ತಾರೆ. ಹೀಗಾಗಿ ಪೊಲೀಸರು ಗಣಿ ಮತ್ತು ಭೂವಿಜ್ಞಾನ ಇಲಾಖೆ ಮತ್ತು ಪೊಲ್ಯೂಷನ್ ಕಂಟ್ರೋಲ್ ಬೋರ್ಡ್ ಅಧಿಕಾರಿಗಳು ಯಾವುದೇ ಕ್ರಮಕೈಗೊಳ್ಳದಿರುವುದು ಅನುಮಾನಕ್ಕೆ ಕಾರಣವಾಗಿದೆ. ಜೊತೆಗೆ ಇಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಯಿಂದ ಪರಿಸರ ಹಾಳಾಗುತ್ತಿದ್ದು, ಈ ಬಗ್ಗೆ ಮಾತ್ರ ಯಾರೊಬ್ಬರು ತುಟಿಕ್ ಪಿಟಿಕ್ ಅನ್ನುತ್ತಿಲ್ಲ. ಫಲವತ್ತಾದ ಜಮೀನಿನಲ್ಲಿ ಯಾವುದೆ ರೀತಿಯ ಗಣಿಗಾರಿಕೆ ಮಾಡಬಾರದು, ಊರು ಪ್ರವಾಸಿ ಸ್ಥಳ ಹಾಗೂ ರಸ್ತೆಯ ಅಕ್ಕಪಕ್ಕದಲ್ಲಿ ಗಣಿಗಾರಿಕೆ ಮಾಡಲೇ ಬಾರದು ಎನ್ನುವುದು ಸಹ ಕಾನೂನಿನಲ್ಲಿದೆ. ಆದರೆ ಸರಕಾರ ನಿಯಮಗಳನ್ನ ಉಲ್ಲಂಘಿಸಿ ಈ ದಂಧೆ ಮಾಡುತ್ತಿದ್ದಾರೆಂದು ಜನರ ಆರೋಪಿಸುತ್ತಿದ್ದಾರೆ.

ಬೀದರ್ ಜಿಲ್ಲೆ ಗಡಿನಾಡು ಆಗಿದ್ದ ರಿಂದ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸುತ್ತಿಲ್ಲ. ಆದ್ದರಿಂದಲೇ ಇಂತಹ ಅಕ್ರಮ ದಂಧೆಗಳು ಜಿಲ್ಲೆಯಲ್ಲಿ ಅವ್ಯಾಹತವಾಗಿ ನಡೆಯುತ್ತಿವೆ. ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳದಿದ್ದರೆ ಬಳ್ಳಾರಿ ಜಿಲ್ಲೆಗಾದ ಪರಿಸ್ಥಿತಿ ಬೀದರ್ ಜಿಲ್ಲೆಗೆ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ.

**ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕ್ರಮ**

# ಚಾಮುಂಡಿಬೆಟ್ಟದಲ್ಲಿ ಪ್ಲಾಸ್ಟಿಕ್ ಕಿರಿಕಿರಿ ತಪ್ಪಿಸಲು ಎಸ್‌ಓಪಿ

**ಮೈಸೂರು, ಜೂ.17:** ಚಾಮುಂಡಿ ಬೆಟ್ಟದ ಚಾಮುಂಡೇಶ್ವರಿ ದೇವಾಲಯದ ಆವರಣದಲ್ಲಿ 'ಪ್ಲಾಸ್ಟಿಕ್ ಮೊದಲಾದ ತ್ಯಾಜ್ಯ'ದಿಂದ ಭಕ್ತರಿಗೆ ಆಗುತ್ತಿರುವ ಕಿರಿಕಿರಿ ತಪ್ಪಿಸಲು ಹೊಸದಾದ 'ಪ್ರಮಾಣಿತ ಕಾರ್ಯಾಚರಣೆ ವಿಧಾನ' (ಎಸ್‌ಓಪಿ) ರೂಪಿಸಿ ಅನುಸರಿಸಲು ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕ್ರಮ ಕೈಗೊಂಡಿದೆ.



ಜೀವವೈವಿಧ್ಯದ ಆಗರ'ವಾಗಿರುವ ಈ ಬೆಟ್ಟದ ಮಾರ್ಗದಲ್ಲಿ ಹಾಗೂ ಮೆಟ್ಟಿಲುಗಳ ಹಾದಿಯಲ್ಲಿ ಎಲ್ಲೆಂದರಲ್ಲಿ ಕಸ ಹಾಕುವುದು ಕಂಡುಬರುತ್ತಿದೆ. ಇದರಿಂದ ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದ್ದರೂ ಅದು ಕಟ್ಟುನಿಟ್ಟಾಗಿ ಜಾರಿಯಾಗುತ್ತಿಲ್ಲ. ಪ್ಲಾಸ್ಟಿಕ್ ಬಾಟಲಿಗಳ ರಾಶಿಯೇ ಅಲ್ಲಲ್ಲಿ ಕಂಡುಬರುತ್ತಿದೆ. ನಗರವೂ ಸೇರಿದಂತೆ ಜಿಲ್ಲೆಯಾದ್ಯಂತ, ರಾಜ್ಯದ ವಿವಿಧ ಜಿಲ್ಲೆಗಳು, ಹೊರರಾಜ್ಯಗಳು ಹಾಗೂ ವಿದೇಶಗಳಿಂದಲೂ ಇಲ್ಲಿಗೆ ನಿತ್ಯವೂ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಬರುತ್ತಾರೆ. ಹೀಗೆ ಬರುವವರಿಗೆ ತ್ಯಾಜ್ಯದ ಕಳಪೆ ನಿರ್ವಹಣೆಯ ಕಾರಣದಿಂದ 'ಇರಿಸು–ಮುರಿಸು' ಉಂಟಾಗುತ್ತಿದೆ. ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಇಲ್ಲಿರುವ ಅಂಡಿಗಳಿಂದಲೂ ಸಾಕಷ್ಟು ತ್ಯಾಜ್ಯ ಉತ್ಪಾದನೆ ಆಗುತ್ತಿದೆ. ಅವರು ವ್ಯಾಪಾರ ಮುಗಿಸಿ ಹೋದ ನಂತರ ಸ್ವಚ್ಛತೆ ಕಾರ್ಯ ಸರಿಯಾಗಿ ನಡೆಯುತ್ತಿಲ್ಲ. ಮುಂಜಾನೆಯೇ ದೇವಿಯ ದರ್ಶನಕ್ಕೆಂದು ಬರುವ ಅಸಂಖ್ಯಾತ ಭಕ್ತರಿಗೆ 'ತ್ಯಾಜ್ಯದ ದರ್ಶನ'ವೇ ಮೊದಲಿಗೆ ಆಗುತ್ತಿದೆ! ಈ ಬಗ್ಗೆ ಪ್ರವಾಸಿಗರು ಅಸಮಾಧಾನ ವ್ಯಕ್ತಪಡಿಸುತ್ತಲೇ ಬಂದಿದ್ದಾರೆ. ಕೆಲವರು ಅಲ್ಲಿನ ದುಸ್ಥಿತಿಯನ್ನು ಹಾಗೂ ಪ್ಲಾಸ್ಟಿಕ್ ಬಾಟಲಿಗಳು ಬಿದ್ದಿದ್ದನ್ನು ವಿಡಿಯೊ ಮಾಡಿ, ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳುವುದು ಕಂಡುಬರುತ್ತಲೇ ಇದೆ. ಇದನ್ನು ಗಮನಿಸಿದ ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ ಅವರು, ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ. ರೂಪಾ ಅವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದರು. ಸ್ವಚ್ಛತೆಗೆ ಹೆಚ್ಚಿನ ಗಮನ ನೀಡುವಂತೆ ತಾಕೀತು ಮಾಡಿದ್ದರು. ಇದರಿಂದ ಎಚ್ಚೆತ್ತ ಪ್ರಾಧಿಕಾರವು, ಹೆಚ್ಚಿನ ಸ್ವಚ್ಛತಾ ಸಿಬ್ಬಂದಿಯನ್ನು ನಿಯೋಜಿಸಿ ದೇವಾಲಯಯ ಆವರಣ, ಮೆಟ್ಟಿಲುಗಳ ಮಾರ್ಗ, ವಾಹನಗಳನ್ನು ನಿಲುಗಡೆ ಮಾಡಿ ಭಕ್ತರು ದೇವಾಲಯಕ್ಕೆ ಬರುವ ರಸ್ತೆಯುದ್ದಕ್ಕೂ ಸ್ವಚ್ಛತೆ ಮಾಡಿಸಿದ್ದಾರೆ.

ನಿತ್ಯವೂ ಸ್ವಚ್ಛತಾ ಕಾರ್ಯ ನಡೆಯಬೇಕು. ಹೊರಗಡೆಯಿಂದ ಬರುವ ಪ್ರವಾಸಿಗರಲ್ಲಿ ನಮ್ಮ ಧಾರ್ಮಿಕ ಕೇಂದ್ರದ ಬಗ್ಗೆ ಕೆಟ್ಟ ಇಮೇಜ್ ಬರುವಂತೆ ಆಗುವುದನ್ನು ತಡೆಯಬೇಕು ಎನ್ನುವುದು ಭಕ್ತರ ಆಗ್ರಹವಾಗಿದೆ.

# ಹತ್ತಿ ಮಿಷನ್ ಯೋಜನೆಯ ಲಾಭ ಪಡೆಯಿರಿ: ಪ್ರಕಾಶ ಚವ್ಹಾಣ್ ಕರೆ




**ರಾಯಚೂರು, ಜೂ. 17:** ಕೇಂದ್ರ ಕೃಷಿ ಸಚಿವಾಲಯವು ವಿಶೇಷ ಹತ್ತಿ ಮಿಷನ್ ಯೋಜನೆಯಡಿ ಪ್ರಸಕ್ತ ವರ್ಷದಿಂದ ಜಿಲ್ಲೆಗೆ 6,200 ಹೆಕ್ಟೇರ್ ಪ್ರದೇಶದಲ್ಲಿ ಅಧಿಕ ಸಾಂದ್ರತೆ ಹತ್ತಿ ಬೆಳೆದು ಉತ್ಪಾದಕತೆ ಹೆಚ್ಚಿಸಲು ಐದು ವರ್ಷಗಳ ಅವಧಿಯ ಯೋಜನೆಯನ್ನು ಜಾರಿಗೊಳಿಸಿದೆ. ರೈತರು ಇದರ ಪೂರ್ಣ ಲಾಭ ಪಡೆದುಕೊಳ್ಳಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ ಚವ್ಹಾಣ್ ಸಲಹೆ ನೀಡಿದರು.

ರಾಯಚೂರಿನ ಕೃಷಿ ವಿಜ್ಞಾನ ಕೇಂದ್ರದ ಸಭಾಂಗಣದಲ್ಲಿ ಕೃಷಿ ಇಲಾಖೆ, ಐಸಿಎಆರ್–ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಿದ್ದ ಅಧಿಕ ಸಾಂದ್ರತೆ ಹತ್ತಿ ಬೆಳೆ ಪದ್ಧತಿ ಕುರಿತು ತರಬೇತಿ ಹಾಗೂ ಸಂವಾದ ಕಾರ್ಯಕ್ರಮದಲ್ಲಿ, ಅಧಿಕ ಸಾಂದ್ರತೆ ಹತ್ತಿ ಬೆಳೆದರೆ ಹೆಕ್ಟೇರ್ 18,000 ಹಾಗೂ ಕಡಿಮೆ ಅಂತರದಲ್ಲಿ ನಾಟಿ ಮಾಡಿದರೆ ಹೇಕ್ಟರ್‌ಗೆ 14,000 ಸಹಾಯ ಧನ ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಬಿತ್ತನೆ ಕಾರ್ಯ ಚುರುಕುಗೊಂಡಿದೆ. ಕೃಷಿ ಅಧಿಕಾರಿಗಳು ಹೆಚ್ಚು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ರೈತರಿಗೆ ಸಕಾಲದಲ್ಲಿ ಮಾಹಿತಿ ಒದಗಿಸಿ, ರೈತರು ಹೆಚ್ಚಿನ ಪ್ರಮಾಣದಲ್ಲಿ ಹತ್ತಿ ಬೆಳೆಯುವಂತೆ ಮಾಡಿ ಹತ್ತಿ ಉತ್ಪಾದಕತೆ ದ್ವಿಗುಣಗೊಳಿಸುವಲ್ಲಿ ನೆರವಾಗಬೇಕು ಎಂದು ಸಲಹೆ ನೀಡಿದರು.

**ಕೆಲಸದ ಗುಣಮಟ್ಟ ಮತ್ತು ವೇಗದ ಕುರಿತು ವಾರಕ್ಕೊಮ್ಮೆ ಪರಿಶೀಲನೆ**

# ಶ್ರೀ ಪದ್ಮಾವತಿ ಮಕ್ಕಳ ಆಸ್ಪತ್ರೆಯ ನಿರ್ಮಾಣ ಕಾರ್ಯ ವೇಗಗೊಳಿಸಲು ಜೆಇಓ ಡಾ.ಎ.ಶರತ್ ಆದೇಶ

**ತಿರುಪತಿ, ಜೂ.17.** ತಿರುಪತಿಯಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ನಿರ್ಮಾಣ ಹಂತದಲ್ಲಿರುವ ಶ್ರೀ ಪದ್ಮಾವತಿ ಮಕ್ಕಳ ಆಸ್ಪತ್ರೆಯ ಹೊಸ ಕಟ್ಟಡದ ಕೆಲಸವನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಿ ಲಭ್ಯವಾಗುವಂತೆ ಟಿಟಿಡಿ ಜೆಇಓ ಡಾ. ಎ. ಶರತ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಟಿಟಿಡಿ ಇಓ ಎಂ. ರವಿಚಂದ್ರ ಅವರ ಸೂಚನೆಯ ಮೇರೆಗೆ, ಅವರು ಬುಧವಾರ ಎಂಜಿನಿಯರಿಂಗ್ ಅಧಿಕಾರಿಗಳೊಂದಿಗೆ ಕ್ಷೇತ್ರ ಮಟ್ಟದಲ್ಲಿ ನಿರ್ಮಾಣ ಕಾರ್ಯದ ಪ್ರಗತಿಯನ್ನು ಪರಿಶೀಲಿಸಿ ಪರಿಶೀಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಜೆಇಓ, ಮಕ್ಕಳಿಗೆ ಅತ್ಯುತ್ತಮ ವೈದ್ಯಕೀಯ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ನಿರ್ಮಿಸಲಾಗುತ್ತಿರುವ ಈ ಆಸ್ಪತ್ರೆಯ ಕಟ್ಟಡ ಕಾರ್ಯವನ್ನು ಯಾವುದೇ ವಿಳಂಬವಿಲ್ಲದೆ ತ್ವರಿತವಾಗಿ ಪೂರ್ಣಗೊಳಿಸಬೇಕೆಂದು ಸೂಚಿಸಿದರು. ಕಾಮಗಾರಿಯ ಪ್ರಗತಿಯನ್ನು ಅಧಿಕಾರಿಗಳು, ಎಂಜಿನಿಯರ್‌ಗಳು ಮತ್ತು ಗುತ್ತಿಗೆದಾರರೊಂದಿಗೆ ಪರಿಶೀಲಿಸಿ ನಿಗದಿತ ವೇಳಾಪಟ್ಟಿಯ ಪ್ರಕಾರ ಪೂರ್ಣಗೊಳಿಸಬೇಕು ಎಂದು ಅವರು ಸ್ಪಷ್ಟಪಡಿಸಿದರು.

ಅಭಿವೃದ್ಧಿ ಕಾರ್ಯಗಳ ವೇಗವನ್ನು ಮತ್ತಷ್ಟು ಹೆಚ್ಚಿಸಲು, ಅಗತ್ಯ ತಜ್ಞರು, ಕಾರ್ಮಿಕರು ಮತ್ತು ನಿರ್ಮಾಣ ಉಪಕರಣಗಳನ್ನು ತಕ್ಷಣವೇ ಒದಗಿಸಬೇಕು. ವೈದ್ಯಕೀಯ ಮೂಲಸೌಕರ್ಯ, ಪೀಠೋಪಕರಣಗಳು, ವಿದ್ಯುತ್, ಚಿತ್ರಕಲೆ, ತೋಟಗಾರಿಕೆ, ಶುಚಿಗೊಳಿಸುವಿಕೆ, ನಿರ್ವಹಣೆ ಮುಂತಾದ ಮೂಲ ಸೌಕರ್ಯ ಕಾರ್ಯಗಳನ್ನು ಸಮಾನಾಂತರವಾಗಿ ಪೂರ್ಣಗೊಳಿಸಬೇಕು ಎಂದು ಅವರು ಸೂಚಿಸಿದರು.

ಕಟ್ಟಡದ ನಿರ್ಮಾಣವನ್ನು ತ್ವರಿತವಾಗಿ ಪೂರ್ಣಗೊಳಿಸಲು ವಿಶೇಷ ಕ್ರಿಯಾ ಯೋಜನೆಯನ್ನು ಜಾರಿಗೆ ತರಬೇಕು ಮತ್ತು ಪ್ರತಿ ವಾರ ಪ್ರಗತಿಯ ಕುರಿತು ಪರಿಶೀಲನೆ ನಡೆಸಲಾಗುವುದು ಎಂದು ಅವರು ಹೇಳಿದರು. ವಾರಕ್ಕೊಮ್ಮೆ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ ಕೆಲಸದ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುವುದು ಮತ್ತು ಅಗತ್ಯ ವ್ಂಾ ಗ್ ್ ಸ್ ೂ ಚಿ ಗ್ ಳ್ ನ್ ್ನ ಒದಗಿಸಲಾಗುವುದು ಎಂದು ಅವರು ಹೇಳಿದರು.

ಪ್ರತಿ ಮಹಡಿಯಲ್ಲಿ ನಡೆಯುತ್ತಿರುವ ಕೆಲಸದ ಕುರಿತು ಕಾಲಕಾಲಕ್ಕೆ ವರದಿಗಳನ್ನು ಸಲ್ಲಿಸುವಂತೆ ಎಂಜಿನಿಯರಿಂಗ್ ಅಧಿಕಾರಿಗಳಿಗೆ ಆದೇಶಿಸಿದ ಜೆಇಓ, ಗುಣಮಟ್ಟದ ಬಗ್ಗೆ ಯಾವುದೇ ರಾಜಿ ಮಾಡಿಕೊಳ್ಳಬಾರದು ಮತ್ತು ಎಂಜಿನಿಯರಿಂಗ್ ಕೆಲಸದಲ್ಲಿ ಯಾವುದೇ ಸಡಿಲತೆ ಇರಬಾರದು ಎಂದು ಸ್ಪಷ್ಟಪಡಿಸಿದರು.

# ಪುರಾತತ್ವ ಇಲಾಖೆಯ ನಿರ್ಲಕ್ಷ್ಯ, ಸಾವಿರಾರು ಎಕರೆ ಜಮೀನು ಅತಿಕ್ರಮಣ

**ರಾಯಚೂರು, ಜೂ. 17:** ಪುರಾತತ್ವ ಇಲಾಖೆಯ ನಿರ್ಲಕ್ಷ್ಯದಿಂದಗಿ ಮತ್ತು ರಾಜಕೀಯ ಒತ್ತಡದಿಂದಾಗಿ, ತಾಲ್ಲೂಕಿನಲ್ಲಿರುವ ರಾಜ್ಯ ಪುರಾತತ್ವ ಇಲಾಖೆಗೆ ಸೇರಿದ ಸಾವಿರಾರು ಎಕರೆ ಜಮೀನನ್ನು ಖಾಸಗಿ ವ್ಯಕ್ತಿಗಳು ಅತಿಕ್ರಮಣ ಮಾಡಿಕೊಂಡಿದೆ. ಇದೆಲ್ಲ ಇಲಾಖೆಯ ಕಣ್ಣೆದುರೇ ನಡೆಯುತ್ತಿದರೂ ಇಲಾಖೆ ಮೌನವಾಗಿದೆ.

ರಾಯಚೂರು ಕೋಟೆ ಸುತ್ತಮುತ್ತಲಿನ ಒಂದಿಷ್ಟು ಜಾಗವನ್ನೂ ಅತಿಕ್ರಮಣಕಾರರು ಬಿಟ್ಟಿಲ್ಲ. ಮುಖ್ಯವಾಗಿ ರಾಜಕಾರಣಿಗಳೇ ಪುರಾತತ್ವ ಇಲಾಖೆಯ ಜಾಗವನ್ನು ಒತ್ತುವರಿ ಮಾಡಿಕೊಂಡು ಬಹುಮಹಡಿ ಕಟ್ಟಡ, ಆಸ್ಪತ್ರೆ, ಹೋಟೆಲ್‌ಗಳನ್ನು ಕಟ್ಟಿಕೊಂಡಿದ್ದಾರೆ.

ಪುರಾತತ್ವ ಇಲಾಖೆಯ ಅಧಿಕಾರಿಗಳಿಗೂ ಗೊತ್ತಿದ್ದರೂ ಮೌನ ಸಮ್ಮತಿ ಒದಗಿಸಿದ್ದು, ಸ್ಮಾರಕಗಳಿಗೆ ಅಪಾಯ ತಂದೊಡ್ಡಿದೆ.

ಮೂರು ಸುತ್ತಿನ ರಾಯಚೂರು ಕೋಟೆಯಲ್ಲಿ ಅಲ್ಲಲ್ಲಿ ಗೋಡೆಗಳು ಮಾತ್ರ ಉಳಿದುಕೊಂಡಿವೆ. ಕೋಟೆ ಗೋಡೆಗಳ ಕಲ್ಲುಗಳನ್ನು ಒಯ್ದು ಮನೆ ಕಟ್ಟಿಕೊಂಡರೂ ಕೇಳುವವರಿಲ್ಲ. ಪುರಾತತ್ವ ಇಲಾಖೆಯ ಕಚೇರಿಯ ಕೂಗಳತೆಯಲ್ಲೇ ನವರಂಗ ದರ್ವಾಜಾಕ್ಕೆ ತಾಗಿಕೊಂಡೇ ಶಾಲಾ ಕಟ್ಟಡ ನಿರ್ಮಿಸಲಾಗಿದೆ. ಈಚೆಗೆ ಬಹುಮಹಡಿಯ ಕಟ್ಟಡ ಸಹ ಕಟ್ಟಲಾಗಿದೆ.

ರಾಯಚೂರು ತಾಲ್ಲೂಕಿನ ಮಲಿಯಾಬಾದ್‌ನಲ್ಲಿ 1200




ಎಕರೆ ಜಮೀನು ಅತಿಕ್ರಮಣಕಾರರ ಪಾಲಾಗಿದೆ. ಮ್ಯಾಪಿಂಗ್ ಮಾಡಲು ಹೊರಟಿರುವ ಪುರಾತತ್ವ ಇಲಾಖೆಯ ಅಧಿಕಾರಿಗಳಿಗೂ ಸರಿಯಾದ ಮಾಹಿತಿ ಸಿಗದಂತಹ ಸ್ಥಿತಿ ನಿರ್ಮಾಣವಾಗಿದೆ.

ಆಶ್ಚರ್ಯವೆಂದರೆ ಪುರಾತತ್ವ ಇಲಾಖೆಯ ಜಾಗವನ್ನು ಕಬಳಿಸುವಲ್ಲಿ ಸರ್ಕಾರಿ ಇಲಾಖೆಗಳೂ ಹಿಂದೆ ಬಿದ್ದಿಲ್ಲ. ಗುಬ್ಬೇರ ಗುಡ್ಡದ ಕೋಟೆ ಮೇಲೆಯೇ ವೈರ್‌ಲೆಸ್ ಟವರ್ ನಿರ್ಮಿಸಿ, ಚಿಕ್ಕದಾದ ಕಟ್ಟಡ ಕಟ್ಟಲಾಗಿದೆ. ಬಸ್ ನಿಲ್ದಾಣದ ಬಳಿ ಇಂದಿರಾ ಕ್ಯಾಂಟೀನ್ ನಿರ್ಮಿಸಲಾಗಿದೆ. ಹೀಗೆ ಹೇಳುತ್ತ ಹೋದರೆ ದೊಡ್ಡ ಪಟ್ಟಿಯೇ ಸಿದ್ಧವಾಗುತ್ತಿದೆ.

ಕಳೆದ ವರ್ಷ ಕೋಟೆ ಪಕ್ಕದಲ್ಲಿ ಕೆಲವರು ದರ್ಗಾದ ಕಮಾನು ನಿರ್ಮಿಸಲು ಮುಂದಾದಾಗ ನಗರ ಶಾಸಕ ಶಿವರಾಜ ಪಾಟೀಲ ಸೇರಿದಂತೆ ಕೆಲವರು ನೇರವಾಗಿಯೇ ಪ್ರತಿಭಟನೆ ನಡೆಸಿದ್ದರು. ಈ ವಿಷಯದಲ್ಲಿ ಅಧಿಕಾರಿಗಳು ಸಹ ಹೆಚ್ಚು ತಲೆ ಕೆಡಿಸಿಕೊಂಡಿರಲಿಲ್ಲ. ಕಣ್ಣುಮುಂದೆಯೇ ಅತಿಕ್ರಮಣ ನಡೆದರೂ ಅತಿಕ್ರಮಣಕಾರರಿಗೆ ನೋಟಿಸ್ ಕೊಟ್ಟಿರುವ ಒಂದು ದಾಖಲೆಯೂ ರಾಜ್ಯ ಪುರಾತತ್ವ ಇಲಾಖೆಯ ಬಳಿ ಇಲ್ಲ. ರಾಜ್ಯ ಸರ್ಕಾರ ಸಿಬ್ಬಂದಿಯನ್ನೇ ನೇಮಕ ಮಾಡಿಲ್ಲ. ಕಡಿಮೆ ಸಂಖ್ಯೆಯಲ್ಲಿರುವ ನಾವೇನು ಮಾಡಲು ಸಾಧ್ಯ ಎಂದು ಇಲಾಖೆಯ ಸಿಬ್ಬಂದಿ ನೇರವಾಗಿಯೇ ಪ್ರಶ್ನಿಸುತ್ತಾರೆ.

ರಾಜ್ಯ ಪುರಾತತ್ವ ಇಲಾಖೆಯ ಅಧೀನದಲ್ಲಿರುವ ಸ್ಮಾರಕಗಳ ಸಂರಕ್ಷಣೆ ಹಾಗೂ ಅತಿಕ್ರಮಣ ತಡೆಗೆ ಜಿಲ್ಲಾಡಳಿತ ನೇರವಾಗಿ ಕ್ರಮ ಕೈಗೊಳ್ಳಬೇಕು. ಜಿಲ್ಲಾಧಿಕಾರಿ ಸ್ಮಾರಕ ಸಂರಕ್ಷಣೆಯ ಸಮಿತಿಯ ಅಧ್ಯಕ್ಷರೂ ಆಗಿರುವ ಕಾರಣ ಅವರೇ ವಿಶೇಷ ಅಧಿಕಾರಿಯನ್ನು ನಿಯೋಜಿಸಿ ಸ್ಮಾರಕ ಹಾಗೂ ಸ್ಮಾರಕದ ಜಾಗ ಉಳಿಸಿಕೊಳ್ಳಬೇಕಿದೆ' ಎಂದು ರಾಯಚೂರು ಕೋಟೆ ಅಧ್ಯಯನ ಸಮಿತಿ ಗೌರವ ಅಧ್ಯಕ್ಷ ಜಯಣ್ಣ ಹೇಳುತ್ತಾರೆ.

ಎಲ್ಲವೂ ರಾಜ್ಯ ಪುರಾತತ್ವ ಇಲಾಖೆಯ ಗಮನಕ್ಕೆ ಇದೆ. ಇಲಾಖೆಯಲ್ಲಿ ಹಲವು ಹುದ್ದೆಗಳು ಖಾಲಿ ಇವೆ. ಸಿಬ್ಬಂದಿ ಕೊರತೆಯಿಂದಾಗಿ ಎಲ್ಲವನ್ನೂ ನೋಡಿಕೊಳ್ಳಲು ಸಾಧ್ಯವಾಗುತ್ತಿಲ್ಲ' ಎಂದು ರಾಜ್ಯ ಪುರಾತತ್ವ ಇಲಾಖೆಯ ರಾಯಚೂರಿನ ಪ್ರಭಾರ ಅಧಿಕಾರಿ ಶಿವಪ್ರಕಾಶ ಅಸಹಾಯತೆ ವ್ಯಕ್ತಪಡಿಸುತ್ತಾರೆ.


ರಾಷ್ಟ್ರೀಯ ಕಾಂಗ್ರೆಸ್‌ನ ಸರ್ವೋಚ್ಚ ನಾಯಕ
ಮತ್ತು ಲೋಕಸಭಾ ವಿರೋಧ ಪಕ್ಷದ ನಾಯಕರಾದ
ಶ್ರೀ ರಾಹುಲ್ ಗಾಂಧಿ
ಅವರಿಗೆ...
19.6.2026
ಜನುಮದಿನದ
ಶುಭಾಶಯಗಳು
ಶುಭ ಕೋರುವವರು:
ಎನ್.ಎ.ಹ್ಯಾರಿಸ್
ಅಧ್ಯಕ್ಷರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಶಾಸಕರು,
ಶಾಂತಿನಗರ ವಿಧಾನಸಭಾ ಕ್ಷೇತ್ರ, ಬೆಂಗಳೂರು, ಕರ್ನಾಟಕ